Volume : 9 | Issue : 183 | October : 08 : 2026 : Thursday
ಸಂಪುಟ : 9 | ಸಂಚಿಕೆ : 183 | ಅಕ್ಟೋಬರ್ : 08 : 2026 : ಗುರುವಾರ
www.VIKRAMAVAHINI.com
ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ
ವಿಕ್ರಮ ವಾಹಿನಿ
ಪುಟ 4 ₹2 || ಕನ್ನಡ ದಿನಪತ್ರಿಕೆ ||
VIKRAMA VAHINI
PRGI NO: KARKAN/2018/78481





‘ಪ್ರೇಮಲು’ ಯಶಸ್ಸಿನ ಬಳಿಕ ಬೇಡಿಕೆ ಹೆಚ್ಚಿಸಿಕೊಂಡಿರುವ ನಟಿ ಮಮಿತಾ ಬೈಜು, ಇದೀಗ ಪ್ರತಿ ಸಿನಿಮಾಕ್ಕೆ ರೂ 3-4 ಕೋಟಿ ಸಂಭಾವನೆ ಪಡೆಯುತ್ತಿದ್ದಾರೆ ಎನ್ನಲಾಗಿದೆ. 2024ರಲ್ಲಿ ‘ಪ್ರೇಮಲು’ ಚಿತ್ರಕ್ಕೆ ರೂ 8 ಲಕ್ಷ ಪಡೆದಿದ್ದ ಅವರ ಸಂಭಾವನೆ ಕೇವಲ ಎರಡು ವರ್ಷಗಳಲ್ಲಿ ಭಾರಿ ಏರಿಕೆ ಕಂಡಿದೆ.

**‘ನೈಸ್’ನಿಂದ ರೂ 4,756 ಕೋಟಿ ಟೋಲ್ ವಸೂಲಿ’** ಪುಟ 4

**ದಸರಾ ವೇಳೆ ಕಂಬಳ ಆಯೋಜನೆಗೆ ಯದುವೀರ್ ಆಕ್ಷೇಪ** ಪುಟ 2

## ■ ಸುದ್ದಿ ಚುಟುಕು

### ಹೆನ್ರಿ ಕಗನ್, ಕೆನ್ನೊ ಸೊವ್ಯೆಗೆ ರಸಾಯನಶಾಸ್ತ್ರ ನೊಬೆಲ್

● ವಿಕ್ರಮ ವಾಹಿನಿ । ಬೆಂಗಳೂರು

2026ರ ರಸಾಯನಶಾಸ್ತ್ರ ನೊಬೆಲ್ ಪ್ರಶಸ್ತಿಗೆ ಹೆನ್ರಿ ಕಗನ್ ಮತ್ತು ಕೆನ್ನೊ ಸೊವ್ಯೆ ಆಯ್ಕೆಯಾಗಿದ್ದಾರೆ ಎಂಬ ಮಾಹಿತಿ ಹರಿದಾಡುತ್ತಿದ್ದರೂ, ಈ ಕುರಿತು ಅಧಿಕೃತ ನೊಬೆಲ್ ಮೂಲದಲ್ಲಿ ದೃಢೀಕರಣ ಲಭ್ಯವಾಗಿಲ್ಲ.

2025ರ ರಸಾಯನಶಾಸ್ತ್ರ ನೊಬೆಲ್ ಪ್ರಶಸ್ತಿಯನ್ನು ಸುಸುಮು ಕಿತಗಾವಾ, ರಿಚರ್ಡ್ ರಾಬ್ಸನ್ ಮತ್ತು ಒಮರ್ ಎಂ. ಯಾಘಿ ಅವರಿಗೆ ಲೋಹ–ಸಾವಯವ ಚೌಕಟ್ಟುಗಳ (Metal-Organic Frameworks) ಅಭಿವೃದ್ಧಿಗಾಗಿ ನೀಡಲಾಗಿತ್ತು. ಈ ವಸ್ತುಗಳು ಅನಿಲ ಸಂಗ್ರಹ, ಇಂಗಾಲದ ಡೈಆಕ್ಸೈಡ್ ಸೆರೆಹಿಡಿಯುವಿಕೆ, ನೀರು ಸಂಗ್ರಹ ಸೇರಿದಂತೆ ಹಲವು ಕ್ಷೇತ್ರಗಳಲ್ಲಿ ಬಳಕೆಯಾಗುವ ಸಾಧ್ಯತೆ ಹೊಂದಿವೆ.

ಆಲ್ಫ್ರೆಡ್ ನೊಬೆಲ್ ಅವರ ಉಯಿಲಿನ ಅನ್ವಯ 1901ರಿಂದ ವಿಜ್ಞಾನ, ಸಾಹಿತ್ಯ ಮತ್ತು ಶಾಂತಿ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಮಾನವಕುಲಕ್ಕೆ ಮಹತ್ವದ ಕೊಡುಗೆ ನೀಡಿದ ಸಾಧಕರನ್ನು ನೊಬೆಲ್ ಪ್ರಶಸ್ತಿಯ ಮೂಲಕ ಗೌರವಿಸಲಾಗುತ್ತಿದೆ.

### ಬೆಂಗಳೂರಲ್ಲಿ ವಿದ್ಯುತ್ ಜಂಕ್ಷನ್ ಬಾಕ್ಸ್ ಸ್ಫೋಟ

● ವಿಕ್ರಮ ವಾಹಿನಿ । ಬೆಂಗಳೂರು

ನಗರದ ಬಾಗಲೂರು ಮುಖ್ಯ ರಸ್ತೆಯ ಅಮೆಜಾನ್ ಕಚೇರಿ ಗೇಟ್ ಸಂಖ್ಯೆ 3ರ ಹೊರಭಾಗದ ಫುಟ್‌ಪಾತ್‌ನಲ್ಲಿ ಬುಧವಾರ ಬೆಳಗ್ಗೆ ವಿದ್ಯುತ್ ಜಂಕ್ಷನ್ ಬಾಕ್ಸ್ ಏಕಾಏಕಿ ಸ್ಫೋಟಗೊಂಡು ಇಬ್ಬರು ಪಾದಚಾರಿಗಳು ಗಾಯಗೊಂಡಿದ್ದಾರೆ.

ಬೆಳಗ್ಗೆ ಸುಮಾರು 9.50ರ ವೇಳೆಗೆ ಸಂಭವಿಸಿದ ಸ್ಫೋಟದ ತೀವ್ರತೆಗೆ ಸ್ಥಳದಲ್ಲಿ ನಡೆದುಕೊಂಡು ಹೋಗುತ್ತಿದ್ದ ವ್ಯಕ್ತಿಯೊಬ್ಬರ ಕೈಗೆ ಗಂಭೀರ ಗಾಯವಾಗಿದ್ದು, ಮಹಿಳೆಯೊಬ್ಬರಿಗೆ ಸಣ್ಣಪುಟ್ಟ ಗಾಯಗಳಾಗಿವೆ. ಸಮೀಪದಲ್ಲಿದ್ದ ವಿದ್ಯಾರ್ಥಿನಿ ಸೇರಿದಂತೆ ಮತ್ತಿಬ್ಬರು ಪಾದಚಾರಿಗಳು ಕೂದಲೆಳೆ ಅಂತರದಲ್ಲಿ ಅಪಾಯದಿಂದ ಪಾರಾಗಿದ್ದಾರೆ.

ಸ್ಫೋಟ ಸಂಭವಿಸುತ್ತಿದ್ದಂತೆ ಸ್ಥಳೀಯರು ಗಾಯಾಳುಗಳನ್ನು ಸಮೀಪದ ಆಸ್ಪತ್ರೆಗೆ ದಾಖಲಿಸಿದ್ದಾರೆ. ಘಟನೆಯ ದೃಶ್ಯಾವಳಿಗಳು ಸಮೀಪದಲ್ಲಿ ಸಂಚರಿಸುತ್ತಿದ್ದ ಕಾರಿನ ಡ್ಯಾಶ್‌ಕ್ಯಾಮ್‌ನಲ್ಲಿ ಸೆರೆಯಾಗಿವೆ.

ಸುದ್ದಿ ತಿಳಿದು ಯಲಹಂಕ ಉಪನಗರ ಠಾಣೆ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, ಸ್ಫೋಟಕ್ಕೆ ನಿಖರ ಕಾರಣವೇನು ಎಂಬುದರ ಕುರಿತು ತನಿಖೆ ಆರಂಭಿಸಿದ್ದಾರೆ.

**ರಾಮಮೂರ್ತಿನಗರದಲ್ಲೂ ಸ್ಫೋಟ:** ನಗರದ ರಾಮಮೂರ್ತಿನಗರ ಠಾಣಾ ವ್ಯಾಪ್ತಿಯ ಬೆನ್ನಿಗಾನಹಳ್ಳಿಯ ಕೊಕಾಕೋಲಾ ಗೋದಾಮು ಬಳಿ ಮಂಗಳವಾರ ವಿದ್ಯುತ್ ಟ್ರಾನ್ಸ್‌ಫಾರ್ಮರ್ ಸ್ಫೋಟಗೊಂಡು ನಾಲ್ವರು ಗಾಯಗೊಂಡಿದ್ದರು. ಪವರ್ ಲೋಡ್ ಹೆಚ್ಚಳವೇ ಸ್ಫೋಟಕ್ಕೆ ಪ್ರಾಥಮಿಕ ಕಾರಣ ಎಂದು ಪೊಲೀಸರು ತಿಳಿಸಿದ್ದರು. ಗಾಯಾಳುಗಳನ್ನು ಹೆಚ್ಚಿನ ಚಿಕಿತ್ಸೆಗಾಗಿ ವಿಕ್ಟೋರಿಯಾ ಆಸ್ಪತ್ರೆಗೆ ದಾಖಲಿಸಲಾಗಿತ್ತು.

### ಡಿಸಿ ಕಚೇರಿಯಲ್ಲಿ ಲಂಚ; ಸಿಬ್ಬಂದಿ ಬಲೆ

● ವಿಕ್ರಮ ವಾಹಿನಿ । ತುಮಕೂರು

ಪಟಾಕಿ ಅಂಗಡಿಗಳ ಪರವಾನಗಿ ನೀಡಲು ಲಂಚ ಪಡೆಯುತ್ತಿದ್ದ ಆರೋಪದ ಮೇರೆಗೆ ಜಿಲ್ಲಾಧಿಕಾರಿ ಕಚೇರಿಯ ಕಂದಾಯ ಇಲಾಖೆ ಕಚೇರಿ ಸಹಾಯಕ ಬಿ.ಮುರಳಿಧರ್ ಅವರನ್ನು ಲೋಕಾಯುಕ್ತ ಪೊಲೀಸರು ವಶಕ್ಕೆ ಪಡೆದಿದ್ದಾರೆ.

ಹೆಗ್ಗೆರೆ ನಿವಾಸಿ ಉಮಾಶಂಕರ್ ಅವರಿಂದ ಎರಡು ಪಟಾಕಿ ಅಂಗಡಿಗಳ ಪರವಾನಗಿಗೆ ತಲಾ ರೂ 2 ಸಾವಿರದಂತೆ ಒಟ್ಟು ರೂ 4 ಸಾವಿರ ಲಂಚಕ್ಕೆ ಬೇಡಿಕೆ ಇಟ್ಟಿದ್ದರು ಎನ್ನಲಾಗಿದೆ. ಈ ಪೈಕಿ ಮುಂಗಡವಾಗಿ ರೂ 1 ಸಾವಿರ ಪಡೆದಿದ್ದ ಸಿಬ್ಬಂದಿ, ಬಾಕಿ ರೂ 3 ಸಾವಿರ ಪಡೆಯುತ್ತಿದ್ದ ವೇಳೆ ಲೋಕಾಯುಕ್ತರ ಬಲೆಗೆ ಸಿಕ್ಕಿಬಿದ್ದಿದ್ದಾರೆ.

ತುಮಕೂರು ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲೇ ಲೋಕಾಯುಕ್ತ ತಂಡ ಕಾರ್ಯಾಚರಣೆ ನಡೆಸಿದ್ದು, ಆರೋಪಿ ಮುರಳಿಧರ್ ಅವರಿಂದ ಲಂಚದ ಹಣವನ್ನು ವಶಪಡಿಸಿಕೊಂಡಿದೆ. ಪ್ರಕರಣಕ್ಕೆ ಸಂಬಂಧಿಸಿದಂತೆ ತುಮಕೂರು ಲೋಕಾಯುಕ್ತ ಪೊಲೀಸರು ಪ್ರಕರಣ ದಾಖಲಿಸಿಕೊಂಡು ತನಿಖೆ ಮುಂದುವರಿಸಿದ್ದಾರೆ.

ಲಂಚದ ಹಣ ಸ್ವೀಕರಿಸುತ್ತಿದ್ದ ಸಂದರ್ಭದಲ್ಲೇ ಸಿಬ್ಬಂದಿಯನ್ನು ವಶಕ್ಕೆ ಪಡೆದು, ಸಂಬಂಧಿಸಿದ ದಾಖಲೆಗಳು ಹಾಗೂ ಹಣದ ಕುರಿತು ಪರಿಶೀಲನೆ ನಡೆಸಿದ್ದಾರೆ.

# ಹಣದುಬ್ಬರ–ಆರ್‌ಬಿಐ ಶಾಕ್: ಇಎಂಐ ಏರಿಕೆ

● ವಿಕ್ರಮ ವಾಹಿನಿ । ನವದೆಹಲಿ



**ಆರ್‌ಬಿಐ ಹಣಕಾಸು ನೀತಿ ಸಮಿತಿ ರೆಪೋ ದರವನ್ನು 25 ಬೇಸಿಸ್ ಪಾಯಿಂಟ್‌ಗಳಷ್ಟು ಹೆಚ್ಚಿಸಿ ಶೇ.5.50ಕ್ಕೆ ನಿಗದಿಪಡಿಸಿದೆ. ಇದರ ಪರಿಣಾಮ ಫ್ಲೋಟಿಂಗ್ ದರದ ಗೃಹ ಹಾಗೂ ವಾಹನ ಸಾಲಗಳ ಬಡ್ಡಿದರ ಮತ್ತು ಇಎಂಐ ಹೆಚ್ಚಾಗುವ ಸಾಧ್ಯತೆಯಿದೆ. ರೂ 50 ಲಕ್ಷದ 25 ವರ್ಷಗಳ ಗೃಹ ಸಾಲದ ಇಎಂಐ ಸುಮಾರು ರೂ 36,950ರಿಂದ ರೂ 37,766ಕ್ಕೆ, ರೂ 10 ಲಕ್ಷದ ಕಾರು ಸಾಲದ ಇಎಂಐ ರೂ 20,758ರಿಂದ ರೂ 20,875ಕ್ಕೆ ಏರಿಕೆಯಾಗಬಹುದು.**

ಭಾರತೀಯ ರಿಸರ್ವ್ ಬ್ಯಾಂಕ್ (ಆರ್‌ಬಿಐ) ಹಣಕಾಸು ನೀತಿ ಸಮಿತಿ (ಎಂಪಿಸಿ) ಬುಧವಾರ ರೆಪೋ ದರವನ್ನು 25 ಬೇಸಿಸ್ ಪಾಯಿಂಟ್‌ಗಳಷ್ಟು ಹೆಚ್ಚಿಸಿ ಶೇ.5.50ಕ್ಕೆ ನಿಗದಿಪಡಿಸಿದೆ. ಆರ್‌ಬಿಐ ಗವರ್ನರ್ ಸಂಜಯ್ ಮಲ್ಹೋತ್ರಾ ನೇತೃತ್ವದ ಸಮಿತಿ ಸರ್ವಾನುಮತದಿಂದ ಈ ನಿರ್ಧಾರ ಕೈಗೊಂಡಿದ್ದು, ಬದಲಾಗುವ ಬಡ್ಡಿದರದ ಗೃಹ ಮತ್ತು ವಾಹನ ಸಾಲಗಳ ಇಎಂಐ ಹೆಚ್ಚಾಗುವ ಸಾಧ್ಯತೆ ಇದೆ.

**ರೂ 50 ಲಕ್ಷ ಗೃಹ ಸಾಲಕ್ಕೆ ಎಷ್ಟು ಹೆಚ್ಚಳ?:** 25 ವರ್ಷಗಳ ಅವಧಿಗೆ ರೂ 50 ಲಕ್ಷ ಗೃಹ ಸಾಲ ಪಡೆದಿದ್ದು, ಬಡ್ಡಿದರ ಶೇ.7.50ರಷ್ಟಿದ್ದರೆ ಮಾಸಿಕ ಇಎಂಐ ಸುಮಾರು ರೂ 36,950 ಆಗುತ್ತದೆ.

ಬ್ಯಾಂಕ್ ಬಡ್ಡಿದರವನ್ನು ಶೇ.7.75ಕ್ಕೆ ಹೆಚ್ಚಿಸಿದರೆ ಇಎಂಐ ಸುಮಾರು ರೂ 37,766ಕ್ಕೆ ಏರಿಕೆಯಾಗಬಹುದು. ಅಂದರೆ ತಿಂಗಳಿಗೆ ಸುಮಾರು ರೂ 816 ಹೆಚ್ಚುವರಿ ಹೊರೆ ಬೀಳಲಿದೆ.

ಇದೇ ರೀತಿ 20 ವರ್ಷಗಳ ಅವಧಿಗೆ ರೂ 1 ಕೋಟಿ ಗೃಹ ಸಾಲ ಪಡೆದಿರುವ ಗ್ರಾಹಕರ ಬಡ್ಡಿದರ ಶೇ.8.50ರಿಂದ ಶೇ.8.75ಕ್ಕೆ ಏರಿದರೆ, ಇಎಂಐ ಸುಮಾರು ರೂ 86,782ರಿಂದ ರೂ 88,371ಕ್ಕೆ ಹೆಚ್ಚಾಗಬಹುದು. ಇದರಿಂದ ಮಾಸಿಕ ಕಂತಿನಲ್ಲಿ ಸುಮಾರು ರೂ 1,589 ಹೆಚ್ಚಳವಾಗಲಿದೆ.

**ವಾಹನ ಸಾಲಕ್ಕೂ ಬಡ್ಡಿ ಹೊರೆ:** 5 ವರ್ಷಗಳ ಅವಧಿಗೆ ರೂ 10 ಲಕ್ಷ ವಾಹನ ಸಾಲ ಪಡೆದಿದ್ದು, ಬಡ್ಡಿದರ ಶೇ.9ರಿಂದ ಶೇ.9.25ಕ್ಕೆ ಏರಿಕೆಯಾದರೆ ಇಎಂಐ ಸುಮಾರು ರೂ 20,758ರಿಂದ ರೂ 20,875ಕ್ಕೆ ಹೆಚ್ಚಾಗಬಹುದು. ಅಂದರೆ ತಿಂಗಳಿಗೆ ಸುಮಾರು ರೂ 117 ಹೆಚ್ಚುವರಿ ಪಾವತಿಸಬೇಕಾಗುತ್ತದೆ.

**ಸ್ಥಿರ ಬಡ್ಡಿದರದ ಸಾಲಕ್ಕೆ ನೇರ ಪರಿಣಾಮವಿಲ್ಲ**

ರೆಪೋ ದರ ಏರಿಕೆಯ ನೇರ ಪರಿಣಾಮ ಮುಖ್ಯವಾಗಿ ಬದಲಾಗುವ ಬಡ್ಡಿದರದ ಸಾಲಗಳ ಮೇಲಾಗುತ್ತದೆ. ಸ್ಥಿರ ಬಡ್ಡಿದರದಲ್ಲಿ ಪಡೆದ ಸಾಲಗಳ ಇಎಂಐ ಸಾಮಾನ್ಯವಾಗಿ ತಕ್ಷಣ ಬದಲಾಗುವುದಿಲ್ಲ. ಆದರೆ ಬ್ಯಾಂಕ್‌ಗಳು ತಮ್ಮ ಸಾಲದ ಬಡ್ಡಿದರವನ್ನು ಎಷ್ಟು ಮತ್ತು ಯಾವಾಗ ಹೆಚ್ಚಿಸುತ್ತವೆ ಎಂಬುದರ ಮೇಲೆ ನಿಜವಾದ ಪರಿಣಾಮ ಅವಲಂಬಿತವಾಗಿರುತ್ತದೆ.

**ರೆಪೋ ದರ ಎಂದರೇನು?:** ಬ್ಯಾಂಕ್‌ಗಳು ಆರ್‌ಬಿಐನಿಂದ ಅಲ್ಪಾವಧಿಗೆ ಹಣ ಪಡೆಯುವಾಗ ವಿಧಿಸಲಾಗುವ ಬಡ್ಡಿದರವನ್ನೇ ರೆಪೋ ದರ ಎಂದು ಕರೆಯಲಾಗುತ್ತದೆ. ರೆಪೋ ದರ ಹೆಚ್ಚಾದಾಗ ಬ್ಯಾಂಕ್‌ಗಳ ಹಣದ ವೆಚ್ಚ ಹೆಚ್ಚಾಗುವ ಸಾಧ್ಯತೆ ಇದ್ದು, ಅದರ ಪರಿಣಾಮವಾಗಿ ಗೃಹ, ವಾಹನ ಸೇರಿದಂತೆ ವಿವಿಧ ಸಾಲಗಳ ಬಡ್ಡಿದರಗಳು ಏರಿಕೆಯಾಗಬಹುದು.

ಸಾಲದ ಮೊತ್ತ, ಅವಧಿ, ಗ್ರಾಹಕರ ಕ್ರೆಡಿಟ್ ಸ್ಕೋರ್, ಸಾಲದ ವಿಧ ಹಾಗೂ ಬ್ಯಾಂಕ್‌ನ ಬಡ್ಡಿದರ ನೀತಿ ಸೇರಿದಂತೆ ಹಲವು ಅಂಶಗಳು ಇಎಂಐ ನಿರ್ಧಾರದಲ್ಲಿ ಪ್ರಮುಖ ಪಾತ್ರವಹಿಸುತ್ತವೆ. ಹೀಗಾಗಿ ರೆಪೋ ದರ ಶೇ.0.25ರಷ್ಟು ಏರಿಕೆಯಾದಷ್ಟೇ ಪ್ರಮಾಣದಲ್ಲಿ ಎಲ್ಲ ಸಾಲಗಳ ಇಎಂಐ ಕೂಡ ಹೆಚ್ಚಾಗುತ್ತದೆ ಎಂದು ಹೇಳಲಾಗದು.

# ‘ಸಿದ್ದು ವಿರುದ್ಧ ಡಿಕೆಶಿ ಸ್ಟಿಂಗ್ ಆಪರೇಷನ್’

## ಕಾಂಗ್ರೆಸ್ ಹೈಕಮಾಂಡ್, ಡಿಕೆಶಿ ಹಾಗೂ ಸುದ್ದಿವಾಹಿನಿ ಸೇರಿ ಸಂಚು; ಸ್ಟಿಂಗ್‌ನಲ್ಲಿ ಡಿಕೆಶಿ ‘ಮಾಸ್ಟರ್’

● ವಿಕ್ರಮ ವಾಹಿನಿ । ಬೆಂಗಳೂರು

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನಡೆಸಿದ ಸ್ಟಿಂಗ್ ಆಪರೇಷನ್‌ನ ಪರಿಣಾಮವಾಗಿಯೇ ಸಿದ್ದರಾಮಯ್ಯ ಮುಖ್ಯಮಂತ್ರಿ ಸ್ಥಾನದಿಂದ ಕೆಳಗಿಳಿಯುವಂತಾಯಿತು ಎಂದು ಕೇಂದ್ರ ಸಚಿವ ಹಾಗೂ ಜೆಡಿಎಸ್ ನಾಯಕ ಎಚ್.ಡಿ. ಕುಮಾರಸ್ವಾಮಿ ಗಂಭೀರ ಆರೋಪ ಮಾಡಿದರು.

ಜೆಡಿಎಸ್ ಕೇಂದ್ರ ಕಚೇರಿ ಜೆ.ಪಿ. ಭವನದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಿದ್ದರಾಮಯ್ಯ ಅವರನ್ನು ಮುಖ್ಯಮಂತ್ರಿ ಸ್ಥಾನದಿಂದ ಕೆಳಗಿಳಿಸಲು ಕಾಂಗ್ರೆಸ್ ಹೈಕಮಾಂಡ್, ಡಿ.ಕೆ. ಶಿವಕುಮಾರ್ ಹಾಗೂ ಸುದ್ದಿವಾಹಿನಿಯೊಂದು ಸೇರಿ ವ್ಯವಸ್ಥಿತ ಸಂಚು ರೂಪಿಸಿವೆ ಎಂದು ದೂರಿದರು.

ಸಂಪುಟ ವಿಸ್ತರಣೆ ಕುರಿತು ಚರ್ಚಿಸಲು ದೆಹಲಿಗೆ ಕರೆದಿದ್ದಾರೆ ಎಂದು ನಂಬಿ ತೆರಳಿದ್ದ ಸಿದ್ದರಾಮಯ್ಯ ಅವರಿಗೆ ಸ್ಟಿಂಗ್ ಆಪರೇಷನ್ ವಿಚಾರ ತಿಳಿಸಿ ರಾಜೀನಾಮೆ ಪಡೆಯಲಾಗಿದೆ. ಹಿರಿಯ ನಾಯಕನನ್ನು ಅತ್ಯಂತ ಅಪಮಾನಕರ ರೀತಿಯಲ್ಲಿ ಮುಖ್ಯಮಂತ್ರಿ ಸ್ಥಾನದಿಂದ ಕೆಳಗಿಳಿಸಲಾಗಿದೆ. ಇದು ಕಾಂಗ್ರೆಸ್ ನಡೆಸಿಕೊಂಡ ರೀತಿಯಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

**‘ಸ್ಟಿಂಗ್‌ನಲ್ಲಿ ಡಿಕೆಶಿ ಮಾಸ್ಟರ್’:** ತಮ್ಮ ಸಂಪುಟದ ಸಚಿವರ ವಿರುದ್ಧವೇ ಸ್ಟಿಂಗ್ ಆಪರೇಷನ್ ನಡೆಯುತ್ತಿದೆ ಎಂದು ಡಿ.ಕೆ. ಶಿವಕುಮಾರ್ ಸಂಪುಟ ಸಭೆಯಲ್ಲಿ ಹೇಳಿರುವುದು ಮಾಧ್ಯಮಗಳಲ್ಲಿ ವರದಿಯಾಗುತ್ತಿದ್ದಂತೆಯೇ ಕುಮಾರಸ್ವಾಮಿ ಈ ಆರೋಪ ಮಾಡಿದರು.

ಸ್ಟಿಂಗ್ ಆಪರೇಷನ್ ನಡೆಸುವುದರಲ್ಲಿ ಡಿ.ಕೆ. ಶಿವಕುಮಾರ್ ‘ಮಾಸ್ಟರ್’. ಹಿಂದೆ ರಮೇಶ್ ಜಾರಕಿಹೊಳಿ ಹಾಗೂ ರಾಜಣ್ಣ ಅವರ ವಿಚಾರದಲ್ಲಿಯೂ ಇದೇ ರೀತಿಯ ಬೆಳವಣಿಗೆ ನಡೆದಿತ್ತು. ಈಗ ತಮ್ಮ ಸಂಪುಟದ ಸಚಿವರ ಮೇಲೂ ಸ್ಟಿಂಗ್ ನಡೆಸಿ ಹಿಡಿತ ಸಾಧಿಸಲು ಪ್ರಯತ್ನಿಸುತ್ತಿದ್ದಾರೆ ಎಂದು ಆರೋಪಿಸಿದರು.

ತಮ್ಮ ವಿರುದ್ಧ ಸ್ಟಿಂಗ್ ಆಪರೇಷನ್ ಮಾಡಲಾಗಿದೆ ಎಂಬ ಆರೋಪವಿದ್ದರೆ ತನಿಖೆ ನಡೆಸಲಿ. ಸರ್ಕಾರದ ಬಳಿ ಎಸ್‌ಐಟಿ ಇದೆ. ಅದಕ್ಕೆ 35 ಲಕ್ಷ ಬಹುಮಾನ ನೀಡಲಾಗಿದೆ. ತನಿಖೆ ನಡೆಸಲು ಯಾರೂ ಅಡ್ಡಿಪಡಿಸುತ್ತಿಲ್ಲ. ವಿಧಾನಸಭೆಯಲ್ಲೇ ರಾಜಣ್ಣ ಅವರು ತಮ್ಮದು ಸೇರಿದಂತೆ ಇನ್ನೂ 40 ಮಂದಿಯ ಸ್ಟಿಂಗ್ ಮಾಡಿಸಲಾಗಿದೆ ಎಂದು ಹೇಳಿದ್ದರು. ಆ ಹೇಳಿಕೆಯ ಬಗ್ಗೆಯೂ ತನಿಖೆಯಾಗಲಿ ಎಂದು ಆಗ್ರಹಿಸಿದರು.



**ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನಡೆಸಿದ ಸ್ಟಿಂಗ್ ಆಪರೇಷನ್ ಪರಿಣಾಮವಾಗಿಯೇ ಸಿದ್ದರಾಮಯ್ಯ ಮುಖ್ಯಮಂತ್ರಿ ಸ್ಥಾನದಿಂದ ಕೆಳಗಿಳಿಯುವಂತಾಯಿತು ಎಂದು ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಆರೋಪಿಸಿದ್ದಾರೆ. ಕಾಂಗ್ರೆಸ್ ಹೈಕಮಾಂಡ್, ಡಿಕೆಶಿ ಹಾಗೂ ಸುದ್ದಿವಾಹಿನಿಯೊಂದು ಸೇರಿ ವ್ಯವಸ್ಥಿತ ಸಂಚು ರೂಪಿಸಿದೆ ಎಂದು ದೂರಿದ ಅವರು, ಸ್ಟಿಂಗ್ ಹಾಗೂ ಹನಿಟ್ರ್ಯಾಪ್‌ಗಳ ಬದಲು ಸರ್ಕಾರ ಅಭಿವೃದ್ಧಿ ವಿಚಾರಗಳತ್ತ ಗಮನಹರಿಸಬೇಕು ಎಂದರು.**

**‘ಅಭಿವೃದ್ಧಿ ಬದಲು ಸ್ಟಿಂಗ್ ಚರ್ಚೆ’:** ಹಿಂದೆ ಸಂಪುಟ ಸಭೆಗಳಲ್ಲಿ ರಾಜ್ಯದ ಅಭಿವೃದ್ಧಿ ವಿಚಾರಗಳ ಕುರಿತು ಚರ್ಚೆಯಾಗುತ್ತಿತ್ತು. ಈಗ ಸ್ಟಿಂಗ್ ಆಪರೇಷನ್, ಹನಿಟ್ರ್ಯಾಪ್‌ಗಳಂತಹ ವಿಚಾರಗಳು ಚರ್ಚೆಯಾಗುತ್ತಿರುವುದು ರಾಜ್ಯದ ದುರವಸ್ಥೆಗೆ ಸಾಕ್ಷಿ ಎಂದು ಕುಮಾರಸ್ವಾಮಿ ಟೀಕಿಸಿದರು.

ಸಿದ್ದರಾಮಯ್ಯ ಅವರಂತಹ ಹಿರಿಯ ನಾಯಕನ ವಿರುದ್ಧ ನಡೆದಿರುವ ಬೆಳವಣಿಗೆಗಳ ಹಿಂದೆ ಯಾರು ಇದ್ದಾರೆ, ಯಾವ ಮಾಧ್ಯಮ ಸಂಸ್ಥೆ ಭಾಗಿಯಾಗಿದೆ ಎಂಬುದು ಎಲ್ಲರಿಗೂ ಗೊತ್ತಿದೆ. ಕಾಂಗ್ರೆಸ್‌ನ ಕೆಲವರು ಈ ವಿಚಾರಗಳನ್ನು ತಮ್ಮೊಂದಿಗೆ ಹಂಚಿಕೊಂಡಿದ್ದಾರೆ. ತಮ್ಮಿಗೂ ಇದೇ ಪರಿಸ್ಥಿತಿ ಎದುರಾಗಬಹುದು ಎಂದು ಸಚಿವರಿಗೆ ಎಚ್ಚರಿಕೆ ನೀಡಲಾಗಿದೆ ಎಂಬ ಮಾಹಿತಿಯೂ ಇದೆ ಎಂದು ಹೇಳಿದರು.

ದೇವೇಗೌಡರ ಕುಟುಂಬವನ್ನು ರಾಜಕೀಯವಾಗಿ ಮುಗಿಸಲು ಹಿಂದೆಯೂ ಇದೇ ರೀತಿಯ ತಂತ್ರಗಳನ್ನು ಬಳಸಲಾಗಿತ್ತು. ಇದೀಗ ತಮ್ಮ ಸಂಪುಟದ ಸಚಿವರನ್ನು ನಿಯಂತ್ರಿಸಲು ಅದೇ ತಂತ್ರ ಅನುಸರಿಸಲಾಗುತ್ತಿದೆ ಎಂದು ಕುಮಾರಸ್ವಾಮಿ ಆರೋಪಿಸಿದರು.

ಮಾಜಿ ಶಾಸಕ ಸುರೇಶ್ ಗೌಡ, ಚೌಡರೆಡ್ಡಿ ತೂಪಲ್ಲಿ, ಗ್ರೇಟರ್ ಬೆಂಗಳೂರು ಜೆಡಿಎಸ್ ಅಧ್ಯಕ್ಷ ಎಚ್.ಎಂ. ರಮೇಶ್ ಗೌಡ, ರಾಜ್ಯ ವಕ್ತಾರ ಎಚ್.ಎನ್. ದೇವರಾಜು ಮತ್ತಿತರರು ಉಪಸ್ಥಿತರಿದ್ದರು.

### ವಿದ್ಯಾರ್ಥಿನಿಯನ್ನು ಶಾಸಕ ಮುಟ್ಟಿದ ವಿಡಿಯೋ ವೈರಲ್

● ವಿಕ್ರಮ ವಾಹಿನಿ । ಹೈದರಾಬಾದ್

‘ಮಹಾಲಕ್ಷ್ಮಿ’ ಯೋಜನೆಯ ಅನುಷ್ಠಾನ ಪರಿಶೀಲನೆಗಾಗಿ ಟಿಎಸ್‌ಆರ್‌ಟಿಸಿ ಬಸ್‌ನಲ್ಲಿ ಪ್ರಯಾಣಿಸುತ್ತಿದ್ದ ತೆಲಂಗಾಣದ ಇಬ್ರಾಹಿಂಪಟ್ಟಣಂ ಕ್ಷೇತ್ರದ ಕಾಂಗ್ರೆಸ್ ಶಾಸಕ ಮಲ್ರೆಡ್ಡಿ ರಂಗಾರೆಡ್ಡಿ ಅವರು ಕಾಲೇಜು ವಿದ್ಯಾರ್ಥಿನಿಯೊಬ್ಬರನ್ನು ಪದೇಪದೆ ಮುಟ್ಟಿದ ಆರೋಪ ಕೇಳಿಬಂದಿದ್ದು, ಘಟನೆಗೆ ಸಂಬಂಧಿಸಿದ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದೆ.

ಮಂಗಳವಾರ ಬಸ್‌ನಲ್ಲಿ ಪರಿಶೀಲನೆ ನಡೆಸುತ್ತಿದ್ದ ವೇಳೆ ಶಾಸಕ ರಂಗಾರೆಡ್ಡಿ ಅವರು ಕಾಲೇಜಿಗೆ ತೆರಳುತ್ತಿದ್ದ ವಿದ್ಯಾರ್ಥಿನಿಯೊಂದಿಗೆ ಮಾತನಾಡಿದ್ದಾರೆ. ಮಹಾಲಕ್ಷ್ಮಿ ಯೋಜನೆಯಿಂದ ಪ್ರಯೋಜನವಾಗುತ್ತಿದ್ದು, ಕಾಲೇಜು ಶಿಕ್ಷಣಕ್ಕೆ ವಾರ್ಷಿಕ ಸುಮಾರು 45 ಸಾವಿರ ವೆಚ್ಚವಾಗುತ್ತಿದೆ ಎಂದು ವಿದ್ಯಾರ್ಥಿನಿ ತಿಳಿಸಿದ್ದಾಳೆ ಎನ್ನಲಾಗಿದೆ.

ಈ ವೇಳೆ ಶಾಸಕ ವಿದ್ಯಾರ್ಥಿನಿಯ ಕೈ ಹಾಗೂ ತೋಳನ್ನು ಪದೇಪದೆ ಮುಟ್ಟುತ್ತಿರುವ ದೃಶ್ಯ ವಿಡಿಯೋದಲ್ಲಿದೆ. ವಿದ್ಯಾರ್ಥಿನಿ ಅಸಮಾಧಾನ ವ್ಯಕ್ತಪಡಿಸಿ ಕೈಯನ್ನು ದೂರ ಸರಿಸಲು ಪ್ರಯತ್ನಿಸುತ್ತಿದ್ದರೂ, ಶಾಸಕ ಮತ್ತೆ ಆಕೆಯನ್ನು ಮುಟ್ಟಲು ಮುಂದಾಗಿರುವುದು ಕಂಡುಬಂದಿದೆ ಎಂದು ವರದಿಯಾಗಿದೆ. ವಿಡಿಯೋ ವೈರಲ್ ಬಳಿಕ ಸಾಮಾಜಿಕ ಕಾರ್ಯಕರ್ತರು ಹಾಗೂ ರಾಜಕೀಯ ಮುಖಂಡರು ಶಾಸಕರ ವರ್ತನೆಗೆ ಆಕ್ಷೇಪ ವ್ಯಕ್ತಪಡಿಸಿದ್ದಾರೆ. ಗಾಯಕಿ ಹಾಗೂ ಸಾಮಾಜಿಕ ಕಾರ್ಯಕರ್ತೆ ಚಿನ್ಮಯಿ ಶ್ರೀಪಾದ, ವ್ಯಕ್ತಿಯ ಒಪ್ಪಿಗೆಯಿಲ್ಲದೆ ದೈಹಿಕವಾಗಿ ಮುಟ್ಟುವುದು ಸರಿಯಲ್ಲ ಎಂದು ಸಾಮಾಜಿಕ ಜಾಲತಾಣದಲ್ಲಿ ಟೀಕಿಸಿದ್ದಾರೆ. ಭಾರತ ರಾಷ್ಟ್ರ ಸಮಿತಿ (ಬಿಆರ್‌ಎಸ್) ಪ್ರಧಾನ ಕಾರ್ಯದರ್ಶಿ ಆರ್.ಎಸ್. ಪ್ರವೀಣ್ ಕುಮಾರ್ ಅವರು ಘಟನೆಯ ಬಗ್ಗೆ ಶೀ ಟೀಮ್ಸ್ ಹಾಗೂ ಮಹಿಳಾ ಸುರಕ್ಷತಾ ವಿಭಾಗ ತಕ್ಷಣ ಮಧ್ಯಪ್ರವೇಶಿಸಬೇಕು ಎಂದು ಆಗ್ರಹಿಸಿದ್ದಾರೆ. ಮಹಿಳೆಯ ಘನತೆಗೆ ಧಕ್ಕೆ ತಂದ ಆರೋಪದಡಿ ಕಾನೂನು ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿದ್ದಾರೆ.

# ಮದ್ಯದ ಅಮಲಿನಲ್ಲಿ ಬಸ್‌ನಲ್ಲಿ ಯುವತಿಯ ರಂಪಾಟ; ವಿಡಿಯೋ ವೈರಲ್

**ಮದ್ಯದ ಅಮಲಿನಲ್ಲಿದ್ದಾಳೆ ಎನ್ನಲಾದ ಯುವತಿಯೊಬ್ಬಳು ಚಲಿಸುತ್ತಿದ್ದ ಸರ್ಕಾರಿ ಬಸ್‌ನಲ್ಲಿ ನಿರ್ವಾಹಕ ಹಾಗೂ ಪ್ರಯಾಣಿಕರೊಂದಿಗೆ ಜಗಳವಾಡಿ ರಂಪಾಟ ನಡೆಸಿದ್ದಾಳೆ. ಪ್ರಯಾಣಿಕರಿಗೆ ಹೊಡೆದು, ಮಹಿಳೆಯ ಕೂದಲು ಎಳೆದಿದ್ದಾಳೆ ಎನ್ನಲಾಗಿದ್ದು, ಪೊಲೀಸರು ತನಿಖೆ ಆರಂಭಿಸಿದ್ದಾರೆ.**

● ವಿಕ್ರಮ ವಾಹಿನಿ । ಚೆನ್ನೈ

ಮದ್ಯದ ಅಮಲಿನಲ್ಲಿದ್ದಾಳೆ ಎನ್ನಲಾದ ಯುವತಿಯೊಬ್ಬಳು ಚಲಿಸುತ್ತಿದ್ದ ಸರ್ಕಾರಿ ಬಸ್‌ನಲ್ಲಿ ಪ್ರಯಾಣಿಕರೊಂದಿಗೆ ಜಗಳವಾಡಿ, ರಂಪಾಟ ನಡೆಸಿದ ಘಟನೆ ಚೆನ್ನೈನಲ್ಲಿ ನಡೆದಿದೆ. ಘಟನೆಯ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದೆ.

ಚೆನ್ನೈನಿಂದ ಕಿಲಂಬಾಕ್ಕಂ ಕಡೆಗೆ ತೆರಳುತ್ತಿದ್ದ ಮೆಟ್ರೋಪಾಲಿಟನ್ ಟ್ರಾನ್ಸ್‌ಪೋರ್ಟ್ ಕಾರ್ಪೊರೇಷನ್ (ಎಂಟಿಸಿ) ಬಸ್‌ನಲ್ಲಿ ಘಟನೆ ನಡೆದಿದೆ ಎನ್ನಲಾಗಿದೆ. ಟಿಕೆಟ್ ಪಡೆಯುವಂತೆ ಕೇಳಿದ ನಿರ್ವಾಹಕರೊಂದಿಗೆ ಯುವತಿ ವಾಗ್ವಾದ ನಡೆಸಿದ್ದಾಳೆ. ಬಳಿಕ ಬಸ್‌ನ ಮುಂಭಾಗದ ಡ್ಯಾಶ್‌ಬೋರ್ಡ್ ಬಳಿ ಕುಳಿತು ಪ್ರಯಾಣಿಕರೊಂದಿಗೆ ಕಿರಿಕಿರಿ ಮಾಡಿಕೊಂಡಿದ್ದಾಳೆ ಎಂದು ವರದಿಯಾಗಿದೆ.

ವೈರಲ್ ವಿಡಿಯೋದಲ್ಲಿ, ತಾನು ಸಾಮಾನ್ಯವಾಗಿ ಕ್ಯಾಬ್‌ನಲ್ಲಿ ಸಂಚರಿಸುವುದಾಗಿ ಯುವತಿ ಹೇಳುತ್ತಿರುವುದು ಕೇಳಿಬರುತ್ತದೆ. ಪ್ರಯಾಣಿಕರು ಆಕೆಯನ್ನು ಸಮಾಧಾನಪಡಿಸಲು ಹಾಗೂ ಪರಿಚಯಸ್ಥರ ಸಂಪರ್ಕ ವಿವರ ಪಡೆಯಲು ಪ್ರಯತ್ನಿಸಿದರೂ ಆಕೆ ಸಹಕರಿಸಿಲ್ಲ ಎನ್ನಲಾಗಿದೆ.

**ಪ್ರಯಾಣಿಕರೊಂದಿಗೆ ಜಗಳ:** ಯುವತಿ ಓರ್ವ ಪುರುಷ ಪ್ರಯಾಣಿಕನಿಗೆ ಹೊಡೆದಿದ್ದಾಳೆ ಹಾಗೂ ಮತ್ತೊಬ್ಬ ಮಹಿಳೆಯ ಕೂದಲು ಎಳೆದಿದ್ದಾಳೆ ಎಂದು ಆರೋಪಿಸಲಾಗಿದೆ. ಇದರಿಂದ ಬಸ್‌ನಲ್ಲಿ ಕೆಲಕಾಲ ಗೊಂದಲದ ವಾತಾವರಣ ನಿರ್ಮಾಣವಾಗಿದ್ದು, ಪ್ರಯಾಣಿಕರು ಆಕೆಯನ್ನು ನಿಯಂತ್ರಿಸಲು ಪ್ರಯತ್ನಿಸಿದ್ದಾರೆ.

ಪರಿಸ್ಥಿತಿ ನಿಯಂತ್ರಣಕ್ಕೆ ಬಾರದ ಹಿನ್ನೆಲೆಯಲ್ಲಿ ಚಾಲಕ ಮತ್ತು ನಿರ್ವಾಹಕರು ಬಸ್ ನಿಲ್ಲಿಸಿ ಯುವತಿಯನ್ನು ಕೆಳಗಿಳಿಸಿ ಪೊಲೀಸರಿಗೆ ಮಾಹಿತಿ ನೀಡಿದ್ದಾರೆ.

ಘಟನೆಗೆ ಸಂಬಂಧಿಸಿದಂತೆ ಕುಮಾರನ್ ನಗರ ಪೊಲೀಸರು ತನಿಖೆ ಆರಂಭಿಸಿದ್ದು, ಯುವತಿಯ ಗುರುತು ಪತ್ತೆಹಚ್ಚಲು ಪ್ರಯತ್ನಿಸುತ್ತಿದ್ದಾರೆ. ವೈರಲ್ ವಿಡಿಯೋ ಪರಿಶೀಲನೆ ನಡೆಸಲಾಗುತ್ತಿದ್ದು, ಬಸ್‌ನಲ್ಲಿದ್ದ ಪ್ರಯಾಣಿಕರು ಹಾಗೂ ಸಿಬ್ಬಂದಿಯಿಂದ ಮಾಹಿತಿ ಪಡೆಯುವ ಸಾಧ್ಯತೆಯಿದೆ. ಘಟನೆಯ ನಿಖರ ಕಾರಣ ತನಿಖೆಯಿಂದ ತಿಳಿದುಬರಬೇಕಿದೆ.

### 2 ಸಾವಿರ ಕದಿಯಲು 2 ಲಕ್ಷದ ಕಾರಿನಲ್ಲಿ ಬಂದ ಕಳ್ಳರು ಲಾಕ್!

● ವಿಕ್ರಮ ವಾಹಿನಿ । ಕಾರವಾರ

ಕೇವಲ ರೂ 2 ಸಾವಿರ ನಗದು ಕಳವು ಮಾಡಲು ಕಾರಿನಲ್ಲಿ ಬಂದಿದ್ದ ಮೂವರು ಅಂತರ್‌ಜಿಲ್ಲಾ ಕಳ್ಳರನ್ನು ಸಿದ್ದಾಪುರ ಪೊಲೀಸರು 24 ಗಂಟೆಯೊಳಗೆ ಬಂಧಿಸಿದ್ದಾರೆ. ಆರೋಪಿಗಳಿಂದ ಅಂದಾಜು ರೂ 2 ಲಕ್ಷ ಮೌಲ್ಯದ ಸುಜುಕಿ ಸ್ವಿಫ್ಟ್ ಡಿಸೈರ್ ಕಾರನ್ನು ವಶಪಡಿಸಿಕೊಳ್ಳಲಾಗಿದೆ.

ಅ.3ರ ಸಂಜೆ 5ರಿಂದ ಅ.5ರ ಬೆಳಗ್ಗೆ 8ರ ನಡುವಿನ ಅವಧಿಯಲ್ಲಿ ಸಿದ್ದಾಪುರದ ಮನೆಯೊಂದರ ಮುಂಭಾಗದ ಬಾಗಿಲಿನ ಬೀಗವನ್ನು ಮುರಿದು ಒಳನುಗ್ಗಿದ್ದ ಕಳ್ಳರು, ಕೊಠಡಿಯಲ್ಲಿದ್ದ ಗೋದ್ರೇಜ್ ಲಾಕರ್ ಮುರಿದು ರೂ 2 ಸಾವಿರ ನಗದು ಕಳವು ಮಾಡಿದ್ದರು. ಈ ಕುರಿತು ಸಿದ್ದಾಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು.

ಪ್ರಕರಣದ ತನಿಖೆಗಾಗಿ ವಿಶೇಷ ತಂಡ ರಚಿಸಿದ್ದ ಪೊಲೀಸರು ಸ್ಥಳೀಯ ಹಾಗೂ ತಾಂತ್ರಿಕ ಮಾಹಿತಿ ಆಧರಿಸಿ ಕಾರ್ಯಾಚರಣೆ ನಡೆಸಿ ಆರೋಪಿಗಳನ್ನು ಬಂಧಿಸಿದ್ದಾರೆ. ಗದಗ ಜಿಲ್ಲೆಯ ಲಕ್ಷ್ಮೇಶ್ವರದ ಗೋವಿಂದಪ್ಪ (29), ಬೆಳಗಾವಿ ಜಿಲ್ಲೆಯ ಚಿಂಚಲಿ–ರಾಯಬಾಗದ ಕೃಷ್ಣ (20) ಹಾಗೂ ಹುಬ್ಬಳ್ಳಿಯ ಗಣೇಶ್ (22) ಬಂಧಿತರು.

ವಿಚಾರಣೆ ವೇಳೆ ಆರೋಪಿಗಳು ಗದಗ, ಧಾರವಾಡ, ಉತ್ತರ ಕನ್ನಡ ಹಾಗೂ ಉಡುಪಿ ಜಿಲ್ಲೆಗಳಲ್ಲಿ ಮನೆಕಳ್ಳತನ, ದರೋಡೆ, ಡಕಾಯಿತಿ, ಕುರಿ ಹಾಗೂ ಬೈಕ್ ಕಳ್ಳತನ ಸೇರಿದಂತೆ ಹಲವು ಪ್ರಕರಣಗಳಲ್ಲಿ ಭಾಗಿಯಾಗಿರುವುದು ಬೆಳಕಿಗೆ ಬಂದಿದೆ.

# ಸಂತ್ರಸ್ತರ ಪರಿಹಾರಕ್ಕೆ ರೂ 45 ಕೋಟಿ ಬಿಡುಗಡೆ

● ವಿಕ್ರಮ ವಾಹಿನಿ । ಬೆಂಗಳೂರು

ಲೈಂಗಿಕ ಅಪರಾಧಗಳ ಸಂತ್ರಸ್ತರಿಗೆ ಪರಿಹಾರ ನೀಡಲು 2025–26ನೇ ಸಾಲಿನ ಬಜೆಟ್‌ನಲ್ಲಿ ಮೀಸಲಿಟ್ಟಿದ್ದ ರೂ 45 ಕೋಟಿ ಹಣವನ್ನು ಕರ್ನಾಟಕ ಕಾನೂನು ಸೇವೆಗಳ ಪ್ರಾಧಿಕಾರಕ್ಕೆ (ಕೆಎಸ್‌ಎಲ್‌ಎಸ್‌ಎ) ಬಿಡುಗಡೆ ಮಾಡಲಾಗಿದೆ ಎಂದು ರಾಜ್ಯ ಸರ್ಕಾರ ಹೈಕೋರ್ಟ್‌ಗೆ ತಿಳಿಸಿದೆ.

ಸಂತ್ರಸ್ತ ಪರಿಹಾರ ಯೋಜನೆಯಡಿ ಬಾಕಿ ಉಳಿದಿರುವ ಹಣವನ್ನು ಬಿಡುಗಡೆ ಮಾಡಲು ಸರ್ಕಾರಕ್ಕೆ ನಿರ್ದೇಶಿಸುವಂತೆ ಪೀಪಲ್ಸ್ ಮೂವ್‌ಮೆಂಟ್ ಎಗೇನ್ಸ್ಟ್ ಸೆಕ್ಸ್ಯುಯಲ್ ಅಸಾಲ್ಟ್ (ಪಿಎಂಎಎಸ್‌ಎ) ಸಲ್ಲಿಸಿದ್ದ ಸಾರ್ವಜನಿಕ ಹಿತಾಸಕ್ತಿ ಅರ್ಜಿಯ ವಿಚಾರಣೆ ವೇಳೆ ಸರ್ಕಾರ ಈ ಮಾಹಿತಿ ನೀಡಿದೆ.

ನ್ಯಾಯಮೂರ್ತಿ ಅನು ಶಿವರಾಮನ್ ಹಾಗೂ ನ್ಯಾಯಮೂರ್ತಿ ಭರತ್ ಕುಮಾರ್ ಅವರಿದ್ದ ನ್ಯಾಯಪೀಠದ ಮುಂದೆ ಸರ್ಕಾರದ ಪರ ವಕೀಲರು, ಬಜೆಟ್‌ನಲ್ಲಿ ಮೀಸಲಿಟ್ಟ ರೂ 45 ಕೋಟಿಯನ್ನು ಹಂತ ಹಂತವಾಗಿ ಕೆಎಸ್‌ಎಲ್‌ಎಸ್‌ಎಗೆ ಬಿಡುಗಡೆ ಮಾಡಲಾಗಿದ್ದು, ಸದ್ಯ ಯಾವುದೇ ಹಣ ಬಾಕಿ ಉಳಿದಿಲ್ಲ ಎಂದು ತಿಳಿಸಿದರು.



ಇದೇ ವೇಳೆ ಕೆಎಸ್‌ಎಲ್‌ಎಸ್‌ಎ ಪರ ವಕೀಲರು, ಸರ್ಕಾರದಿಂದ ಬಿಡುಗಡೆಯಾದ ಸಂಪೂರ್ಣ ಹಣವನ್ನು ಈಗಾಗಲೇ ಸಂತ್ರಸ್ತರಿಗೆ ವಿತರಿಸಲಾಗಿದೆ ಎಂದು ನ್ಯಾಯಪೀಠಕ್ಕೆ ಮಾಹಿತಿ ನೀಡಿದರು. ಎರಡೂ ಪಕ್ಷಗಳ ಹೇಳಿಕೆಗಳನ್ನು ದಾಖಲಿಸಿಕೊಂಡ ನ್ಯಾಯಪೀಠ ವಿಚಾರಣೆಯನ್ನು ಮುಂದೂಡಿತು.

ಸಂತ್ರಸ್ತರ ಹಕ್ಕುಗಳ ರಕ್ಷಣೆಗೆ ಅಗತ್ಯ ಕ್ರಮ ಕೈಗೊಳ್ಳುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ನ್ಯಾಯಪೀಠ ಸೂಚಿಸಿತು.

www.VIKRAMAVAHINI.com
ಕನ್ನಡ ದಿನಪತ್ರಿಕೆ
PRGI NO: KARKAN/2018/78481
ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ
ವಿಕ್ರಮ ವಾಹಿನಿ

### ಸನಿ ವಾಹಿನಿ

ಕಾಲ ಬದಲಾದಂತೆ ಜನ ಬದಲಾಗಬಹುದು, ಸನ್ನಿವೇಶ ಬದಲಾಗಬಹುದು ಆದರೆ ನಮ್ಮ ಒಳ್ಳೆಯತನ ಮಾತ್ರ ಬದಲಾಗಬಾರದು.

### ದಿನ ಪಂಚಾಂಗ

ಅಕ್ಟೋಬರ್, 08-2026, ಗುರುವಾರ ವರ್ಷ ಋತು, ಭಾದ್ರಪದ ಮಾಸ, ಬಹುಳ ಪಕ್ಷ
ತ್ರಯೋದಶಿ ತಿಥಿ ರಾ.9:46
ಪುಬ್ಬ ನಕ್ಷತ್ರ ರಾ.9:55
ರಾಹುಕಾಲ ಮ 1:36-3:06
ಪ್ರದೋಷ, ಮಾಸ ಶಿವರಾತ್ರಿ, ಭಾರತೀಯ ವಾಯುಪಡೆ ದಿನ, ವಿಶ್ವ ದೃಷ್ಟಿ ದಿನ, ಕಲಿಯುಗಾದಿ, ಹರಿಹರ ಶಿವಾನಂದ ಆರಾಧನೆ

# ಪ್ರತಿಭಾ ವಿಕಸನಕ್ಕೆ ಮಠಗಳ ಕೊಡುಗೆ ಅಪಾರ: ಖಂಡ್ರೆ

● ವಿಕ್ರಮ ವಾಹಿನಿ । ಚಿಕ್ಕಮಗಳೂರು

ಭಾರತ ಪ್ರತಿಭಾವಂತ ಮಾನವ ಸಂಪನ್ಮೂಲದಿಂದ ಸಮೃದ್ಧವಾಗಿದ್ದು, ದೇಶದ ಪ್ರತಿಭಾವಂತರು ಜಾಗತಿಕ ಮಟ್ಟದಲ್ಲಿ ಮನ್ನಣೆ ಗಳಿಸುತ್ತಿದ್ದಾರೆ. ಯುವಜನರ ಪ್ರತಿಭಾ ವಿಕಸನ ಹಾಗೂ ರಾಜ್ಯದ ಅಭಿವೃದ್ಧಿಯಲ್ಲಿ ವೀರಶೈವ ಲಿಂಗಾಯತ ಮಠಗಳ ಕೊಡುಗೆ ಅಪಾರವಾಗಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ. ಖಂಡ್ರೆ ಹೇಳಿದರು.

ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ಚಿಕ್ಕಮಗಳೂರು ಘಟಕ ಆಯೋಜಿಸಿದ್ದ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಜಾತಿ-ಧರ್ಮದ ಭೇದವಿಲ್ಲದೆ ಎಲ್ಲರಿಗೂ ಅಕ್ಷರ, ಆಶ್ರಯ ಮತ್ತು ಅನ್ನದಾಸೋಹದ ಮೂಲಕ ಜ್ಞಾನ ಹಂಚಿದ ಕೀರ್ತಿ ಮಠಮಾನ್ಯಗಳಿಗೆ ಸಲ್ಲುತ್ತದೆ. ಮತ್ತೊಂದು ಸಮುದಾಯವನ್ನು ತುಳಿದು ಯಾವುದೇ ಸಮಾಜ ಬಲಿಷ್ಠವಾಗಲು ಸಾಧ್ಯವಿಲ್ಲ. ಎಲ್ಲರನ್ನೂ ಒಳಗೊಳ್ಳುವ ಮೂಲಕ ಸಾಮಾಜಿಕ ನ್ಯಾಯಕ್ಕೆ ಕೊಡುಗೆ ನೀಡಿದ ಪರಂಪರೆ ವೀರಶೈವ ಲಿಂಗಾಯತ ಸಮುದಾಯಕ್ಕಿದೆ ಎಂದರು.

ಸಮಾಜದಲ್ಲಿ ಜಾತಿ ವಿಭಜನೆಗೆ ಕೆಲವರು ಪ್ರಯತ್ನಿಸುತ್ತಿದ್ದಾರೆ. ಆದರೆ ಲಿಂಗಾಯತರು ಮತ್ತು ವೀರಶೈವರು ಒಂದೇ ನಾಣ್ಯದ ಎರಡು ಮುಖಗಳಿದ್ದಂತೆ ಎಂಬುದನ್ನು ಸಿದ್ದಗಂಗಾ ಮಠದ ಲಿಂಗೈಕ್ಯ ಡಾ. ಶಿವಕುಮಾರ ಸ್ವಾಮೀಜಿ ಅವರೇ ಸ್ವಹಸ್ತಾಕ್ಷರದಲ್ಲಿ ಬರೆದುಕೊಟ್ಟಿದ್ದಾರೆ ಎಂದು ತಿಳಿಸಿದರು.




**ದೊಡ್ಡ ಗುರಿ ಹೊಂದಿ ಸಾಧಿಸಿ:** ಸ್ವಾಮಿ ವಿವೇಕಾನಂದರ ಆಶಯದಂತೆ ಯುವಜನರು ಗುರಿ ಮುಟ್ಟುವವರೆಗೂ ಪ್ರಯತ್ನ ನಿಲ್ಲಿಸಬಾರದು. ಮನಸ್ಸಿನಲ್ಲಿ ಛಲ ಮತ್ತು ಆತ್ಮವಿಶ್ವಾಸವಿದ್ದರೆ ಸಾಧನೆಗೆ ಯಾವುದೂ ಅಡ್ಡಿಯಾಗದು. ವಿದ್ಯಾರ್ಥಿಗಳು ದೊಡ್ಡ ಗುರಿ ಹೊಂದಿ, ವೈದ್ಯರು, ಎಂಜಿನಿಯರ್‌ಗಳು, ವಿಜ್ಞಾನಿಗಳು ಹಾಗೂ ತಂತ್ರಜ್ಞಾನ ತಜ್ಞರಾಗುವ ಕನಸು ಕಾಣಬೇಕು. ಬದಲಾಗುತ್ತಿರುವ ಕಾಲಘಟ್ಟಕ್ಕೆ ಅನುಗುಣವಾಗಿ ಜ್ಞಾನ ಮತ್ತು ಕೌಶಲಗಳನ್ನು ವೃದ್ಧಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಕೃತಕ ಬುದ್ಧಿಮತ್ತೆ ಮತ್ತು ಯಂತ್ರ ಕಲಿಕೆಯಂತಹ ತಂತ್ರಜ್ಞಾನಗಳು ವೇಗವಾಗಿ ಬೆಳೆಯುತ್ತಿವೆ. ಇಂತಹ ಸಂದರ್ಭದಲ್ಲಿ ಯುವಜನರು ತಮ್ಮ ಬೌದ್ಧಿಕ ಸಾಮರ್ಥ್ಯವನ್ನು ಹೆಚ್ಚಿಸಿಕೊಂಡು ಹೊಸ ಆವಿಷ್ಕಾರಗಳಿಗೆ ತೆರೆದುಕೊಳ್ಳಬೇಕು. ಆರೋಗ್ಯವಂತ ಸಮಾಜ ನಿರ್ಮಾಣಕ್ಕೆ ದೈಹಿಕವಾಗಿ ಸದೃಢ ಹಾಗೂ ಮಾನಸಿಕವಾಗಿ ಆರೋಗ್ಯವಂತ ಮಕ್ಕಳು ಅಗತ್ಯ. ದುಶ್ಚಟಗಳಿಂದ ದೂರವಿದ್ದು, ಉತ್ತಮ ಸಂಸ್ಕಾರಗಳನ್ನು ಬೆಳೆಸಿಕೊಳ್ಳಬೇಕು ಎಂದರು.

**ಪರಿಸರ ಸಂರಕ್ಷಣೆಗೆ ಆದ್ಯತೆ ನೀಡಿ:** ಎಲ್ ನಿನೋ ಪ್ರಭಾವ ಸೇರಿದಂತೆ ಹಲವು ಅಂಶಗಳಿಂದ ಜಾಗತಿಕ ತಾಪಮಾನ ಏರಿಕೆ ಮತ್ತು ಹವಾಮಾನ ಬದಲಾವಣೆಯ ಪರಿಣಾಮಗಳು ತೀವ್ರವಾಗುತ್ತಿವೆ. ಈ ಸವಾಲುಗಳನ್ನು ಎದುರಿಸಲು ಪ್ರಕೃತಿ ಮತ್ತು ಪರಿಸರ ಸಂರಕ್ಷಣೆಗೆ ಪ್ರತಿಯೊಬ್ಬರೂ ಆದ್ಯತೆ ನೀಡಬೇಕು ಎಂದು ಹೇಳಿದರು.

ಹಣ ಕಳೆದುಕೊಂಡರೆ ಮತ್ತೆ ಸಂಪಾದಿಸಬಹುದು; ಆರೋಗ್ಯಕ್ಕೆ ಹಾನಿಯಾದರೆ ನಷ್ಟ ಅನುಭವಿಸಬೇಕಾಗುತ್ತದೆ. ಆದರೆ ಚಾರಿತ್ರ್ಯ ಕಳೆದುಕೊಂಡರೆ ಸರ್ವಸ್ವವನ್ನೂ ಕಳೆದುಕೊಂಡಂತೆ. ಹೀಗಾಗಿ ಯುವಜನರು ಉತ್ತಮ ನಡತೆ, ಪ್ರಾಮಾಣಿಕತೆ ಮತ್ತು ಚಾರಿತ್ರ್ಯವನ್ನು ಜೀವನದ ಅವಿಭಾಜ್ಯ ಅಂಗವಾಗಿಸಿಕೊಳ್ಳಬೇಕು ಎಂದು ಕಿವಿಮಾತು ಹೇಳಿದರು.

ಕಾರ್ಯಕ್ರಮದಲ್ಲಿ ಶ್ರೀಮದ್ ರಂಭಾಪುರಿ ವೀರಸಿಂಹಾಸನಾಧೀಶ್ವರ ಜಗದ್ಗುರು ಪ್ರಸನ್ನ ರೇಣುಕ ವೀರಸೋಮೇಶ್ವರ ರಾಜದೇಶಿಕೇಂದ್ರ ಶಿವಾಚಾರ್ಯ ಭಗವತ್ಪಾದರು ದಿವ್ಯ ಸಾನ್ನಿಧ್ಯ ವಹಿಸಿದ್ದರು. ವೀರಶೈವ ಲಿಂಗಾಯತ ಮಹಾಸಭಾದ ಉಪಾಧ್ಯಕ್ಷ ಸಚ್ಚಿದಾನಂದಮೂರ್ತಿ, ರಾಷ್ಟ್ರೀಯ ಮಹಿಳಾ ಘಟಕದ ಅಧ್ಯಕ್ಷೆ ವೀಣಾ ಕಾಶಪ್ಪನವರ್, ಯುವ ಘಟಕದ ಅಧ್ಯಕ್ಷ ವೆಂಕಟರೆಡ್ಡಿ, ರಾಜ್ಯ ಮಹಿಳಾ ಘಟಕದ ಅಧ್ಯಕ್ಷೆ ಮುಕ್ತಾಂಬಾ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಭೀಮಣ್ಣ ಖಂಡ್ರೆಗೆ ಕರ್ನಾಟಕ ರತ್ನ ಪ್ರಶಸ್ತಿ ನೀಡಿ: ರಂಭಾಪುರಿ ಶ್ರೀ

● ವಿಕ್ರಮ ವಾಹಿನಿ । ಚಿಕ್ಕಮಗಳೂರು

ಸ್ವಾತಂತ್ರ್ಯ ಸೇನಾನಿ, ಏಕೀಕರಣದ ಹೋರಾಟಗಾರರಾಗಿದ್ದ ಲಿಂಗೈಕ್ಯ ಡಾ. ಭೀಮಣ್ಣ ಖಂಡ್ರೆ ಅವರಿಗೆ ಮರಣೋತ್ತರವಾಗಿ ಕರ್ನಾಟಕ ರತ್ನ ಪ್ರಶಸ್ತಿ ನೀಡುವಂತೆ ವೀರಶೈವ ಲಿಂಗಾಯತ ಮಹಾಸಭಾ ಚಿಕ್ಕಮಗಳೂರು ಘಟಕ ಕೈಗೊಂಡಿರುವ ನಿರ್ಣಯಕ್ಕೆ ರಂಭಾಪುರಿ ಜಗದ್ಗುರುಗಳು ಬೆಂಬಲ ವ್ಯಕ್ತಪಡಿಸಿದ್ದಾರೆ.

ಚಿಕ್ಕಮಗಳೂರಿನಲ್ಲಿಂದು ನಡೆದ ಪ್ರತಿಭಾ ಪುರಸ್ಕಾರ ಕಾರ್ಯಕ್ರಮದಲ್ಲಿ ಆಶೀರ್ವಚನ ನೀಡಿದ ರಂಭಾಪುರಿ ಜಗದ್ಗುರು ಪ್ರಸನ್ನ ರೇಣುಕ ವೀರಸೋಮೇಶ್ವರ ರಾಜದೇಶಿಕೇಂದ್ರ ಶಿವಾಚಾರ್ಯ ಸ್ವಾಮೀಜಿ, ಕಲ್ಯಾಣ ಕರ್ನಾಟಕದ ಕಣ್ಮಣಿಯಾಗಿದ್ದ ಭೀಮಣ್ಣ ಖಂಡ್ರೆ ಅವರಿಗೆ ಕರ್ನಾಟಕ ರತ್ನ ಪ್ರಶಸ್ತಿ ನೀಡಿದರೆ ಅದು ಅವರು ಮಾಡಿದ ಮಹತ್ಕಾರ್ಯಕ್ಕೆ ಬೆಂಬಲ ನೀಡಿದಂತಾಗುತ್ತದೆ ಎಂದರು.

ಸ್ವಾತಂತ್ರ್ಯ ಹೋರಾಟದಲ್ಲಿ ತಮ್ಮನ್ನು ತೊಡಗಿಸಿಕೊಂಡು ತಾವು ನೋವುಂಡು, ಸಮಾಜಕ್ಕೆ ಒಳಿತನ್ನೇ ಮಾಡಿದ ಭೀಮಣ್ಣ ಖಂಡ್ರೆ ಅವರಿಗೆ ಮುಂದಿನ ದಿನಗಳಲ್ಲಿ ಕರ್ನಾಟಕ ರತ್ನ ಗೌರವ ನೀಡಬೇಕು ಎಂದು ಸರ್ಕಾರವನ್ನು ಒತ್ತಾಯಿಸಿದರು. ಇದಕ್ಕೂ ಮುನ್ನ ಮಾತನಾಡಿದ ಮಹಾಸಭಾ, ಜಿಲ್ಲಾ ಘಟಕದ ಅಧ್ಯಕ್ಷ ಎಚ್.ಎಂ.ಲೋಕೇಶ್, ಶತಾಯುಷಿ, ಲೋಕನಾಯಕ ಲಿಂಗೈಕ್ಯ ಡಾ. ಭೀಮಣ್ಣ ಖಂಡ್ರೆ ಅವರಿಗೆ ಮರಣೋತ್ತರವಾಗಿ ಕರ್ನಾಟಕ ರತ್ನ ಪ್ರಶಸ್ತಿ ನೀಡುವಂತೆ ಕಾರ್ಯಕಾರಿ ಸಮಿತಿ ಸಭೆಯಲ್ಲಿ ನಿರ್ಣಯ ಕೈಗೊಳ್ಳಲಾಗಿದ್ದು, ಮುಖ್ಯಮಂತ್ರಿಗಳಿಗೆ ಮನವಿ ಅರ್ಪಿಸಲಾಗುವುದು ಎಂದು ತಿಳಿಸಿದರು.

ಭೀಮಣ್ಣ ಖಂಡ್ರೆ ಅವರು ನಮ್ಮ ಸಮಾಜದ ಮೇರು ವ್ಯಕ್ತಿಗಳಲ್ಲಿ ಒಬ್ಬರಾಗಿದ್ದರು. ಸ್ವಾತಂತ್ರ್ಯ ಚಳವಳಿಯಲ್ಲಿ ಸಕ್ರಿಯವಾಗಿ ಭಾಗಿಯಾಗಿದ್ದ ಅವರು, ವಕೀಲರಾಗಿ ನೊಂದ ಸಾವಿರಾರು ಬಡ ಜನರಿಗೆ ನ್ಯಾಯ ಕೊಡಿಸಿದ್ದರು. ನಿಜಾಮರ ಆಳ್ವಿಕೆಗೆ ಒಳಪಟ್ಟಿದ್ದ ಹೈದ್ರಾಬಾದ್ ಕರ್ನಾಟಕದಲ್ಲಿ ರಜಾಕಾರರ ದಬ್ಬಾಳಿಕೆಯ ನಡುವೆಯೂ ಕನ್ನಡ ಜೀವಂತವಾಗಿ ಉಳಿಯಲು ಶ್ರಮಿಸಿದ್ದರು. ಜೊತೆಗೆ ಬಸವ ಕಲ್ಯಾಣದಲ್ಲಿ ಈಗಿರುವ ಆಧುನಿಕ ಅನುಭವ ಮಂಟಪ ನಿರ್ಮಾಣದಲ್ಲಿ ಭಾಲ್ಕಿ ಹಿರೇಮಠದ ಚನ್ನಬಸವ ಪಟ್ಟದ್ದೇವರೊಂದಿಗೆ ಹೆಗಲಿಗೆ ಹೆಗಲುಕೊಟ್ಟು ಶ್ರಮಿಸಿದ್ದರು. ಇಂತಹ ಕನ್ನಡ ಕಟ್ಟಾಳುವಿಗೆ ಕರ್ನಾಟಕ ರತ್ನ ಪ್ರಶಸ್ತಿಯನ್ನು ಮರಣೋತ್ತರವಾಗಿ ನೀಡಬೇಕು ಎಂದು ಸಭಾ ಒತ್ತಾಯಿಸುತ್ತದೆ ಎಂದರು. ಸಭೆಯಲ್ಲಿ ನೆರೆದಿದ್ದ ಎಲ್ಲರೂ ಈ ನಿರ್ಣಯವನ್ನು ಒಕ್ಕೊರಲಿನಿಂದ ಅನುಮೋದಿಸಿದರು.

## ಆರೋಗ್ಯ

# 15 ದಿನ ಖಾಲಿ ಹೊಟ್ಟೆಯಲ್ಲಿ ನೆಲ್ಲಿಕಾಯಿ ಜ್ಯೂಸ್ ಕುಡಿದರೆ ಏನಾಗುತ್ತದೆ?



● ವಿಕ್ರಮ ವಾಹಿನಿ । ಬೆಂಗಳೂರು

ನೆಲ್ಲಿಕಾಯಿ ಪೋಷಕಾಂಶಗಳಿಂದ ಸಮೃದ್ಧವಾಗಿರುವ ಹಣ್ಣುಗಳಲ್ಲಿ ಪ್ರಮುಖವಾದುದು. ವಿಟಮಿನ್ ಸಿ, ಉತ್ಕರ್ಷಣ ನಿರೋಧಕಗಳು, ನಾರಿನಾಂಶ ಸೇರಿದಂತೆ ಹಲವು ಪೋಷಕಾಂಶಗಳನ್ನು ಹೊಂದಿರುವ ನೆಲ್ಲಿಕಾಯಿಯನ್ನು ಹಲವು ವರ್ಷಗಳಿಂದ ಆಹಾರ ಹಾಗೂ ಆಯುರ್ವೇದ ಪದ್ಧತಿಯಲ್ಲಿ ಬಳಸಲಾಗುತ್ತಿದೆ. ನೆಲ್ಲಿಕಾಯಿ ಜ್ಯೂಸ್ ಅನ್ನು ನಿಯಮಿತವಾಗಿ ಸೇವಿಸುವುದರಿಂದ ದೇಹಕ್ಕೆ ಹಲವು ರೀತಿಯ ಪ್ರಯೋಜನಗಳು ದೊರೆಯಬಹುದು.

**ರೋಗನಿರೋಧಕ ಶಕ್ತಿಗೆ ನೆರವು:** ನೆಲ್ಲಿಕಾಯಿಯಲ್ಲಿರುವ ವಿಟಮಿನ್ ಸಿ ಮತ್ತು ಉತ್ಕರ್ಷಣ ನಿರೋಧಕಗಳು ದೇಹದ ಸಾಮಾನ್ಯ ರೋಗನಿರೋಧಕ ಕಾರ್ಯಕ್ಕೆ ಬೆಂಬಲ ನೀಡುತ್ತವೆ. ಸಮತೋಲಿತ ಆಹಾರದ ಭಾಗವಾಗಿ ನೆಲ್ಲಿಕಾಯಿ ಸೇವಿಸುವುದು ಒಟ್ಟಾರೆ ಆರೋಗ್ಯಕ್ಕೆ ಸಹಕಾರಿಯಾಗಬಹುದು.

**ಜೀರ್ಣಕ್ರಿಯೆಗೆ ಸಹಕಾರಿ:** ನೆಲ್ಲಿಕಾಯಿಯಲ್ಲಿರುವ ನಾರಿನಾಂಶ ಜೀರ್ಣಾಂಗ ವ್ಯವಸ್ಥೆಯ ಆರೋಗ್ಯಕ್ಕೆ ನೆರವಾಗಬಹುದು. ನಿಯಮಿತವಾಗಿ ಮಿತ ಪ್ರಮಾಣದಲ್ಲಿ ಸೇವಿಸುವುದರಿಂದ ಮಲಬದ್ಧತೆ ಸೇರಿದಂತೆ ಕೆಲವು ಜೀರ್ಣಕ್ರಿಯೆ ಸಮಸ್ಯೆಗಳನ್ನು ನಿಯಂತ್ರಿಸಲು ಸಹಾಯವಾಗಬಹುದು.

**ಚರ್ಮ, ಕೂದಲಿನ ಆರೋಗ್ಯ:** ನೆಲ್ಲಿಕಾಯಿಯಲ್ಲಿರುವ ವಿಟಮಿನ್ ಸಿ ಹಾಗೂ ಉತ್ಕರ್ಷಣ ನಿರೋಧಕಗಳು ಚರ್ಮದ ಆರೋಗ್ಯಕ್ಕೆ ಅಗತ್ಯವಾದ ಕೊಲಾಜೆನ್ ಉತ್ಪಾದನೆಗೆ ಬೆಂಬಲ ನೀಡುತ್ತವೆ. ಪೌಷ್ಟಿಕ ಆಹಾರದ ಭಾಗವಾಗಿ ಸೇವಿಸಿದಾಗ ಕೂದಲು ಹಾಗೂ ಚರ್ಮದ ಆರೋಗ್ಯಕ್ಕೂ ನೆರವಾಗಬಹುದು.

**ತೂಕ ಇಳಿಕೆಗೆ ನೇರ ಪರಿಹಾರವಲ್ಲ:** ನೆಲ್ಲಿಕಾಯಿ ಜ್ಯೂಸ್ ಆರೋಗ್ಯಕರ ಆಹಾರದ ಭಾಗವಾಗಬಹುದು. ಆದರೆ ಇದನ್ನು ಮಾತ್ರ ಸೇವಿಸುವುದರಿಂದ ತೂಕ ಇಳಿಯುತ್ತದೆ ಎಂಬುದಕ್ಕೆ ಖಚಿತ ಆಧಾರವಿಲ್ಲ. ತೂಕ ನಿಯಂತ್ರಣಕ್ಕೆ ಸಮತೋಲಿತ ಆಹಾರ ಹಾಗೂ ನಿಯಮಿತ ದೈಹಿಕ ಚಟುವಟಿಕೆ ಮುಖ್ಯ.

**ರಕ್ತದಲ್ಲಿನ ಸಕ್ಕರೆ ಬಗ್ಗೆ ಎಚ್ಚರಿಕೆ:** ನೆಲ್ಲಿಕಾಯಿ ರಕ್ತದಲ್ಲಿನ ಸಕ್ಕರೆ ನಿಯಂತ್ರಣಕ್ಕೆ ಸಹಾಯ ಮಾಡಬಹುದು ಎಂಬ ಕೆಲವು ಅಧ್ಯಯನಗಳಿದ್ದರೂ, ಮಧುಮೇಹದ ಚಿಕಿತ್ಸೆಗೆ ಇದು ಪರ್ಯಾಯವಲ್ಲ. ಮಧುಮೇಹದ ಔಷಧ ಸೇವಿಸುವವರು ನಿಯಮಿತವಾಗಿ ಜ್ಯೂಸ್ ಕುಡಿಯುವ ಮುನ್ನ ವೈದ್ಯರ ಸಲಹೆ ಪಡೆಯುವುದು ಸೂಕ್ತ.

**ಜ್ಯೂಸ್ ತಯಾರಿಸುವ ವಿಧಾನ:** ತಾಜಾ ನೆಲ್ಲಿಕಾಯಿಯನ್ನು ಚೆನ್ನಾಗಿ ತೊಳೆದು ಬೀಜ ತೆಗೆದು ಸಣ್ಣ ತುಂಡುಗಳಾಗಿ ಕತ್ತರಿಸಬೇಕು. ಮಿಕ್ಸಿಯಲ್ಲಿ ಸ್ವಲ್ಪ ನೀರಿನೊಂದಿಗೆ ರುಬ್ಬಿ, ಅಗತ್ಯವಿದ್ದರೆ ಸೋಸಿ ಸೇವಿಸಬಹುದು. ಸಕ್ಕರೆ ಸೇರಿಸುವುದನ್ನು ತಪ್ಪಿಸುವುದು ಉತ್ತಮ.

ನೆಲ್ಲಿಕಾಯಿ ಜ್ಯೂಸ್ ಅನ್ನು ಖಾಲಿ ಹೊಟ್ಟೆಯಲ್ಲಿ ಸೇವಿಸುವಾಗ ಪ್ರಮಾಣದ ಬಗ್ಗೆ ಎಚ್ಚರಿಕೆ ವಹಿಸುವುದು ಮುಖ್ಯ. ಹೆಚ್ಚು ಪ್ರಮಾಣದಲ್ಲಿ ಅಥವಾ ಹೆಚ್ಚು ಹುಳಿಯಾಗಿರುವ ಜ್ಯೂಸ್ ಸೇವಿಸಿದರೆ ಕೆಲವರಿಗೆ ಹೊಟ್ಟೆಯಲ್ಲಿ ಉರಿ, ಅಸ್ವಸ್ಥತೆ ಅಥವಾ ಆಮ್ಲೀಯತೆ ಉಂಟಾಗಬಹುದು. ಹೀಗಾಗಿ ಕಡಿಮೆ ಪ್ರಮಾಣದಲ್ಲಿ ಸೇವಿಸಿ, ದೇಹದ ಪ್ರತಿಕ್ರಿಯೆಯನ್ನು ಗಮನಿಸುವುದು ಸೂಕ್ತ.

# ಸತತ ನಾಲ್ಕನೇ ತಿಂಗಳು ಅಕ್ಕಿ ದರ ಏರಿಕೆ

● ವಿಕ್ರಮ ವಾಹಿನಿ । ಬೆಂಗಳೂರು

ಜನಸಾಮಾನ್ಯರಿಗೆ ದಿನಸಿ ಬೆಲೆ ಏರಿಕೆಯ ಬಿಸಿ ಮುಂದುವರಿದಿದ್ದು, ಸತತ ನಾಲ್ಕನೇ ತಿಂಗಳಲ್ಲೂ ಅಕ್ಕಿ ದರ ಹೆಚ್ಚಳವಾಗಿದೆ. ಯಶವಂತಪುರ ಸಗಟು ಮಾರುಕಟ್ಟೆಯಲ್ಲಿ 25 ಕೆ.ಜಿ. ಸೋನಾ ಮಸೂರಿ ಅಕ್ಕಿ ಚೀಲದ ದರ ರೂ 1,430ರಿಂದ ರೂ 1,820ಕ್ಕೆ ಏರಿಕೆಯಾಗಿದ್ದು, ಚಿಲ್ಲರೆ ಮಾರುಕಟ್ಟೆಯಲ್ಲಿ ಕೆ.ಜಿಗೆ ರೂ 90ರ ಗಡಿ ದಾಟಿದೆ.

ಕಳೆದ ಎರಡು ತಿಂಗಳಲ್ಲಿ ಸೋನಾ ಮಸೂರಿ ಅಕ್ಕಿ ಚೀಲದ ದರ ಸುಮಾರು ರೂ 400 ಹೆಚ್ಚಳವಾಗಿರುವುದು ಗ್ರಾಹಕರಿಗೆ ಹೊರೆಯಾಗಿದೆ. ಮಳೆ ಕೊರತೆ ಹಾಗೂ ಭತ್ತದ ಇಳುವರಿ ಕುಸಿತದಿಂದ ಮಾರುಕಟ್ಟೆಗೆ ಪೂರೈಕೆ ಕಡಿಮೆಯಾಗಿರುವುದು ದರ ಏರಿಕೆಗೆ ಪ್ರಮುಖ ಕಾರಣ ಎನ್ನಲಾಗಿದೆ.

ವಿವಿಧ ಅಕ್ಕಿಗಳ ದರ ಹೆಚ್ಚಳ

ಸೋನಾ ಮಸೂರಿ ಅಕ್ಕಿ ಕೆ.ಜಿಗೆ ರೂ 69ರಿಂದ ರೂ 90ಕ್ಕೆ, ಕೋಲಂ ರೂ 75ರಿಂದ ರೂ 110ಕ್ಕೆ, ಸ್ಟೀಮ್ ಅಕ್ಕಿ ರೂ 60ರಿಂದ ರೂ 88ಕ್ಕೆ, ಬಾಸುಮತಿ ರೂ 105ರಿಂದ ರೂ 120ಕ್ಕೆ, ಜೀರಾ ರೈಸ್ ರೂ 115ರಿಂದ ರೂ 125ಕ್ಕೆ ಹಾಗೂ ರಾಜಮುಡಿ ಅಕ್ಕಿ ರೂ 125ರಿಂದ ರೂ 150ಕ್ಕೆ ಏರಿಕೆಯಾಗಿದೆ.

ರಾಯಚೂರು, ಸಿಂಧನೂರು, ಸಿರುಗುಪ್ಪ ಹಾಗೂ ಭದ್ರಾವತಿ ಸೇರಿದಂತೆ ಪ್ರಮುಖ ಭತ್ತ ಬೆಳೆಯುವ ಪ್ರದೇಶಗಳಲ್ಲಿ ಮಳೆ ಕೊರತೆಯಿಂದ ಉತ್ಪಾದನೆ ಕುಸಿದಿದೆ.

ನೆರೆಯ ಆಂಧ್ರಪ್ರದೇಶ ಮತ್ತು ತಮಿಳುನಾಡಿನಲ್ಲೂ ಭತ್ತದ ಇಳುವರಿ ಕಡಿಮೆಯಾಗಿರುವುದರಿಂದ ಪೂರೈಕೆ ಮೇಲೆ ಪರಿಣಾಮ ಬೀರಿದೆ ಎಂದು ಮಾರುಕಟ್ಟೆ ಮೂಲಗಳು ತಿಳಿಸಿವೆ.

ಅಕ್ಕಿ ದರ ನಿರಂತರವಾಗಿ ಏರುತ್ತಿರುವ ಹಿನ್ನೆಲೆಯಲ್ಲಿ ಬಡ ಹಾಗೂ ಮಧ್ಯಮ ವರ್ಗದ ಕುಟುಂಬಗಳ ಮಾಸಿಕ ಖರ್ಚು ಹೆಚ್ಚಾಗಿದೆ. ಪೂರೈಕೆ ಸುಧಾರಿಸಿ ದರ ನಿಯಂತ್ರಣಕ್ಕೆ ಬರದಿದ್ದರೆ ಮುಂದಿನ ದಿನಗಳಲ್ಲಿ ಗ್ರಾಹಕರ ಮೇಲಿನ ಹೊರೆ ಮತ್ತಷ್ಟು ಹೆಚ್ಚುವ ಸಾಧ್ಯತೆಯಿದೆ.

ಅಕ್ಕಿ ಸೇರಿದಂತೆ ಅಗತ್ಯ ದಿನಸಿ ವಸ್ತುಗಳ ದರ ಏರಿಕೆಯಿಂದ ಕುಟುಂಬಗಳ ಮಾಸಿಕ ಬಜೆಟ್ ಮೇಲೆ ಒತ್ತಡ ಹೆಚ್ಚಾಗಿದೆ. ವಿಶೇಷವಾಗಿ ಕಡಿಮೆ ಆದಾಯದ ಕುಟುಂಬಗಳು ದರ ಏರಿಕೆಯ ಪರಿಣಾಮವನ್ನು ಹೆಚ್ಚು ಎದುರಿಸುವಂತಾಗಿದ್ದು, ಮಾರುಕಟ್ಟೆಯಲ್ಲಿ ಬೆಲೆ ನಿಯಂತ್ರಣಕ್ಕೆ ಕ್ರಮ ಕೈಗೊಳ್ಳಬೇಕೆಂಬ ಬೇಡಿಕೆ ಕೇಳಿಬರುತ್ತಿದೆ.

# 'ಮೈ ಹೂಂ ದುರ್ಗಾ' ಅಭಿಯಾನ: ಯುವತಿಯರಿಗೆ ಉಚಿತ ಆತ್ಮರಕ್ಷಣಾ ತರಬೇತಿ

● ವಿಕ್ರಮ ವಾಹಿನಿ । ನವದೆಹಲಿ

ನವರಾತ್ರಿ ಉತ್ಸವದ ಅಂಗವಾಗಿ ಹಿಂದೂ ಜನಜಾಗೃತಿ ಸಮಿತಿ ದೇಶಾದ್ಯಂತ 'ಮೈ ಹೂಂ ದುರ್ಗಾ' ಅಭಿಯಾನ ಹಮ್ಮಿಕೊಂಡಿದ್ದು, ವಿವಿಧ ನಗರಗಳಲ್ಲಿ ಯುವತಿಯರು ಮತ್ತು ಮಹಿಳೆಯರಿಗಾಗಿ ಉಚಿತ ಆತ್ಮರಕ್ಷಣಾ ತರಬೇತಿ ಶಿಬಿರಗಳನ್ನು ಆಯೋಜಿಸುತ್ತಿದೆ.

ಅಭಿಯಾನದಡಿ ಮಹಿಳಾ ಸುರಕ್ಷತೆ ಕುರಿತು ಜಾಗೃತಿ ಮೂಡಿಸುವ ವಿಡಿಯೋಗಳು ಹಾಗೂ ಶೌರ್ಯಗೀತೆ ಬಿಡುಗಡೆ ಮಾಡಲಾಗುವುದು ಎಂದು ಸಮಿತಿಯ ರಾಷ್ಟ್ರೀಯ ವಕ್ತಾರ ರಮೇಶ ಶಿಂದೆ ತಿಳಿಸಿದ್ದಾರೆ.



ಯುವತಿಯರು ಚುಡಾಯಿಸುವಿಕೆ, ಹಿಂಬಾಲಿಸುವಿಕೆ, ಆನ್‌ಲೈನ್ ಕಿರುಕುಳ, ಲೈಂಗಿಕ ದೌರ್ಜನ್ಯ, ಬ್ಲ್ಯಾಕ್‌ಮೇಲ್ ಸೇರಿದಂತೆ ವಿವಿಧ ಅಪಾಯಗಳನ್ನು ಎದುರಿಸುತ್ತಿದ್ದಾರೆ. ಇಂತಹ ಸಂದರ್ಭಗಳಲ್ಲಿ ಭಯಪಡದೆ ಅಪಾಯವನ್ನು ಗುರುತಿಸಿ, ಸೂಕ್ತ ನಿರ್ಧಾರ ಕೈಗೊಳ್ಳುವ ಜತೆಗೆ ಆತ್ಮರಕ್ಷಣೆಯ ಕೌಶಲ ಬೆಳೆಸಿಕೊಳ್ಳುವುದು ಅಗತ್ಯ ಎಂದು ಅವರು ಹೇಳಿದ್ದಾರೆ.

ತರಬೇತಿ ಶಿಬಿರಗಳಲ್ಲಿ ದೈಹಿಕ ಪ್ರತಿರೋಧದ ತಂತ್ರಗಳ ಜತೆಗೆ ಅಪಾಯದ ಮುನ್ಸೂಚನೆ ಗುರುತಿಸುವುದು, ತುರ್ತು ಸಂದರ್ಭದಲ್ಲಿ ನಿರ್ಧಾರ ಕೈಗೊಳ್ಳುವುದು ಹಾಗೂ ಮಾನಸಿಕವಾಗಿ ಸದೃಢವಾಗಿರುವ ಕುರಿತು ಮಾರ್ಗದರ್ಶನ ನೀಡಲಾಗುವುದು.

15 ವರ್ಷ ಮೇಲ್ಪಟ್ಟ ಯುವತಿಯರಿಗೆ ಶಿಬಿರಗಳಲ್ಲಿ ಭಾಗವಹಿಸಲು ಅವಕಾಶವಿದೆ ಎಂದು ಸಮಿತಿ ತಿಳಿಸಿದೆ.

ಹೆಚ್ಚಿನ ಸಂಖ್ಯೆಯಲ್ಲಿ ಯುವತಿಯರು ಅಭಿಯಾನದಲ್ಲಿ ಪಾಲ್ಗೊಂಡು ಆತ್ಮರಕ್ಷಣಾ ತರಬೇತಿ ಪಡೆಯಬೇಕು ಎಂದು ಸಮಿತಿ ಕರೆ ನೀಡಿದೆ. ತರಬೇತಿ ಹಾಗೂ ನೋಂದಣಿ ಕುರಿತ ಹೆಚ್ಚಿನ ಮಾಹಿತಿಯನ್ನು ಹಿಂದೂ ಜನಜಾಗೃತಿ ಸಮಿತಿಯ ವೆಬ್‌ಸೈಟ್‌ನಲ್ಲಿ ಪಡೆಯಬಹುದು.

# ದಸರಾ ವೇಳೆ ಕಂಬಳ ಆಯೋಜನೆಗೆ ಯದುವೀರ್ ಆಕ್ಷೇಪ

● ವಿಕ್ರಮ ವಾಹಿನಿ । ಮೈಸೂರು

ಕಂಬಳ ಕ್ರೀಡೆಗೆ ತಮ್ಮ ವಿರೋಧವಿಲ್ಲ. ಆದರೆ, ಕರಾವಳಿ ಭಾಗದ ಗ್ರಾಮೀಣ ಕ್ರೀಡೆಯಾದ ಕಂಬಳವನ್ನು ದಸರಾ ಸಂದರ್ಭದಲ್ಲಿ ಮೈಸೂರಿನಲ್ಲಿ ಆಯೋಜಿಸುವುದಕ್ಕೆ ಆಕ್ಷೇಪವಿದೆ ಎಂದು ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಹೇಳಿದರು.

ಮೈಸೂರಿನಲ್ಲಿ ಬುಧವಾರ ಪತ್ರಕರ್ತರೊಂದಿಗೆ ಮಾತನಾಡಿದ ಅವರು, ಕಂಬಳಕ್ಕೆ ತನ್ನದೇ ಆದ ಸಂಪ್ರದಾಯ ಹಾಗೂ ವೈಶಿಷ್ಟ್ಯವಿದೆ. ಹೀಗಾಗಿ ದಸರಾ ಸಂದರ್ಭದಲ್ಲಿ ಕಂಬಳ ಆಯೋಜಿಸುವ ಅಗತ್ಯವಿರಲಿಲ್ಲ ಎಂಬುದು ತಮ್ಮ ನಿಲುವು ಎಂದು ತಿಳಿಸಿದರು.

ಚಾಮುಂಡಿಬೆಟ್ಟದಲ್ಲಿ ಮಹಿಷ ದಸರಾ ಆಚರಣೆ ಕುರಿತು ಪ್ರತಿಕ್ರಿಯಿಸಿದ ಅವರು, ಎಲ್ಲರಿಗೂ ಧಾರ್ಮಿಕ ಆಚರಣೆಯ ಹಕ್ಕಿದೆ. ಆದರೆ, ಇತರರ ಭಾವನೆಗಳಿಗೆ ಧಕ್ಕೆಯಾಗದಂತೆ ಆಚರಣೆ ನಡೆಸಬೇಕು. ಚಾಮುಂಡಿಬೆಟ್ಟದಲ್ಲಿ ಮಹಿಷ ದಸರಾ ನಡೆಸುವುದಕ್ಕೆ ತಮ್ಮ ವಿರೋಧವಿದೆ ಎಂದರು.

ಇದೇ ವೇಳೆ, ಬರಗಾಲದ ಸಂದರ್ಭದಲ್ಲಿ ದಸರಾ ವೇಳೆ ಕಂಬಳ ಆಯೋಜಿಸಿರುವುದನ್ನು ವಿರೋಧಿಸಿ ಸಾತಗಳ್ಳಿಯ ಟಿಟಿಯು ಕಾಲೇಜು ಬಳಿ ವಿವಿಧ ಸಂಘಟನೆಗಳ ಮುಖಂಡರು ಖಾಲಿ ಕೊಡಗಳನ್ನು ಹಿಡಿದು ಪ್ರತಿಭಟನೆ ನಡೆಸಿದರು. ಪರಿಸರವಾದಿಗಳು, ರೈತರು, ದಲಿತರು, ಕಾರ್ಮಿಕ ಹಾಗೂ ಕನ್ನಡಪರ ಸಂಘಟನೆಗಳ ಮುಖಂಡರು ಸರ್ಕಾರದ ಕ್ರಮವನ್ನು ವಿರೋಧಿಸಿದರು.



# ಸೇವಾ ಜ್ಯೋತಿ ಯಾತ್ರೆ

● ವಿಕ್ರಮ ವಾಹಿನಿ । ಬೆಂಗಳೂರು

ಸೇವಾ ಸಂಕಲ್ಪ ಅಭಿಯಾನದ ಪ್ರಯುಕ್ತ ನಡೆಯುತ್ತಿರುವ ಸೇವಾ ಜ್ಯೋತಿ ಯಾತ್ರೆಯ ಸಮಾರೋಪ ಸಮಾರಂಭವು ಡಾ. ಎಂ.ಸಿ. ಮೋದಿ ಆಸ್ಪತ್ರೆಯ ರಸ್ತೆಯಲ್ಲಿರುವ ಶಂಕರಮಠ ಆಟದ ಮೈದಾನದಲ್ಲಿ ನಡೆಯಿತು.

ಬಿಜೆಪಿ ಕೇಂದ್ರ ಸಂಸದೀಯ ಮಂಡಳಿ ಸದಸ್ಯ ಮತ್ತು ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ, ಕೇಂದ್ರ ಸಚಿವರಾದ ಕು. ಶೋಭಾ ಕರಂದ್ಲಾಜೆ, ಸಂಸದರಾದ ಪಿ.ಸಿ. ಮೋಹನ್, ತೇಜಸ್ವಿ ಸೂರ್ಯ, ರಾಜ್ಯಸಭಾ ಸದಸ್ಯ ಜಗ್ಗೇಶ್, ಮಾಜಿ ಡಿಸಿಎಂ ಡಾ. ಸಿ.ಎನ್. ಅಶ್ವಥ್ ನಾರಾಯಣ್, ಮಾಜಿ ಸಚಿವರಾದ ಸುರೇಶ್ ಕುಮಾರ್, ಗೋಪಾಲಯ್ಯ, ವಿಧಾನಪರಿಷತ್ ಸದಸ್ಯ ಎಸ್.ರಘು, ಬೆಂಗಳೂರು ದಕ್ಷಿಣ ಜಿಲ್ಲಾಧ್ಯಕ್ಷ ಮತ್ತು ಶಾಸಕ ಸಿ.ಕೆ.ರಾಮಮೂರ್ತಿ, ಬೆಂಗಳೂರು ಉತ್ತರ ಜಿಲ್ಲಾಧ್ಯಕ್ಷ ಎಸ್.ಹರೀಶ್, ಬೆಂಗಳೂರು ಕೇಂದ್ರ ಜಿಲ್ಲಾಧ್ಯಕ್ಷ ಸಪ್ತಗಿರಿ ಗೌಡ, ಮಾಜಿ ಶಾಸಕ ಎಂ.ಬಿ.ಲಕ್ಷ್ಮೀನಾರಾಯಣ್, ಪ್ರಕೋಷ್ಠಗಳ ರಾಜ್ಯ ಸಂಚಾಲಕ ಎಸ್.ದತ್ತಾತ್ರಿ, ಪ್ರಮುಖರು ಹಾಗೂ ಕಾರ್ಯಕರ್ತರು ಇದ್ದರು.

# ಶ್ರೀ ವಿಜ್ಞಾನ ನಿಧಿ ತೀರ್ಥರ ಆರಾಧನಾ ಮಹೋತ್ಸವ

● ವಿಕ್ರಮ ವಾಹಿನಿ । ಮುಳಬಾಗಿಲು

ಶ್ರೀಪಾದರಾಜ ಮಠದ 35ನೇ ಪೀಠಾಧಿಪತಿಗಳಾದ ಶ್ರೀ ವಿಜ್ಞಾನ ನಿಧಿ ತೀರ್ಥರ ಆರಾಧನಾ ಮಹೋತ್ಸವ ಗುರುವಾರ ಭಾದ್ರಪದ ಬಹುಳ ತ್ರಯೋದಶಿಯಂದು ಮುಳಬಾಗಿಲಿನ ಶ್ರೀ ನರಸಿಂಹತೀರ್ಥದಲ್ಲಿ ನಡೆಯಲಿದೆ. ಶಾಂತಿ, ಸಾಮರಸ್ಯ ಹಾಗೂ ಸಂತೋಷದ ಆಶಯದೊಂದಿಗೆ 2001ರಲ್ಲಿ ಇನ್‌ಸ್ಟಿಟ್ಯೂಟ್ ಫಾರ್ ವೇದಿಕ್ ಸೈನ್ಸಸ್ ಸ್ಥಾಪನೆಯಲ್ಲಿ ಶ್ರೀ ದೇವೇಂದ್ರ ತೀರ್ಥರು ಹಾಗೂ ಶ್ರೀ ವಿಜ್ಞಾನ ನಿಧಿ ತೀರ್ಥರು ಪ್ರಮುಖ ಪಾತ್ರ ವಹಿಸಿದ್ದರು. ವೈದಿಕ ಅಧ್ಯಯನ ಹಾಗೂ ಧಾರ್ಮಿಕ ಪರಂಪರೆಯ ಪ್ರಸಾರಕ್ಕೆ ಇಬ್ಬರೂ ಶ್ರಮಿಸಿದ್ದರು.

**92 ವರ್ಷಗಳ ಭಗವದ್ಭಕ್ತಿ:** ಶ್ರೀ ವಿಜ್ಞಾನ ನಿಧಿ ತೀರ್ಥರ ಪೂರ್ವಾಶ್ರಮದ ಹೆಸರು ಶ್ರೀ ಭೀಮಾಚಾರ್. ಮುಳಬಾಗಿಲು ಸಮೀಪದ ಹೆಬ್ಬಣಿಯಲ್ಲಿ ಜನಿಸಿದ ಅವರು, ಶ್ರೀ ವಿಜಯನಿಧಿ ತೀರ್ಥರಿಂದ ಆಶ್ರಮ ಶಿಕ್ಷಣ ಪಡೆದು, 2010ರಲ್ಲಿ ಶ್ರೀಪಾದರಾಜ ಮಠದ ಪೀಠಾಧಿಪತ್ಯ ಸ್ವೀಕರಿಸಿದ್ದರು. ಶ್ರೀ ಕೇಶವನಿಧಿ ತೀರ್ಥರು ಅವರ ಆಶ್ರಮ ಶಿಷ್ಯರಾಗಿದ್ದರು. 92 ವರ್ಷಗಳ ತುಂಬು ಜೀವನವನ್ನು ಭಗವದ್ಭಕ್ತಿ, ಧಾರ್ಮಿಕ ಸೇವೆ ಹಾಗೂ ವೈದಿಕ ಪರಂಪರೆಯ ಸಂರಕ್ಷಣೆಗೆ ಮುಡಿಪಾಗಿಟ್ಟಿದ್ದರು.



**'ಯತಿಕುಲ ಚಕ್ರವರ್ತಿ' ಬಿರುದು:** ಶ್ರೀ ವಿಜ್ಞಾನ ನಿಧಿ ತೀರ್ಥರು ಸಾಂಖ್ಯಶಾಸ್ತ್ರದಲ್ಲಿ ಪ್ರವೀಣರಾಗಿದ್ದರು. ಬೃಂದಾವನ ಪ್ರವೇಶಕ್ಕೂ ಎಂಟು ದಿನಗಳ ಮುನ್ನ ಮಂತ್ರಾಲಯ ಮಠದ ಶ್ರೀ ಸುಯತೀಂದ್ರ ತೀರ್ಥರು ಅವರಿಗೆ 'ಯತಿಕುಲ ಚಕ್ರವರ್ತಿ' ಎಂಬ ಬಿರುದು ನೀಡಿ ಗೌರವಿಸಿದ್ದರು. ತಮ್ಮ ಮಠದ ಮೂಲ ಯತಿಗಳಾದ ಶ್ರೀ ಪದ್ಮನಾಭ ತೀರ್ಥರ ಮೃತ್ತಿಕಾ ಬೃಂದಾವನವನ್ನು ಮುಳಬಾಗಿಲಿನಲ್ಲಿ ಪ್ರತಿಷ್ಠಾಪಿಸಿದ ಅವರು, ಅದರ 600ನೇ ಆರಾಧನೆಯನ್ನು ವಿಜೃಂಭಣೆಯಿಂದ ಆಚರಿಸಿದ್ದರು.

**ವಿವಿಧೆಡೆ ಮೃತ್ತಿಕಾ ಬೃಂದಾವನ ಪ್ರತಿಷ್ಠಾಪನೆ:** 1993ರಲ್ಲಿ ಶಾಕಾಂಬರಿ ನಗರ ರಾಯರ ಮಠದಲ್ಲಿ ಮೃತ್ತಿಕಾ ಬೃಂದಾವನ ಪ್ರತಿಷ್ಠಾಪಿಸಿ, ಅಲ್ಲಿ ಗೋಪೀನಾಥ ದೇವರ ಪೂಜಾ ಪರಂಪರೆಯನ್ನು ಮುಂದುವರಿಸಿದ್ದರು. ರಾಜರಾಜೇಶ್ವರಿ ನಗರದಲ್ಲಿಯೂ ಶ್ರೀಪಾದರಾಜರ ಮೃತ್ತಿಕಾ ಬೃಂದಾವನ ಪ್ರತಿಷ್ಠಾಪಿಸಿದ್ದರು. ಅನೇಕ ಮಾಧ್ವ ಪಂಡಿತರನ್ನು ಗೌರವಿಸಿ, ಧಾರ್ಮಿಕ ಹಾಗೂ ವೈದಿಕ ಕ್ಷೇತ್ರಕ್ಕೆ ಅವರು ನೀಡಿದ ಕೊಡುಗೆ ಸ್ಮರಣೀಯವಾಗಿದೆ.

ಶ್ರೀ ವಿಜ್ಞಾನ ನಿಧಿ ತೀರ್ಥರು ಭಾದ್ರಪದ ಕೃಷ್ಣ ತ್ರಯೋದಶಿಯಂದು ಬೃಂದಾವನ ಪ್ರವೇಶ ಮಾಡಿದ್ದು, ಇದೇ ತಿಥಿಯಲ್ಲಿ ನಡೆಯುವ ಆರಾಧನಾ ಮಹೋತ್ಸವವು ಅವರ ಧಾರ್ಮಿಕ ಸೇವೆ ಮತ್ತು ವೈದಿಕ ಪರಂಪರೆಯನ್ನು ಸ್ಮರಿಸುವ ಸಂದರ್ಭವಾಗಿದೆ.

# ಬಿಡಿಎ ಅಧ್ಯಕ್ಷರ ಕುರ್ಚಿಯಲ್ಲಿ ಅಂಧ ಬಾಲಕ

● ವಿಕ್ರಮ ವಾಹಿನಿ । ಬೆಂಗಳೂರು

ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ (ಬಿಡಿಎ) ಕಚೇರಿಯಲ್ಲಿ ದೃಷ್ಟಿಹೀನ ಮಕ್ಕಳಿಗೆ ಆತ್ಮವಿಶ್ವಾಸ ತುಂಬುವ ವಿಶೇಷ ಕಾರ್ಯಕ್ರಮ ನಡೆಯಿತು. 'ಜ್ಯೋತಿ ಸೇವಾ ಸ್ಕೂಲ್ ಫಾರ್ ಬ್ಲೈಂಡ್'ನ 65 ವಿದ್ಯಾರ್ಥಿಗಳನ್ನು ಬಿಡಿಎ ಕಚೇರಿಗೆ ಆಹ್ವಾನಿಸಿ, ಅಧಿಕಾರಿಗಳ ಕಾರ್ಯವೈಖರಿ ಹಾಗೂ ಆಡಳಿತ ವ್ಯವಸ್ಥೆಯ ಪರಿಚಯ ಮಾಡಿಕೊಡಲಾಯಿತು.

ಈ ವೇಳೆ ಬಿಡಿಎ ಅಧ್ಯಕ್ಷ ಎನ್.ಎ. ಹ್ಯಾರಿಸ್ ಅವರು ರಾಹುಲ್ ಎಂಬ ದೃಷ್ಟಿಹೀನ ಬಾಲಕನನ್ನು ತಮ್ಮ ಅಧಿಕೃತ ಕುರ್ಚಿಯಲ್ಲಿ ಕೂರಿಸಿ, ಸಾಂಕೇತಿಕವಾಗಿ 'ಒಂದು ದಿನದ ಬಿಡಿಎ ಅಧ್ಯಕ್ಷ'ನನ್ನಾಗಿ ಮಾಡಿದರು. ಅಧ್ಯಕ್ಷರ ಕುರ್ಚಿಯಲ್ಲಿ ಕುಳಿತ ಬಾಲಕನ ಮುಖದಲ್ಲಿ ಮೂಡಿದ ನಗು ಕಾರ್ಯಕ್ರಮದ ಪ್ರಮುಖ ಆಕರ್ಷಣೆಯಾಯಿತು.

**'ನೀವೂ ಸಮಾನರು':** ಮಕ್ಕಳನ್ನು ಉದ್ದೇಶಿಸಿ ಮಾತನಾಡಿದ ಎನ್.ಎ. ಹ್ಯಾರಿಸ್, "ಯಾರೂ ಧೃತಿಗೆಡಬೇಡಿ. ನೀವು ಸಮಾಜದ ಇತರರಂತೆ ಸಮಾನರು. ನಿಮ್ಮೊಂದಿಗೆ ನಾವಿದ್ದೇವೆ, ಸರ್ಕಾರವೂ ಇದೆ. ದೃಢಸಂಕಲ್ಪದಿಂದ ಶಿಕ್ಷಣ ಪಡೆದು ಉನ್ನತ ಸ್ಥಾನಗಳನ್ನು ಅಲಂಕರಿಸಿ" ಎಂದು ಪ್ರೇರೇಪಿಸಿದರು.

ಬಿಡಿಎ ಆಯುಕ್ತ ಮೇಜರ್ ಪಿ. ಮಣಿವಣ್ಣನ್ ಮಾತನಾಡಿ, ಮಕ್ಕಳಲ್ಲಿ ಆತ್ಮಸ್ಥೈರ್ಯ ಹಾಗೂ ಭವಿಷ್ಯದ ಕನಸುಗಳನ್ನು ಬೆಳೆಸುವುದೇ ಕಾರ್ಯಕ್ರಮದ ಉದ್ದೇಶ. ಮುಂದಿನ ದಿನಗಳಲ್ಲಿ ಮಕ್ಕಳ ಶಿಕ್ಷಣ ಹಾಗೂ ಉಜ್ವಲ ಭವಿಷ್ಯಕ್ಕೆ ಬಿಡಿಎ ಅಗತ್ಯ ಬೆಂಬಲ ನೀಡಲಿದೆ ಎಂದು ಭರವಸೆ ನೀಡಿದರು.



**ಅಧಿಕಾರಿಗಳೊಂದಿಗೆ ಬೆರೆತ ಮಕ್ಕಳು:** ಸರ್ಕಾರಿ ಕಚೇರಿಗೆ ಮೊದಲ ಬಾರಿಗೆ ಭೇಟಿ ನೀಡಿದ ಮಕ್ಕಳಿಗೆ ಆಡಳಿತ ವ್ಯವಸ್ಥೆಯ ಕುರಿತು ಮಾಹಿತಿ ನೀಡಲಾಯಿತು. ಅಧಿಕಾರಿಗಳೊಂದಿಗೆ ಮುಕ್ತವಾಗಿ ಬೆರೆತ ಮಕ್ಕಳು, ತಮಗೂ ಭವಿಷ್ಯದಲ್ಲಿ ಉನ್ನತ ಹುದ್ದೆ ಅಲಂಕರಿಸಿ ಸಮಾಜ ಸೇವೆ ಮಾಡುವ ಕನಸು ಮೂಡಿದೆ ಎಂದು ಸಂತಸ ಹಂಚಿಕೊಂಡರು. ದೃಷ್ಟಿ ಇಲ್ಲದಿದ್ದರೂ ಜೀವನದಲ್ಲಿ ಉನ್ನತ ಗುರಿ ಸಾಧಿಸುವ ಆತ್ಮವಿಶ್ವಾಸ ಹೊಂದಿರುವುದನ್ನು ಮಕ್ಕಳು ತಮ್ಮ ಮಾತುಗಳ ಮೂಲಕ ವ್ಯಕ್ತಪಡಿಸಿದರು. ಕಾರ್ಯಕ್ರಮದ ವೇಳೆ ಬಿಡಿಎ ಕಚೇರಿಯಲ್ಲಿ ಸಮಾನತೆ, ಪ್ರೋತ್ಸಾಹ ಹಾಗೂ ಭರವಸೆಯ ವಾತಾವರಣ ಮೂಡಿತ್ತು.

# ಹಾಫ್ ಹೆಲ್ಮೆಟ್ ವಿರುದ್ಧ ತೀವ್ರಗೊಂಡ ಕ್ರಮ: ಅಧಿಕ ದಂಡ ವಿಧಿಸಲು ಮುಂದಾದ ಸಂಚಾರಿ ಪೊಲೀಸರು



● ವಿಕ್ರಮ ವಾಹಿನಿ । ಬೆಂಗಳೂರು

ದ್ವಿಚಕ್ರ ವಾಹನ ಸವಾರರ ರಸ್ತೆ ಸುರಕ್ಷತೆಯನ್ನು ಹೆಚ್ಚಿಸುವ ನಿಟ್ಟಿನಲ್ಲಿ ಕರ್ನಾಟಕ ರಾಜ್ಯ ಸಂಚಾರ ಪೊಲೀಸ್ ಇಲಾಖೆ, ಬೆಂಗಳೂರು ನಗರ ಸಂಚಾರ ಪೊಲೀಸರು (ಬಿಟಿಪಿ) ಹಾಫ್ ಹೆಲ್ಮೆಟ್ (ಅರ್ಧ ಹೆಲ್ಮೆಟ್) ಮತ್ತು ಬಿಎಸ್‌ಐ/ಐಎಸ್‌ಐ ಪ್ರಮಾಣೀಕರಣವಿಲ್ಲದ ಕಳಪೆ ಗುಣಮಟ್ಟದ ಹೆಲ್ಮೆಟ್‌ಗಳ ಬಳಕೆಯನ್ನು ಕಡ್ಡಾಯವಾಗಿ ನಿಷೇಧಿಸಿದ್ದಾರೆ. ಈ ನಿಯಮವನ್ನು ಉಲ್ಲಂಘಿಸುವ ಸವಾರರ ವಿರುದ್ಧ ದಂಡ ವಿಧಿಸುವ ಪ್ರಕ್ರಿಯೆಯನ್ನು ಸಂಚಾರ ಪೊಲೀಸರು ಚುರುಕುಗೊಳಿಸಿದ್ದಾರೆ.

ಅಪಘಾತ ಸಂಭವಿಸಿದಾಗ ಹಾಫ್ ಹೆಲ್ಮೆಟ್‌ಗಳಿಂದಾಗಿ ಸವಾರರ ತಲೆ, ಗಲ್ಲ ಹಾಗೂ ಕತ್ತಿನ ಭಾಗಕ್ಕೆ ಸೂಕ್ತ ರಕ್ಷಣೆ ಸಿಗುತ್ತಿಲ್ಲ. ಅನೇಕ ಅಪಘಾತಗಳಲ್ಲಿ ಹಾಫ್ ಹೆಲ್ಮೆಟ್ ಧರಿಸಿದ್ದರೂ ಗಂಭೀರ ತಲೆ ಏಟು ಉಂಟಾಗಿ ಜೀವಹಾನಿ ಸಂಭವಿಸುತ್ತಿದೆ. ಈ ನಿಟ್ಟಿನಲ್ಲಿ ಕಠಿಣ ನಿರ್ಧಾರ ಕೈಗೊಳ್ಳಲಾಗಿದೆ.

ಸಂಚಾರ ನಿಯಮಗಳ ಪ್ರಕಾರ, ದ್ವಿಚಕ್ರ ವಾಹನ ಸವಾರರು ಮತ್ತು ಹಿಂಬದಿ ಸವಾರರು ಕಡ್ಡಾಯವಾಗಿ ಭಾರತೀಯ ಮಾನಕ ಸಂಸ್ಥೆ (ಬಿಎಸ್‌ಐ/ಐಎಸ್‌ಐ) ಪ್ರಮಾಣೀಕೃತ ಫುಲ್–ಫೇಸ್ (Full-face) ಹೆಲ್ಮೆಟ್‌ಗಳನ್ನೇ ಧರಿಸಬೇಕು. ಬಿಎಸ್‌ಐ ಮುದ್ರೆ ಇಲ್ಲದ ಕ್ಯಾಪ್ ಹೆಲ್ಮೆಟ್ ಅಥವಾ ಹಾಫ್ ಹೆಲ್ಮೆಟ್‌ಗಳನ್ನು ಹೆಲ್ಮೆಟ್ ಎಂದು ಪರಿಗಣಿಸಲಾಗುವುದಿಲ್ಲ.

ಮೋಟಾರು ವಾಹನ ಕಾಯ್ದೆ ಅಡಿಯಲ್ಲಿ ಹಾಫ್ ಹೆಲ್ಮೆಟ್ ಅಥವಾ ಕಳಪೆ ಹೆಲ್ಮೆಟ್ ಧರಿಸಿ ಚಾಲನೆ ಮಾಡುವುದು ನಿಯಮಬಾಹಿರ. ಪ್ರಥಮ ಬಾರಿಗೆ ನಿಯಮ ಉಲ್ಲಂಘಿಸಿದರೆ ರೂ 500 ದಂಡ ವಿಧಿಸಲಾಗುತ್ತದೆ. ಮರುಕಳಿಸಿದರೆ ದಂಡದ ಜೊತೆಗೆ ಚಾಲನಾ ಪರವಾನಗಿಯನ್ನು (ಡಿಎಲ್) ಮೂರು ತಿಂಗಳ ಅವಧಿಗೆ ಅಮಾನತುಗೊಳಿಸುವ ನಿಬಂಧನೆಯಿದೆ.

ರಸ್ತೆ ಬದಿ ಹಾಗೂ ಅಂಗಡಿಗಳಲ್ಲಿ ಐಎಸ್‌ಐ ಮುದ್ರೆ ಇಲ್ಲದ, ಸುರಕ್ಷತಾ ಮಾನದಂಡಗಳಿಲ್ಲದ ಹಾಫ್ ಹೆಲ್ಮೆಟ್‌ಗಳನ್ನು ಮಾರಾಟ ಮಾಡುವವರ ವಿರುದ್ಧವೂ ಕಾನೂನು ಕ್ರಮ ಜರುಗಿಸಲಾಗುವುದು ಎಂದು ಪೊಲೀಸರು ಎಚ್ಚರಿಸಿದ್ದಾರೆ.

# ದೆಹಲಿಯಲ್ಲಿ ಕಟ್ಟಡ ಕುಸಿತ; ಮಗು, ಗರ್ಭಿಣಿ ಸೇರಿ ಮೂವರು ಸಾವು

● ವಿಕ್ರಮ ವಾಹಿನಿ । ನವದೆಹಲಿ

ಈಶಾನ್ಯ ದೆಹಲಿಯ ಸೀಮಾಪುರಿ ಪ್ರದೇಶದಲ್ಲಿ ನಾಲ್ಕು ಅಂತಸ್ತಿನ ಕಟ್ಟಡ ಕುಸಿದು ಬಿದ್ದ ಪರಿಣಾಮ ಗರ್ಭಿಣಿ ಹಾಗೂ ಮಗು ಸೇರಿದಂತೆ ಮೂವರು ಮೃತಪಟ್ಟಿದ್ದಾರೆ. ಘಟನೆಯಲ್ಲಿ ಎಂಟು ಮಂದಿ ಗಾಯಗೊಂಡಿದ್ದು, ಅವರನ್ನು ರಕ್ಷಿಸಿ ಆಸ್ಪತ್ರೆಗೆ ದಾಖಲಿಸಲಾಗಿದೆ.

ಅವಶೇಷಗಳಡಿ ಸಿಲುಕಿದ್ದವರ ರಕ್ಷಣೆಗೆ ತುರ್ತು ಕಾರ್ಯಾಚರಣೆ ನಡೆಸಲಾಯಿತು. ಸುಮಾರು ಒಂದೂವರೆ ವರ್ಷದ ಮಗುವಿನ ಮೃತದೇಹವೂ ಅವಶೇಷಗಳ ನಡುವೆ ಪತ್ತೆಯಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಮಂಗಳವಾರ ಸಂಜೆ ಉತ್ತರಾಖಂಡದಲ್ಲಿ ಸಂಭವಿಸಿದ್ದ ಭೂಕಂಪದ ಕಂಪನ ದೆಹಲಿಯಲ್ಲೂ ಅನುಭವವಾಗಿತ್ತು. ಇದರ ಬಳಿಕ ಕಟ್ಟಡದಲ್ಲಿ ಬಿರುಕುಗಳು ಕಾಣಿಸಿಕೊಂಡಿದ್ದವು ಎನ್ನಲಾಗಿದ್ದು, ಅದೇ ಕುಸಿತಕ್ಕೆ ಕಾರಣವಾಗಿರಬಹುದೆಂದು ಅಧಿಕಾರಿಗಳು ಶಂಕಿಸಿದ್ದಾರೆ. ಆದರೆ ಕಟ್ಟಡ ಕುಸಿತದ ನಿಖರ ಕಾರಣ ಇನ್ನೂ ಸ್ಪಷ್ಟವಾಗಿಲ್ಲ.

ದೆಹಲಿ ಮುನ್ಸಿಪಲ್ ಕಾರ್ಪೊರೇಷನ್ ಅಧಿಕಾರಿಗಳ ಪ್ರಕಾರ, ಭೂಕಂಪದ ಬಳಿಕ ಕಟ್ಟಡದಲ್ಲಿ ಬಿರುಕು ಕಾಣಿಸಿಕೊಂಡಿತ್ತು. ಕಟ್ಟಡವನ್ನು ಖಾಲಿ ಮಾಡುವ ಪ್ರಕ್ರಿಯೆಯಲ್ಲಿದ್ದಾಗಲೇ ಅದು ಕುಸಿದಿದೆ ಎಂದು ಸ್ಥಳೀಯರು ತಿಳಿಸಿದ್ದಾರೆ. ರಕ್ಷಣಾ ಕಾರ್ಯಾಚರಣೆ ವೇಳೆ ಅವಶೇಷಗಳಡಿ ಸಿಲುಕಿದ್ದವರ ಧ್ವನಿ ಕೇಳಿಬಂದ ಹಿನ್ನೆಲೆಯಲ್ಲಿ ಕಾರ್ಯಾಚರಣೆಯನ್ನು ತೀವ್ರಗೊಳಿಸಲಾಗಿತ್ತು.

# “ಪ್ರಕಟಣಾಪೂರ್ವ ಮತದಾರರ ಕರಡು ಬಿಜೆಪಿ ಕಾರ್ಯಕರ್ತರಿಗೆ ಸಿಕ್ಕಿದ್ದು ಹೇಗೆ?”

● ವಿಕ್ರಮ ವಾಹಿನಿ । ಹಾಸನ

ಚುನಾವಣಾ ಆಯೋಗ ಕರಡು ಮತದಾರರ ಪಟ್ಟಿ ಪ್ರಕಟಿಸುವ ಮುನ್ನವೇ ಅದರಲ್ಲಿನ ಮಾಹಿತಿಗಳು ಬಿಜೆಪಿ ಕಾರ್ಯಕರ್ತರಿಗೆ ಹೇಗೆ ಲಭ್ಯವಾದವು ಎಂಬುದರ ಬಗ್ಗೆ ಸಮಗ್ರ ತನಿಖೆ ನಡೆಸಬೇಕು ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ. ಖಂಡ್ರೆ ಆಗ್ರಹಿಸಿದರು.



ಚಿಕ್ಕಮಗಳೂರಿಗೆ ತೆರಳುವ ಮಾರ್ಗದಲ್ಲಿ ಹಾಸನದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಎಸ್‌ಐಆರ್ ಪ್ರಕ್ರಿಯೆಯ ಹೆಸರಿನಲ್ಲಿ ಬಿಜೆಪಿ ಕಾರ್ಯಕರ್ತರು ವಿವಿಧ ವಿಧಾನಸಭಾ ಕ್ಷೇತ್ರಗಳಲ್ಲಿ ಪೂರ್ವಮುದ್ರಿತ 250ರಿಂದ 300 ನಮೂನೆ–7ಗಳನ್ನು ಸಲ್ಲಿಸಿ, ಕಾಂಗ್ರೆಸ್ ಪರವಾಗಿರುವ ಅರ್ಹ ಮತದಾರರ ಹೆಸರುಗಳನ್ನು ಪಟ್ಟಿಯಿಂದ ತೆಗೆಸಲು ಪ್ರಯತ್ನಿಸುತ್ತಿದ್ದಾರೆ ಎಂದು ಆರೋಪಿಸಿದರು.

ಅರ್ಹ ಮತದಾರರು ಮನೆಯಲ್ಲಿ ಇಲ್ಲ ಅಥವಾ ಮೃತಪಟ್ಟಿದ್ದಾರೆ ಎಂದು ಪ್ರಮಾಣೀಕರಿಸಿ ನಮೂನೆ–7 ಸಲ್ಲಿಸಲಾಗುತ್ತಿದೆ. ಈ ಮಾಹಿತಿಗಳು ಹಾಗೂ ಮತದಾರರ ವಿವರಗಳು ಅವರಿಗೆ ಹೇಗೆ ಲಭ್ಯವಾದವು ಎಂಬುದನ್ನು ಪತ್ತೆಹಚ್ಚಬೇಕು. ಇದು ಗಂಭೀರ ವಿಚಾರವಾಗಿದ್ದು, ಪ್ರಜಾಪ್ರಭುತ್ವ ಹಾಗೂ ಮತದಾನದ ಹಕ್ಕಿನ ಮೇಲೆ ಪರಿಣಾಮ ಬೀರುವ ಇಂತಹ ಕ್ರಮಗಳನ್ನು ಸಹಿಸಲು ಸಾಧ್ಯವಿಲ್ಲ ಎಂದರು.

**ಮೇವು ಬೆಳೆಸಲು ರೂ 25 ಕೋಟಿ:** ರಾಜ್ಯದಲ್ಲಿ ಮಳೆ ಕೊರತೆಯಿಂದ ಬರ ಪರಿಸ್ಥಿತಿ ಉಂಟಾಗಿರುವ ಹಿನ್ನೆಲೆಯಲ್ಲಿ ಜಾನುವಾರುಗಳಿಗೆ ಮೇವಿನ ಕೊರತೆಯಾಗದಂತೆ ಮೇವು ಬೆಳೆಸಲು ಸರ್ಕಾರ ರೂ 25 ಕೋಟಿ ಬಿಡುಗಡೆ ಮಾಡಿದೆ. ಗ್ರಾಮೀಣ ಪ್ರದೇಶಗಳ ಕುಡಿಯುವ ನೀರಿನ ಸಮಸ್ಯೆ ಪರಿಹರಿಸಲು ಹಿಂದಿನ ಸರ್ಕಾರ ರೂ 117 ಕೋಟಿ ಮುಂಗಡ ನೀಡಿತ್ತು. ಇದೀಗ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಗ್ರಾಮೀಣ ವಿಧಾನಸಭಾ ಕ್ಷೇತ್ರಗಳಿಗೆ ರೂ 189 ಕೋಟಿ ನೀಡಿದ್ದು, ಒಟ್ಟು ರೂ 306 ಕೋಟಿ ಲಭ್ಯವಿದೆ. ಹೀಗಾಗಿ ಕುಡಿಯುವ ನೀರಿಗೆ ಹಣದ ಕೊರತೆಯಿಲ್ಲ ಎಂದು ತಿಳಿಸಿದರು.

**ಕೆಪಿಎಸ್ಸಿ ನೇಮಕಾತಿ ಪಾರದರ್ಶಕವಾಗಲಿ:** ಕರ್ನಾಟಕ ಲೋಕಸೇವಾ ಆಯೋಗದ ನೇಮಕಾತಿ ಪ್ರಕ್ರಿಯೆ ಪಾರದರ್ಶಕವಾಗಿರಬೇಕು. ಅರ್ಹ ಮತ್ತು ಪ್ರತಿಭಾವಂತ ಅಭ್ಯರ್ಥಿಗಳಿಗೆ ಅನ್ಯಾಯವಾಗದಂತೆ ಸರ್ಕಾರ ಈಗಾಗಲೇ ತನಿಖೆ ನಡೆಸುತ್ತಿದ್ದು, ಅರ್ಹರಿಗೆ ನ್ಯಾಯ ಒದಗಿಸಲಾಗುವುದು ಎಂದು ಖಂಡ್ರೆ ಹೇಳಿದರು.

# ಸುಳ್ಳು ಎಫ್‌ಐಆರ್ ಹಿಂಪಡೆಯಲು ಬಿಜೆಪಿ–ಜೆಡಿಎಸ್ ಆಗ್ರಹ

● ವಿಕ್ರಮ ವಾಹಿನಿ । ಬೆಂಗಳೂರು

ಮತದಾರರ ಪಟ್ಟಿ ಪರಿಶೀಲನೆಗೆ ಸಂಬಂಧಿಸಿದಂತೆ ಬಿಜೆಪಿ ಕಾರ್ಯಕರ್ತರ ವಿರುದ್ಧ ದಾಖಲಿಸಿರುವ ಎಫ್‌ಐಆರ್‌ಗಳನ್ನು ಕೂಡಲೇ ಹಿಂಪಡೆಯಬೇಕು ಎಂದು ಆಗ್ರಹಿಸಿ ಬಿಜೆಪಿ–ಜೆಡಿಎಸ್ ಮೈತ್ರಿಕೂಟದ ಮುಖಂಡರು ಜಯನಗರ ಪೊಲೀಸ್ ಠಾಣೆಗೆ ತೆರಳಿ ಮನವಿ ಸಲ್ಲಿಸಿದರು.




ಬಿಜೆಪಿ ಬೆಂಗಳೂರು ದಕ್ಷಿಣ ಜಿಲ್ಲಾಧ್ಯಕ್ಷ ಹಾಗೂ ಜಯನಗರ ಶಾಸಕ ಸಿ.ಕೆ. ರಾಮಮೂರ್ತಿ ನೇತೃತ್ವದಲ್ಲಿ ಠಾಣೆಗೆ ತೆರಳಿದ ನಿಯೋಗ, ಪೊಲೀಸರು ಏಕಪಕ್ಷೀಯವಾಗಿ ನಡೆದುಕೊಂಡು ರಾಜಕೀಯ ದುರುದ್ದೇಶದಿಂದ ಪ್ರಕರಣ ದಾಖಲಿಸಿದ್ದಾರೆ ಎಂದು ಆರೋಪಿಸಿತು. ನಕಲಿ ಹಾಗೂ ದ್ವಂದ್ವ ಮತದಾರರ ಹೆಸರುಗಳ ಪರಿಶೀಲನೆಗಾಗಿ ಬಿಜೆಪಿ ಕಾರ್ಯಕರ್ತರು ಕಾನೂನುಬದ್ಧವಾಗಿ ನಮೂನೆ–7 ಸಲ್ಲಿಸಿದ್ದಾರೆ. ಆದರೆ ಈ ಅರ್ಜಿಗಳನ್ನು ತಿರುಚಿ ಕಾರ್ಯಕರ್ತರ ವಿರುದ್ಧ ಸುಳ್ಳು ಪ್ರಕರಣ ದಾಖಲಿಸಲಾಗಿದೆ ಎಂದು ಮುಖಂಡರು ದೂರಿದರು.

ಗೌಪ್ಯವಾಗಿಡಬೇಕಾದ ಅರ್ಜಿಗಳು ಕಾಂಗ್ರೆಸ್ ಕಾರ್ಯಕರ್ತರ ಕೈಗೆ ತಲುಪಿದ್ದು ಹೇಗೆ ಎಂಬುದರ ಬಗ್ಗೆಯೂ ತನಿಖೆ ನಡೆಸಬೇಕು. ಬಳಿಕ ತರಾತುರಿಯಲ್ಲಿ ಬಿಜೆಪಿ ಕಾರ್ಯಕರ್ತರ ವಿರುದ್ಧ ಎಫ್‌ಐಆರ್ ದಾಖಲಿಸಿರುವುದು ಖಂಡನೀಯ ಎಂದು ಆಕ್ರೋಶ ವ್ಯಕ್ತಪಡಿಸಿದರು. ತಕ್ಷಣ ಪ್ರಕರಣಗಳನ್ನು ಹಿಂಪಡೆಯದಿದ್ದರೆ ಬಿಜೆಪಿ–ಜೆಡಿಎಸ್ ವತಿಯಿಂದ ಮುಂದಿನ ದಿನಗಳಲ್ಲಿ ತೀವ್ರ ಹೋರಾಟ ನಡೆಸಲಾಗುವುದು ಎಂದು ಎಚ್ಚರಿಕೆ ನೀಡಿದರು.

ನಿಯೋಗದಲ್ಲಿ ಗೋವಿಂದರಾಜನಗರ ಕ್ಷೇತ್ರದ ಮುಖಂಡ ಹಾಗೂ ಜಿಲ್ಲಾ ಉಪಾಧ್ಯಕ್ಷ ಉಮೇಶ್ ಶೆಟ್ಟಿ, ಬೆಂಗಳೂರು ದಕ್ಷಿಣ ಜಿಲ್ಲಾ ಜೆಡಿಎಸ್ ಅಧ್ಯಕ್ಷ ಕೃಷ್ಣ ಸೇರಿದಂತೆ ಜಯನಗರ ಕ್ಷೇತ್ರದ ಬಿಜೆಪಿ ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

# ಸರ್ಕಾರಿ, ಅರಣ್ಯ ಜಾಗದ ಆಸ್ತಿಯನ್ನು ತೆರಿಗೆಯಿಂದ ಕೈಬಿಡುವ ಸುತ್ತೋಲೆಗೆ ತಡೆ: ಖಂಡ್ರೆ

● ವಿಕ್ರಮ ವಾಹಿನಿ । ಚಿಕ್ಕಮಗಳೂರು

ತೆರಿಗೆ ನಿರ್ಧಾರಣೆ ಹಾಗೂ ಇ–ಸ್ವತ್ತು 2.0 ತಂತ್ರಾಂಶದಿಂದ ಸರ್ಕಾರಿ ಮತ್ತು ಅರಣ್ಯ ಭೂಮಿಯಲ್ಲಿನ ಆಸ್ತಿಗಳನ್ನು ಕೈಬಿಡುವ ಬಗ್ಗೆ ಕಳೆದ ಆಗಸ್ಟ್ 13ರಂದು ಹೊರಡಿಸಲಾಗಿರುವ ಸುತ್ತೋಲೆಗೆ ತಾತ್ಕಾಲಿಕ ತಡೆ ನೀಡುವುದಾಗಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ ಖಂಡ್ರೆ ಸ್ಪಷ್ಟಪಡಿಸಿದ್ದಾರೆ.

ಚಿಕ್ಕಮಗಳೂರಿನಲ್ಲಿಂದು ಪತ್ರಕರ್ತರು ಕೇಳಿದ ಪ್ರಶ್ನೆಗೆ ಉತ್ತರಿಸಿದ ಅವರು, ಉಭಯ ಸದನಗಳಲ್ಲಿ ಅನುಮೋದನೆಯಾಗಿ, ರಾಜ್ಯಪಾಲರ ಅಂಗೀಕಾರ ಪಡೆದ ಕಾಯಿದೆಗೆ ಸಂಬಂಧಿಸಿದಂತೆ ಈ ಸುತ್ತೋಲೆ ಹೊರಡಿಸಲಾಗಿತ್ತು. ಆದಾಗ್ಯೂ ಮುಖ್ಯಮಂತ್ರಿಗಳು ಸದನದಲ್ಲಿ ಭರವಸೆ ನೀಡಿದ್ದು, ಯಾರೂ ಆತಂಕಪಡುವ ಅಗತ್ಯವಿಲ್ಲ ಎಂದು ತಿಳಿಸಿದರು.

ಕಂದಾಯ ಇಲಾಖೆ ಮತ್ತು ಅರಣ್ಯ ಇಲಾಖೆಯ ಜಂಟಿ ಸರ್ವೆ ಪೂರ್ಣಗೊಳ್ಳುವ ತನಕ ಈ ಸಮಸ್ಯೆಗೆ ಪರಿಹಾರ ಸಿಗುವುದಿಲ್ಲ. ಹೀಗಾಗಿ ಕಂದಾಯ, ಅರಣ್ಯ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸೇರಿದಂತೆ ಬಹು ಇಲಾಖೆಯ ಅಧಿಕಾರಿಗಳ ಉನ್ನತಮಟ್ಟದ ಸಮಿತಿ ರಚಿಸಿ ಇದಕ್ಕೆ ಪರಿಹಾರ ಕಂಡುಕೊಳ್ಳಲಾಗುವುದು ಎಂದು ಈಶ್ವರ ಖಂಡ್ರೆ ಸ್ಪಷ್ಟಪಡಿಸಿದರು.

# ಜಲ ಜೀವನ್ ಮಿಷನ್ ಕಾಮಗಾರಿಗಳಿಗೆ 3ನೇ ವ್ಯಕ್ತಿಯಿಂದ ಪರಿಶೀಲನೆ: ಖಂಡ್ರೆ

● ವಿಕ್ರಮ ವಾಹಿನಿ । ಚಿಕ್ಕಮಗಳೂರು

**ಜಲ ಜೀವನ್ ಮಿಷನ್‌ನ ಬಹುಗ್ರಾಮ ಕುಡಿಯುವ ನೀರಿನ ಯೋಜನೆಗಳಲ್ಲಿ ಕಳಪೆ ಅಥವಾ ಅಪೂರ್ಣ ಕಾಮಗಾರಿ ಕಂಡುಬಂದರೆ 3ನೇ ವ್ಯಕ್ತಿಯಿಂದ ಪರಿಶೀಲನೆ ನಡೆಸಿ ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ಎಂದು ಸಚಿವ ಈಶ್ವರ ಖಂಡ್ರೆ ಎಚ್ಚರಿಸಿದ್ದಾರೆ. ರಾಜ್ಯದ 859 ಗ್ರಾಮಗಳ ಕುಡಿಯುವ ನೀರಿನ ಸಮಸ್ಯೆ ಪರಿಹಾರಕ್ಕೆ ತ್ವರಿತ ಕ್ರಮ ಕೈಗೊಳ್ಳಲಾಗುತ್ತಿದೆ ಎಂದರು.**

ಜಲ ಜೀವನ್ ಮಿಷನ್ ಅಡಿಯಲ್ಲಿ ಕೈಗೊಂಡಿರುವ ಬಹುಗ್ರಾಮ ಕುಡಿಯುವ ನೀರಿನ ಯೋಜನೆಗಳ ಕಾಮಗಾರಿ ಅಪೂರ್ಣವಾಗಿರುವುದು ಅಥವಾ ಕಳಪೆ ಗುಣಮಟ್ಟದಿಂದ ಕೂಡಿರುವುದು ಕಂಡುಬಂದರೆ, 3ನೇ ವ್ಯಕ್ತಿಯಿಂದ ಪರಿಶೀಲನೆ ನಡೆಸಿ ಸಂಬಂಧಪಟ್ಟವರ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ. ಖಂಡ್ರೆ ಹೇಳಿದರು.

ಚಿಕ್ಕಮಗಳೂರಿನಲ್ಲಿ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮಳೆ ಕೊರತೆ ಹಾಗೂ ಬರ ಪರಿಸ್ಥಿತಿಯ ನಡುವೆಯೂ ರಾಜ್ಯದ ಎಲ್ಲ ಗ್ರಾಮಗಳಿಗೂ ಶುದ್ಧ ಕುಡಿಯುವ ನೀರು ಒದಗಿಸುವುದು ಸರ್ಕಾರದ ಮೊದಲ ಆದ್ಯತೆಯಾಗಿದೆ. ರಾಜ್ಯದ 859 ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಇದ್ದು, ಖಾಸಗಿ ಕೊಳವೆಬಾವಿಗಳು ಹಾಗೂ ಟ್ಯಾಂಕರ್‌ಗಳನ್ನು ಬಾಡಿಗೆಗೆ ಪಡೆದು ನೀರು ಪೂರೈಸಲಾಗುತ್ತಿದೆ ಎಂದರು.

ಗ್ರಾಮೀಣ ಕುಡಿಯುವ ನೀರಿಗಾಗಿ ಹಿಂದಿನ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅವಧಿಯಲ್ಲಿ ರೂ 117 ಕೋಟಿ ಬಿಡುಗಡೆ ಮಾಡಲಾಗಿತ್ತು. ಇದೀಗ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಗ್ರಾಮೀಣ ವಿಧಾನಸಭಾ ಕ್ಷೇತ್ರಗಳಿಗೆ ರೂ 189 ಕೋಟಿ ಬಿಡುಗಡೆ ಮಾಡಿದ್ದಾರೆ. ಹೀಗಾಗಿ ಕುಡಿಯುವ ನೀರು ಪೂರೈಕೆಗೆ ಹಣದ ಕೊರತೆಯಿಲ್ಲ. ಯಾವುದೇ ಗ್ರಾಮದಲ್ಲಿ ನೀರಿನ ಸಮಸ್ಯೆ ಇಲಾಖೆಯ ಗಮನಕ್ಕೆ ಬಂದರೆ 24 ಗಂಟೆಗಳೊಳಗೆ ಪರಿಹಾರ ಒದಗಿಸುವಂತೆ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ತಿಳಿಸಿದರು.

**ಅರಣ್ಯ ತೀರುವಳಿ ಸಮಸ್ಯೆ ಪರಿಹಾರ:** ಜಲ ಜೀವನ್ ಮಿಷನ್‌ನ ಬಹುಗ್ರಾಮ ಕುಡಿಯುವ ನೀರಿನ ಯೋಜನೆಗಳ ಕಾಮಗಾರಿಗಳಿಗೆ ಕೆಲವೆಡೆ ಅರಣ್ಯ ತೀರುವಳಿ ಸಮಸ್ಯೆ ಎದುರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆ. ನಿಯಮಾನುಸಾರ ಆದಷ್ಟು ಶೀಘ್ರ ಸಮಸ್ಯೆ ಬಗೆಹರಿಸಿ ಕಾಮಗಾರಿಗಳಿಗೆ ವೇಗ ನೀಡಲಾಗುವುದು ಎಂದರು.

**ಗ್ರಾಮೀಣ ರಸ್ತೆಗಳ ಅಭಿವೃದ್ಧಿಗೆ ಒತ್ತು:** ರಾಜ್ಯದಲ್ಲಿ ಸುಮಾರು 2 ಲಕ್ಷ ಕಿ.ಮೀ. ಗ್ರಾಮೀಣ ರಸ್ತೆ ಇದ್ದು, ಇದರಲ್ಲಿ ಶೇ.50ರಷ್ಟು ಮಣ್ಣಿನ ರಸ್ತೆಗಳಿವೆ. ಸಂಚಾರದ ಅಗತ್ಯವಿರುವ ಪ್ರತಿಯೊಂದು ಗ್ರಾಮಕ್ಕೂ ಕನಿಷ್ಠ ಒಂದು ಸಂಪರ್ಕ ರಸ್ತೆ ಕಲ್ಪಿಸುವ ಉದ್ದೇಶದಿಂದ ಗ್ರಾಮೀಣ ರಸ್ತೆಗಳ ಅಭಿವೃದ್ಧಿಗೆ ಸರ್ಕಾರ ಯೋಜನೆ ರೂಪಿಸಿದೆ ಎಂದು ಹೇಳಿದರು.

ಆದರ್ಶ ಗ್ರಾಮಗಳ ನಿರ್ಮಾಣಕ್ಕೆ ಆದ್ಯತೆ ನೀಡಲಾಗುತ್ತಿದ್ದು, ಗ್ರಾಮೀಣ ಪ್ರದೇಶದಲ್ಲಿ ಹಸಿ ಹಾಗೂ ಘನ ತ್ಯಾಜ್ಯವನ್ನು ವೈಜ್ಞಾನಿಕವಾಗಿ ವಿಲೇವಾರಿ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ. ಅಭಿವೃದ್ಧಿಶೀಲ ಗ್ರಾಮೀಣ ಕರ್ನಾಟಕ ನಿರ್ಮಾಣಕ್ಕೆ ಸರ್ಕಾರ ಬದ್ಧವಾಗಿದೆ ಎಂದರು.

**ವಿಬಿಜಿ–ರಾಮ್‌ಜಿ ಯೋಜನೆಯಿಂದ ರಾಜ್ಯಕ್ಕೆ ಹೆಚ್ಚಿನ ಹೊರೆ:** ಹಿಂದಿನ ಯುಪಿಎ ಸರ್ಕಾರದ ಅವಧಿಯಲ್ಲಿ ಜಾರಿಗೊಂಡಿದ್ದ ಮನರೇಗಾ ಯೋಜನೆಯಲ್ಲಿ ಕೇಂದ್ರ ಸರ್ಕಾರ ಶೇ.90 ಮತ್ತು ರಾಜ್ಯ ಸರ್ಕಾರ ಶೇ.10ರಷ್ಟು ವೆಚ್ಚ ಭರಿಸುತ್ತಿತ್ತು. ಈಗ 60:40ರ ಅನುಪಾತವಾಗಿರುವುದರಿಂದ ರಾಜ್ಯಗಳ ಮೇಲಿನ ಆರ್ಥಿಕ ಹೊರೆ ಹೆಚ್ಚಾಗಿದೆ. ಆದರೂ ಯೋಜನೆಯನ್ನು ರಾಜ್ಯದಲ್ಲಿ ಯಶಸ್ವಿಯಾಗಿ ಅನುಷ್ಠಾನಗೊಳಿಸಲಾಗುತ್ತಿದೆ ಎಂದರು.

ರಾಜ್ಯದಲ್ಲಿ ಈವರೆಗೆ 1.89 ಕೋಟಿ ಮಾನವ ದಿನಗಳನ್ನು ಸೃಷ್ಟಿಸಲಾಗಿದ್ದು, ದೇಶದಲ್ಲೇ ಕರ್ನಾಟಕ ಆರನೇ ಸ್ಥಾನದಲ್ಲಿದೆ. ಪ್ರತಿದಿನ ಸುಮಾರು 2.5 ಲಕ್ಷ ಗ್ರಾಮೀಣ ಜನರು ಯೋಜನೆಯಡಿ ಕೆಲಸ ಮಾಡುತ್ತಿದ್ದು, ರೂ 382 ಕೂಲಿ ನೀಡಲಾಗುತ್ತಿದೆ ಎಂದು ತಿಳಿಸಿದರು.

ಬರ ಪರಿಸ್ಥಿತಿಯಲ್ಲಿ ವೈಯಕ್ತಿಕ ಫಲಾನುಭವಿಗಳಿಗೆ ಕೊಳವೆಬಾವಿ ಮರುಪೂರಣ, ಬಾವಿ ನಿರ್ಮಾಣ, ಕೃಷಿ ಹೊಂಡ ಹಾಗೂ ಚೆಕ್‌ಡ್ಯಾಂ ನಿರ್ಮಾಣಕ್ಕೆ ಅವಕಾಶ ಕಲ್ಪಿಸಲಾಗಿದೆ. ಶಾಲಾ ಆವರಣಗೋಡೆ, ಆಸ್ಪತ್ರೆ ಕಟ್ಟಡ ಸೇರಿದಂತೆ ವಿವಿಧ ಶಾಶ್ವತ ಆಸ್ತಿಗಳ ನಿರ್ಮಾಣಕ್ಕೂ ಯೋಜನೆಯಡಿ ಅವಕಾಶವಿದ್ದು, ಗ್ರಾಮೀಣ ಜನರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಮನವಿ ಮಾಡಿದರು. ಶಾಸಕರಾದ ರಾಜೇಗೌಡ, ಗಾಯತ್ರಿ ಶಾಂತೇಗೌಡ, ಇಲಾಖೆಯ ಆಯುಕ್ತ ವೈ.ಎಸ್. ಪಾಟೀಲ್ ಸೇರಿದಂತೆ ಅಧಿಕಾರಿಗಳು ಉಪಸ್ಥಿತರಿದ್ದರು.

# ಜೀವಂತವರನ್ನೇ ಸಾಯಿಸಿ ರೇಷನ್ ಕಾರ್ಡ್ ರದ್ದು!

● ವಿಕ್ರಮ ವಾಹಿನಿ । ಬೆಂಗಳೂರು/ಮಂಡ್ಯ

ರಾಜ್ಯದಲ್ಲಿ ಮತದಾರರ ಪಟ್ಟಿ ಪರಿಷ್ಕರಣೆ, ಎಸ್‌ಐಆರ್ ಹಾಗೂ ಫಾರ್ಮ್–7 ದುರ್ಬಳಕೆ ಕುರಿತು ರಾಜಕೀಯ ಆರೋಪ–ಪ್ರತ್ಯಾರೋಪಗಳು ನಡೆಯುತ್ತಿರುವ ನಡುವೆಯೇ, ಜೀವಂತವಾಗಿರುವವರನ್ನೇ ಸರ್ಕಾರಿ ದಾಖಲೆಗಳಲ್ಲಿ ಮೃತಪಟ್ಟಿದ್ದಾರೆ ಎಂದು ನಮೂದಿಸಿ ರೇಷನ್ ಕಾರ್ಡ್‌ಗಳನ್ನು ರದ್ದುಗೊಳಿಸಿರುವ ಆರೋಪಗಳು ಮಂಡ್ಯದಲ್ಲಿ ಕೇಳಿಬಂದಿವೆ.

ಪಾಂಡವಪುರ ತಾಲೂಕಿನ ಹಾರುವಳ್ಳಿ ಗ್ರಾಮದ ಗಿರಿಯಮ್ಮ ಹಾಗೂ ಮಂಡ್ಯದ ಗುತ್ತಲು ಬಡಾವಣೆಯ ಶಫಿಉಲ್ಲಾಖಾನ್ ಅವರ ಪ್ರಕರಣಗಳು ಇದೀಗ ಬೆಳಕಿಗೆ ಬಂದಿವೆ. ರೇಷನ್ ಕಾರ್ಡ್‌ಗೆ ಹೆಬ್ಬೆಟ್ಟು ನೀಡಲು ತೆರಳಿದಾಗ ಗಿರಿಯಮ್ಮ ಮೃತಪಟ್ಟಿದ್ದಾರೆ ಎಂದು ದಾಖಲೆಗಳಲ್ಲಿ ನಮೂದಿಸಿರುವುದು ಗೊತ್ತಾಗಿದೆ. ಸಮಸ್ಯೆ ಸರಿಪಡಿಸುವಂತೆ ಅವರು ಹಲವು ದಿನಗಳಿಂದ ಕಚೇರಿಗಳಿಗೆ ಅಲೆದಾಡಿದ್ದಾರೆ ಎನ್ನಲಾಗಿದೆ.

ಇದೇ ವೇಳೆ ಶಫಿಉಲ್ಲಾಖಾನ್ ಅವರಿಗೆ ಕಳೆದ ಮೂರು ತಿಂಗಳಿಂದ ಪಡಿತರ ಸಿಗದೆ, ಕಾರಣ ತಿಳಿಯಲು ಅಧಿಕಾರಿಗಳನ್ನು ಸಂಪರ್ಕಿಸಿದಾಗ 2024ರಲ್ಲೇ ಮೃತಪಟ್ಟಿದ್ದಾರೆ ಎಂದು ದಾಖಲೆಗಳಲ್ಲಿ ನಮೂದಿಸಿರುವುದು ಬೆಳಕಿಗೆ ಬಂದಿದೆ. ಅಲ್ಲದೆ, ಅವರ ಹೆಸರಿನಲ್ಲಿ ಮರಣ ಪ್ರಮಾಣಪತ್ರವೂ ಸೃಷ್ಟಿಯಾಗಿರುವುದು ಕುಟುಂಬಕ್ಕೆ ಆಘಾತ ಉಂಟುಮಾಡಿದೆ.

ಬದುಕಿರುವವರನ್ನೇ ಮೃತಪಟ್ಟಿದ್ದಾರೆ ಎಂದು ನಮೂದಿಸಿ ಪಡಿತರ ಚೀಟಿ ರದ್ದುಪಡಿಸಿರುವ ಪ್ರಕರಣಗಳು ಇನ್ನೂ ಇರುವ ಸಾಧ್ಯತೆ ಇದ್ದು, ಈ ಬಗ್ಗೆ ಸಮಗ್ರ ಪರಿಶೀಲನೆ ನಡೆಸಿ ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂಬ ಆಗ್ರಹ ಕೇಳಿಬಂದಿದೆ. ಘಟನೆಗಳ ಕುರಿತು ಸಂಬಂಧಪಟ್ಟ ಅಧಿಕಾರಿಗಳು ಸ್ಪಷ್ಟನೆ ನೀಡಬೇಕಿದೆ.

# ಐಐಎಸ್‌ಸಿ ಪ್ರೊ. ಮಹೇಶ್ ಕಾಕಡೆಗೆ 2026ರ ರಾಮಾನುಜನ್ ಪ್ರಶಸ್ತಿ

● ವಿಕ್ರಮ ವಾಹಿನಿ । ನವದೆಹಲಿ

ಬೆಂಗಳೂರಿನ ಭಾರತೀಯ ವಿಜ್ಞಾನ ಸಂಸ್ಥೆ (ಐಐಎಸ್‌ಸಿ)ಯ ಪ್ರಾಧ್ಯಾಪಕ ಮಹೇಶ್ ಕಾಕಡೆ ಅವರಿಗೆ 2026ರ ರಾಮಾನುಜನ್ ಪ್ರಶಸ್ತಿ ಲಭಿಸಿದೆ. ಅಭಿವೃದ್ಧಿಶೀಲ ರಾಷ್ಟ್ರಗಳ ಯುವ ಗಣಿತಜ್ಞರಿಗಾಗಿ ನೀಡಲಾಗುವ ಪ್ರತಿಷ್ಠಿತ ಪ್ರಶಸ್ತಿಗೆ ಅವರು ಆಯ್ಕೆಯಾಗಿದ್ದು, ಸಂಖ್ಯಾ ಸಿದ್ಧಾಂತ ಕ್ಷೇತ್ರದ ಮಹತ್ವದ ಕೊಡುಗೆಗಳನ್ನು ಗುರುತಿಸಿ ಈ ಗೌರವ ನೀಡಲಾಗಿದೆ.



ಕಾಕಡೆ ಅವರ ಬೀಜಗಣಿತೀಯ ಸಂಖ್ಯಾ ಸಿದ್ಧಾಂತದಲ್ಲಿನ ಸಂಶೋಧನೆ, ವಿಶೇಷವಾಗಿ ನಾನ್‌ಕಮ್ಯೂಟೇಟಿವ್ ಇವಾಸವಾ ಸಿದ್ಧಾಂತ ಹಾಗೂ ಗ್ರಾಸ್–ಸ್ಟಾರ್ಕ್ ಮತ್ತು ಬ್ರೂಮರ್–ಸ್ಟಾರ್ಕ್ ಊಹೆಗಳ ಕುರಿತ ಮಹತ್ವದ ಕಾರ್ಯವನ್ನು ಪ್ರಶಸ್ತಿ ಸಮಿತಿ ಗುರುತಿಸಿದೆ. ಅವರ ಸಂಶೋಧನೆಗೆ ಗಣಿತಶಾಸ್ತ್ರದ ಪ್ರಮುಖ ಸಮಸ್ಯೆಗಳಲ್ಲಿ ಒಂದಾದ ಹಿಲ್ಬರ್ಟ್‌ನ 12ನೇ ಸಮಸ್ಯೆಯೊಂದಿಗೂ ಸಂಬಂಧವಿದೆ.

**45 ವರ್ಷದೊಳಗಿನ ಗಣಿತಜ್ಞರಿಗೆ ಪ್ರಶಸ್ತಿ:** ಅಂತರರಾಷ್ಟ್ರೀಯ ಸೈದ್ಧಾಂತಿಕ ಭೌತಶಾಸ್ತ್ರ ಕೇಂದ್ರ (ಐಸಿಟಿಪಿ) ಹಾಗೂ ಅಂತರರಾಷ್ಟ್ರೀಯ ಗಣಿತ ಒಕ್ಕೂಟ (ಐಎಂಯು) ಜಂಟಿಯಾಗಿ ಈ ಪ್ರಶಸ್ತಿಯನ್ನು ನೀಡುತ್ತವೆ. ಅಭಿವೃದ್ಧಿಶೀಲ ದೇಶಗಳಲ್ಲಿ ಅತ್ಯುತ್ತಮ ಸಂಶೋಧನೆ ನಡೆಸುತ್ತಿರುವ 45 ವರ್ಷದೊಳಗಿನ ಗಣಿತಜ್ಞರನ್ನು ಪ್ರಶಸ್ತಿಗೆ ಪರಿಗಣಿಸಲಾಗುತ್ತದೆ. ಪ್ರಶಸ್ತಿಯು 2005ರಿಂದ ನೀಡಲಾಗುತ್ತಿದ್ದು, 2026ರಲ್ಲಿ ಮಹೇಶ್ ಕಾಕಡೆ ಆಯ್ಕೆಯಾಗಿದ್ದಾರೆ. 2019ರಲ್ಲಿ ಐಐಎಸ್‌ಸಿಗೆ ಸೇರ್ಪಡೆಯಾದ ಕಾಕಡೆ ಅವರು ಈ ಹಿಂದೆ 2022ರ ಇನ್ಫೋಸಿಸ್ ಪ್ರಶಸ್ತಿಯ ಗಣಿತ ವಿಜ್ಞಾನ ವಿಭಾಗದಲ್ಲೂ ಗೌರವ ಪಡೆದಿದ್ದಾರೆ.

ಈ ಗೌರವವು ಕಾಕಡೆ ಅವರ ಸಂಶೋಧನಾ ಸಾಧನೆಗೆ ಮತ್ತಷ್ಟು ಮಾನ್ಯತೆ ನೀಡುವುದರ ಜತೆಗೆ, ಸಂಖ್ಯಾ ಸಿದ್ಧಾಂತ ಕ್ಷೇತ್ರದಲ್ಲಿ ಭಾರತದಿಂದ ನಡೆಯುತ್ತಿರುವ ಉನ್ನತ ಮಟ್ಟದ ಸಂಶೋಧನೆಗೂ ಗುರುತನ್ನು ತಂದುಕೊಟ್ಟಿದೆ.

ಕಾಕಡೆ ಅವರ ಸಂಶೋಧನೆ ಆಧುನಿಕ ಗಣಿತದ ಸಂಕೀರ್ಣ ಸಮಸ್ಯೆಗಳನ್ನು ಪರಿಹರಿಸುವ ನಿಟ್ಟಿನಲ್ಲಿ ಮಹತ್ವ ಪಡೆದಿದೆ. ಅವರ ಸಾಧನೆಗೆ ಐಐಎಸ್‌ಸಿ ಸಹೋದ್ಯೋಗಿಗಳು ಹಾಗೂ ಗಣಿತ ಕ್ಷೇತ್ರದ ತಜ್ಞರಿಂದ ಅಭಿನಂದನೆ ವ್ಯಕ್ತವಾಗಿದ್ದು, ಯುವ ಸಂಶೋಧಕರಿಗೆ ಅವರ ಸಾಧನೆ ಪ್ರೇರಣೆಯಾಗಲಿದೆ ಎಂದು ಪ್ರಶಂಸಿಸಲಾಗಿದೆ.

# ‘ಸ್ಟಿಂಗ್ ಹೆಸರಿನಲ್ಲಿ ಬ್ಲ್ಯಾಕ್‌ಮೇಲ್ ಮಾಡುವ ಚರಿತ್ರೆ ಕಾಂಗ್ರೆಸ್‌ನದ್ದು’

**ರಾಜ್ಯದಲ್ಲಿ ಸ್ಟಿಂಗ್ ಆಪರೇಷನ್ ನಡೆಸಿ ಬ್ಲ್ಯಾಕ್‌ಮೇಲ್ ಮಾಡುವ ಚರಿತ್ರೆ ಕಾಂಗ್ರೆಸ್‌ನದ್ದಾಗಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಆರೋಪಿಸಿದ್ದಾರೆ. ಸ್ಟಿಂಗ್ ನಡೆಸುತ್ತಿರುವ ಏಜೆನ್ಸಿಗಳ ಬಗ್ಗೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸ್ಪಷ್ಟನೆ ನೀಡಬೇಕು ಎಂದು ಆಗ್ರಹಿಸಿದ ಅವರು, ಲಂಚದ ಆರೋಪಗಳ ಬಗ್ಗೆಯೂ ಸರ್ಕಾರ ಉತ್ತರಿಸಬೇಕು ಎಂದು ಒತ್ತಾಯಿಸಿದರು.**

● ವಿಕ್ರಮ ವಾಹಿನಿ । ಗದಗ

ರಾಜ್ಯದಲ್ಲಿ ಸ್ಟಿಂಗ್ ಆಪರೇಷನ್ ನಡೆಸಿಸಿ ಬ್ಲ್ಯಾಕ್‌ಮೇಲ್ ಮಾಡುವ ಚರಿತ್ರೆ ಕಾಂಗ್ರೆಸ್‌ನದ್ದು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಆರೋಪಿಸಿದರು.



ಗದಗದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸ್ಟಿಂಗ್ ಮೂಲಕ ಬ್ಲ್ಯಾಕ್‌ಮೇಲ್ ಮಾಡುವ ಚರಿತ್ರೆಯ ಬಗ್ಗೆ ಸಚಿವ ಎಚ್.ಕೆ. ಪಾಟೀಲ್ ಅವರನ್ನು ಕೇಳಿದರೆ ಸಾಕು. ಈ ಬಗ್ಗೆ ಹೆಚ್ಚಿನ ವಿವರ ನೀಡುವುದಿಲ್ಲ ಎಂದರು.

ಆಡಳಿತ ಪಕ್ಷದ ಶಾಸಕರೇ ಸ್ಟಿಂಗ್ ಆಪರೇಷನ್ ಬಗ್ಗೆ ಮಾತನಾಡುತ್ತಿದ್ದಾರೆ. ಸ್ಟಿಂಗ್ ನಡೆಸುತ್ತಿರುವ ಏಜೆನ್ಸಿಗಳು ಯಾವುವು ಎಂಬುದನ್ನು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ರಾಜ್ಯದ ಜನರಿಗೆ ಸ್ಪಷ್ಟಪಡಿಸಬೇಕು ಎಂದು ಆಗ್ರಹಿಸಿದರು.

**‘ಲಂಚ ಪಡೆಯಲು ಮೊಬೈಲ್ ಆಫ್ ಮಾಡಿ’**

ಸಚಿವರು ಮೊಬೈಲ್ ಸ್ವಿಚ್ ಆಫ್ ಮಾಡಿಕೊಂಡು, ಬಾಗಿಲು ಹಾಕಿಕೊಂಡು ಲಂಚ ಪಡೆಯುವಂತೆ ಕಿವಿಮಾತು ಹೇಳುವ ಪರಿಸ್ಥಿತಿ ರಾಜ್ಯದಲ್ಲಿ ನಿರ್ಮಾಣವಾಗಿದೆ ಎಂದು ವಿಜಯೇಂದ್ರ ಟೀಕಿಸಿದರು. ಇಂತಹ ವ್ಯವಸ್ಥೆ ಯಾರಿಂದ ನಡೆಯುತ್ತಿದೆ ಎಂಬುದನ್ನು ಮುಖ್ಯಮಂತ್ರಿ ಸ್ಪಷ್ಟಪಡಿಸಬೇಕು ಎಂದರು.

ಅತ್ಯಂತ ಪ್ರಭಾವಿ ನಾಯಕರೊಬ್ಬರು ಇತ್ತೀಚೆಗೆ ಕೆಲವು ರಿಯಲ್ ಎಸ್ಟೇಟ್ ಉದ್ಯಮಿಗಳನ್ನು ಕರೆಸಿ, ಮೊಬೈಲ್ ಫೋನ್‌ಗಳನ್ನು ಸ್ವಿಚ್ ಆಫ್ ಮಾಡಿಸಿ ಮಾತುಕತೆ ನಡೆಸಿದ್ದಾರೆ. ಈ ವೇಳೆ ಈ ಹಿಂದೆ ನೀಡುತ್ತಿದ್ದ 75ರ ಬದಲಿಗೆ 150 ನೀಡಬೇಕು ಎಂದು ಒತ್ತಡ ಹೇರಲಾಗಿದೆ. ಅದಕ್ಕೆ ಒಪ್ಪದ ಉದ್ಯಮಿಗೆ ರಾಜ್ಯ ಬಿಟ್ಟು ಹೋಗುವಂತೆ ಸೂಚಿಸಲಾಗಿದೆ ಎಂಬ ಗಂಭೀರ ಆರೋಪವನ್ನೂ ಮಾಡಿದರು. ಈ ಪ್ರಭಾವಿ ವ್ಯಕ್ತಿ ಯಾರು ಎಂಬುದನ್ನು ಮುಖ್ಯಮಂತ್ರಿ ಪತ್ತೆಹಚ್ಚಿ ಜನರಿಗೆ ತಿಳಿಸಬೇಕು ಎಂದು ಒತ್ತಾಯಿಸಿದರು.

**ಜಿಪಂ–ತಾಪಂ ಮೈತ್ರಿ ಇನ್ನೂ ಅಂತಿಮವಾಗಿಲ್ಲ**

ಜಿಲ್ಲಾ ಪಂಚಾಯಿತಿ ಮತ್ತು ತಾಲೂಕು ಪಂಚಾಯಿತಿ ಚುನಾವಣೆಗಳಲ್ಲಿ ಬಿಜೆಪಿ–ಜೆಡಿಎಸ್ ಮೈತ್ರಿ ಕುರಿತು ಇನ್ನೂ ಅಂತಿಮ ನಿರ್ಧಾರ ಕೈಗೊಂಡಿಲ್ಲ ಎಂದು ವಿಜಯೇಂದ್ರ ಸ್ಪಷ್ಟಪಡಿಸಿದರು.

ಈ ಕುರಿತು ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರೊಂದಿಗೆ ಚರ್ಚಿಸಿದ್ದೇನೆ. 2028ರ ವಿಧಾನಸಭಾ ಚುನಾವಣೆಯನ್ನು ಎರಡೂ ಪಕ್ಷಗಳು ಒಟ್ಟಾಗಿ ಎದುರಿಸುವ ಉದ್ದೇಶವಿದ್ದರೆ, ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿಯೂ ಸ್ಪಷ್ಟತೆ ಅಗತ್ಯ. ಎರಡೂ ಪಕ್ಷಗಳು ಕುಳಿತು ಚರ್ಚಿಸಿ ತೀರ್ಮಾನ ಕೈಗೊಳ್ಳಲಿವೆ. ಚುನಾವಣೆಗೆ ಇನ್ನೂ ಸಮಯವಿರುವುದರಿಂದ ಮಾತುಕತೆಗೆ ಅವಕಾಶವಿದೆ ಎಂದರು.ಬಿಜೆಪಿ ಕಾರ್ಯಕರ್ತರು, ಹಿಂದೂ ಕಾರ್ಯಕರ್ತರು ಹಾಗೂ ಮಠಾಧೀಶರನ್ನು ಹೆದರಿಸುವ ಪ್ರಯತ್ನ ನಡೆಯುತ್ತಿದೆ ಎಂದು ಆರೋಪಿಸಿದ ಅವರು, 2028ರ ನಂತರ ತಾನೇ ಮುಖ್ಯಮಂತ್ರಿ ಎಂಬ ಭ್ರಮೆಯಲ್ಲಿದ್ದ ಮುಖ್ಯಮಂತ್ರಿ ಅವರಿಗೆ ಈಗ ವಾಸ್ತವದ ಅರಿವಾಗಿದೆ. ಆ ಹತಾಶೆಯಿಂದಲೇ ಇಂತಹ ಕ್ರಮಗಳನ್ನು ಅನುಸರಿಸುತ್ತಿದ್ದಾರೆ ಎಂದು ಟೀಕಿಸಿದರು.

**ಯತ್ನಾಳ್ ವಿಚಾರದಲ್ಲಿ ಸದ್ಯ ಚರ್ಚೆ ಬೇಡ**

ಬಸನಗೌಡ ಪಾಟೀಲ ಯತ್ನಾಳ್ ಅವರ ಪಕ್ಷ ಸೇರ್ಪಡೆ ಕುರಿತ ಪ್ರಶ್ನೆಗೆ ಪ್ರತಿಕ್ರಿಯಿಸಿದ ವಿಜಯೇಂದ್ರ, ಯತ್ನಾಳ್ ಅವರು ಕಳೆದ ಒಂದು ತಿಂಗಳಿಂದ ಮೌನವಾಗಿದ್ದಾರೆ. ಸದ್ಯ ಗಣೇಶ ಹಬ್ಬ ನಡೆಯುತ್ತಿರುವುದರಿಂದ ಅವರಿಗೆ ಯಾವುದೇ ತೊಂದರೆ ನೀಡಬೇಡಿ. ಬಳಿಕ ಈ ಕುರಿತು ಮಾತನಾಡುವುದಾಗಿ ಹೇಳಿದರು.

# ಚೆನ್ನೈಯಲ್ಲಿ 12 ಕೋಟಿ ಮೌಲ್ಯದ ಚೀನೀ ಪಟಾಕಿ ವಶ

● ವಿಕ್ರಮ ವಾಹಿನಿ । ಚೆನ್ನೈ

ನಗರದ ಬಂದರಿನಲ್ಲಿ ಕಂದಾಯ ಗುಪ್ತಚರ ನಿರ್ದೇಶನಾಲಯ (ಡಿಆರ್‌ಐ) ಅಧಿಕಾರಿಗಳು ಕಾರ್ಯಾಚರಣೆ ನಡೆಸಿ, 12 ಕೋಟಿಗೂ ಅಧಿಕ ಮೌಲ್ಯದ ಚೀನೀ ಮೂಲದ ಪೈರೋಟೆಕ್ನಿಕ್ ಪಟಾಕಿಗಳನ್ನು ವಶಪಡಿಸಿಕೊಂಡಿದ್ದಾರೆ.



ಚೀನಾದಿಂದ ಕಾನೂನುಬಾಹಿರವಾಗಿ ಪಟಾಕಿಗಳನ್ನು ಆಮದು ಮಾಡಿಕೊಳ್ಳಲಾಗುತ್ತಿದ್ದು, ಕಂಟೈನರ್‌ಗಳಲ್ಲಿದ್ದ ಪೆಟ್ಟಿಗೆಗಳ ಮೇಲೆ ಸ್ಟೇಷನರಿ ಸಾಮಗ್ರಿಗಳು, ಗ್ಲಾಸ್‌ಗಳು, ಪ್ಲಾಸ್ಟಿಕ್ ಕ್ಲಿಪ್‌ಗಳು, ಹೇರ್ ಬ್ಯಾಂಡ್‌ಗಳು, ವಾರ್ಡ್‌ರೋಬ್‌ಗಳು, ಶೂ ರ್ಯಾಕ್‌ಗಳು ಸೇರಿದಂತೆ ವಿವಿಧ ವಸ್ತುಗಳಿವೆ ಎಂದು ತಪ್ಪು ಲೇಬಲ್ ಅಂಟಿಸಲಾಗಿತ್ತು ಎಂದು ಡಿಆರ್‌ಐ ತಿಳಿಸಿದೆ.

ಮಾಹಿತಿ ಆಧರಿಸಿ ಕಂಟೈನರ್‌ಗಳನ್ನು ಪರಿಶೀಲಿಸಿದಾಗ, ಹೊರಗೆ ನಮೂದಿಸಿದ್ದ ವಸ್ತುಗಳ ಬದಲಿಗೆ ಪೆಟ್ಟಿಗೆಗಳೊಳಗೆ ಬಚ್ಚಿಟ್ಟಿದ್ದ ದೊಡ್ಡ ಪ್ರಮಾಣದ ಚೀನೀ ಪಟಾಕಿಗಳು ಪತ್ತೆಯಾಗಿವೆ. ಯಾವುದೇ ಅಧಿಕೃತ ಪರವಾನಗಿ ಪಡೆಯದೆ ಪಟಾಕಿಗಳನ್ನು ಅಕ್ರಮವಾಗಿ ಆಮದು ಮಾಡಿಕೊಳ್ಳಲಾಗಿತ್ತು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ವಿದೇಶಿ ವ್ಯಾಪಾರ ನೀತಿಯಡಿ ಪಟಾಕಿಗಳ ಆಮದು ನಿರ್ಬಂಧಿತವಾಗಿದ್ದು, ಡಿಜಿಎಫ್‌ಟಿ ಹಾಗೂ 2008ರ ಸ್ಫೋಟಕ ನಿಯಮಗಳ ಪ್ರಕಾರ ಪೆಟ್ರೋಲಿಯಂ ಮತ್ತು ಸ್ಫೋಟಕ ಸುರಕ್ಷತಾ ಸಂಸ್ಥೆ (ಪಿಇಎಸ್‌ಒ)ಯ ಅನುಮತಿ ಕಡ್ಡಾಯವಾಗಿದೆ. ಆದರೆ ಅಗತ್ಯ ಅನುಮತಿ ಪಡೆಯದೆ ಹಾಗೂ ವಸ್ತುಗಳ ವಿವರವನ್ನು ತಪ್ಪಾಗಿ ನಮೂದಿಸಿ ಪಟಾಕಿಗಳನ್ನು ಸಾಗಿಸಲಾಗಿದ್ದರಿಂದ ಕಸ್ಟಮ್ಸ್ ಕಾಯ್ದೆ–1962ರ ಅಡಿಯಲ್ಲಿ ಅವುಗಳನ್ನು ವಶಪಡಿಸಿಕೊಳ್ಳಲಾಗಿದೆ.

ನಿಷೇಧಿತ ಹಾಗೂ ನಿರ್ಬಂಧಿತ ವಸ್ತುಗಳ ಅಕ್ರಮ ಆಮದು ಮತ್ತು ಕಳ್ಳಸಾಗಣೆಯನ್ನು ತಡೆಯಲು ಡಿಆರ್‌ಐ ಇಂತಹ ಕಾರ್ಯಾಚರಣೆಗಳನ್ನು ಮುಂದುವರಿಸಲಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದೆ.

www.VIKRAMAVAHINI.com
|| ಕನ್ನಡ ದಿನಪತ್ರಿಕೆ ||
PRGI NO: KARKAN/2018/78481
ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ
ವಿಕ್ರಮ ವಾಹಿನಿ

# ‘ನೈಸ್‌ನಿಂದ ರೂ 4,756 ಕೋಟಿ ಟೋಲ್ ವಸೂಲಿ’

**ನೈಸ್ ಯೋಜನೆಯ ಮೂಲ ವೆಚ್ಚ ರೂ 1,583.76 ಕೋಟಿಯಾಗಿದ್ದರೂ 2008ರಿಂದ 2025ರವರೆಗೆ ರೂ 4,756.48 ಕೋಟಿ ಟೋಲ್ ಸಂಗ್ರಹಿಸಲಾಗಿದೆ. ಯೋಜನೆಯ ಷರತ್ತುಗಳನ್ನು ಉಲ್ಲಂಘಿಸಿ ಟೋಲ್ ವಸೂಲಿ ಮಾಡಲಾಗುತ್ತಿದೆ ಎಂದು ಆರೋಪಿಸಿದ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ, ಹೈಕೋರ್ಟ್ ತೀರ್ಪಿಗೆ ಸುಪ್ರೀಂ ಕೋರ್ಟ್ ತಡೆ ನೀಡದ ಹಿನ್ನೆಲೆಯಲ್ಲಿ ತಕ್ಷಣ ಟೋಲ್ ಸಂಗ್ರಹ ಸ್ಥಗಿತಗೊಳಿಸುವಂತೆ ಆಗ್ರಹಿಸಿದರು.**

● ವಿಕ್ರಮ ವಾಹಿನಿ । ಬೆಂಗಳೂರು

ನೈಸ್ ಯೋಜನೆಯ ಮೂಲ ವೆಚ್ಚ ರೂ 1,583.76 ಕೋಟಿಯಾಗಿದ್ದರೂ, 2008ರಿಂದ 2025ರವರೆಗೆ ಸಂಸ್ಥೆ ರೂ 4,756.48 ಕೋಟಿ ಟೋಲ್ ಸಂಗ್ರಹಿಸಿದೆ. ಯೋಜನೆ ಪೂರ್ಣಗೊಳಿಸದೆ ಈ ರೀತಿ ಟೋಲ್ ವಸೂಲಿ ಮಾಡುತ್ತಿರುವುದು ಅಕ್ರಮವಾಗಿದ್ದು, ತಕ್ಷಣ ಟೋಲ್ ಸಂಗ್ರಹ ಸ್ಥಗಿತಗೊಳಿಸಬೇಕು ಎಂದು ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಆಗ್ರಹಿಸಿದರು.

ಜೆಡಿಎಸ್ ಕೇಂದ್ರ ಕಚೇರಿ ಜೆ.ಪಿ. ಭವನದಲ್ಲಿ ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನೈಸ್ ಯೋಜನೆಗೆ ಸಂಬಂಧಿಸಿದಂತೆ ರಾಜ್ಯ ಹೈಕೋರ್ಟ್ ನೀಡಿರುವ ತೀರ್ಪಿಗೆ ಸುಪ್ರೀಂ ಕೋರ್ಟ್ ತಡೆ ನೀಡಿಲ್ಲ. ಹೀಗಿದ್ದರೂ ಟೋಲ್ ಸಂಗ್ರಹ ಮುಂದುವರಿಸಿರುವುದು ಸರಿಯಲ್ಲ ಎಂದು ಹೇಳಿದರು.

2008–09ರಲ್ಲಿ ವಾರ್ಷಿಕ ರೂ 5.59 ಕೋಟಿ ಇದ್ದ ಟೋಲ್ ಸಂಗ್ರಹ 2024–25ರ ವೇಳೆಗೆ ರೂ 734.97 ಕೋಟಿಗೆ ಏರಿಕೆಯಾಗಿದೆ. ಕಳೆದ ಹಲವು ವರ್ಷಗಳಿಂದ ನೈಸ್ ಸಂಸ್ಥೆ ಅಕ್ರಮವಾಗಿ ಕೋಟ್ಯಂತರ ರೂಪಾಯಿ ಟೋಲ್ ಸಂಗ್ರಹಿಸುತ್ತಿದೆ ಎಂದು ಆರೋಪಿಸಿದರು.

**ಒಪ್ಪಂದ ಉಲ್ಲಂಘನೆ ಆರೋಪ:** 2000ರ ಸೆ.4ರಂದು ರಾಜ್ಯ ಲೋಕೋಪಯೋಗಿ ಇಲಾಖೆ ಮತ್ತು ನೈಸ್ ನಡುವೆ ಟೋಲ್ ಕನ್ಸೆಷನ್ ಒಪ್ಪಂದವಾಗಿತ್ತು. ಮೂಲ ಒಪ್ಪಂದದ ಪ್ರಕಾರ ನಾಲ್ಕು ಪಥದ ಕಾಂಕ್ರೀಟ್ ರಸ್ತೆ, ಸರ್ವೀಸ್ ರಸ್ತೆ ಹಾಗೂ ಅಗತ್ಯ ಮೂಲಸೌಕರ್ಯಗಳನ್ನು ನಿರ್ಮಿಸಿದ ಬಳಿಕವೇ ಟೋಲ್ ಸಂಗ್ರಹಿಸಬೇಕಿತ್ತು. ಆದರೆ ನಿಗದಿತ ಷರತ್ತುಗಳನ್ನು ಪಾಲಿಸದೆ 2008ರಿಂದಲೇ ಟೋಲ್ ವಸೂಲಿ ಮಾಡಲಾಗುತ್ತಿದೆ ಎಂದು ಕುಮಾರಸ್ವಾಮಿ ದೂರಿದರು.

**‘ಬೆಂಗಳೂರು–ಮೈಸೂರು ಮೂಲಸೌಕರ್ಯ ಕಾರಿಡಾರ್ ಯೋಜನೆ ಹೆಸರಿನಲ್ಲಿ ರಸ್ತೆ ಅಪೂರ್ಣವಾಗಿದ್ದರೂ ಅಕ್ರಮವಾಗಿ ಟೋಲ್ ಸುಲಿಗೆ ಮಾಡುತ್ತಿರುವ ಬಗ್ಗೆ ಮಾಧ್ಯಮಗೋಷ್ಟಿಯಲ್ಲಿ ವಿಸ್ತೃತವಾಗಿ ಚರ್ಚೆ ನಡೆಸಲಾಯಿತು. ಟೋಲ್ ಸುಲಿಗೆ ವಿರುದ್ಧ ಹೈಕೋರ್ಟ್ ಕಟುವಾದ ಅಭಿಪ್ರಾಯ ದಾಖಲಿಸಿದ್ದರೂ, ಇದಕ್ಕೆ ಸುಪ್ರೀಂ ಕೋರ್ಟ್ ತಡೆಯಾಜ್ಞೆ ನೀಡದೇ ಇದ್ದರೂ ಇನ್ನೂ ರಸ್ತೆ ಸುಂಕ ವಸೂಲಿ ಮಾಡುತ್ತಿರುವುದು ಅಕ್ರಮ. ನೈಸ್ ರಸ್ತೆ ಮೂಲ ಯೋಜನಾ ವೆಚ್ಚವೇ ರೂ 1,583,76 ಕೋಟಿ. ಆದರೆ, ಈವರೆಗೆ ರೂ 4,756.48 ಕೋಟಿ ಟೋಲ್ ಹಣ ವಸೂಲಿ ಮಾಡಿದೆ ಆ ಕಂಪನಿ. ಹೀಗಾಗಿ ತಕ್ಷಣವೇ ಟೋಲ್ ವಸೂಲಿ ನಿಲ್ಲಿಸಬೇಕು. ಅದಕ್ಕೆ ರಾಜ್ಯ ಸರಕಾರವೂ ತುರ್ತು ಕ್ರಮ ವಹಿಸಬೇಕು. ಸಾರ್ವಜನಿಕರು ಕೂಡ ಯಾವುದೇ ಕಾರಣಕ್ಕೂ ಟೋಲ್ ಪಾವತಿ ಮಾಡಬಾರದು ಎಂದು ಆಗ್ರಹಿಸುತ್ತೇನೆ.’**



ನೈಸ್ ಸಂಸ್ಥೆ ಯೋಜನೆಗೆ ಮೀಸಲಾದ ಭೂಮಿಯ ಪ್ರಮಾಣವನ್ನೂ ನಿಯಮಬಾಹಿರವಾಗಿ ಹೆಚ್ಚಿಸಿಕೊಂಡಿದೆ. ಸಚಿವ ಸಂಪುಟದ ಅನುಮೋದನೆ ಇಲ್ಲದೆ ಅಲೈನ್‌ಮೆಂಟ್ ಬದಲಾವಣೆ ಮಾಡಿ ಪೆರಿಫೆರಲ್ ರಸ್ತೆಗೆ ನಿಗದಿಯಾಗಿದ್ದ 2,193 ಎಕರೆ ಭೂಮಿಯನ್ನು 2,747 ಎಕರೆಗೆ ಹಾಗೂ ಟೋಲ್ ರಸ್ತೆಯ ಭೂಮಿಯನ್ನು 6,999 ಎಕರೆಯಿಂದ 9,468 ಎಕರೆಗೆ ಹೆಚ್ಚಿಸಿಕೊಂಡಿದೆ ಎಂದು ಆರೋಪಿಸಿದರು.

**‘ಹೈಕೋರ್ಟ್ ತೀರ್ಪಿಗೆ ತಡೆ ಇಲ್ಲ’:** ಕಳೆದ ಜುಲೈ 29ರಂದು ಹೈಕೋರ್ಟ್ ನೀಡಿದ ತೀರ್ಪಿನಲ್ಲಿ ಮೂಲ ಒಪ್ಪಂದವನ್ನು ಔಟ್‌ಲೈನ್ ಡೆವಲಪ್‌ಮೆಂಟ್ ಪ್ಲಾನ್ ಮೂಲಕ ಬದಲಾಯಿಸಿರುವುದನ್ನು ಕಾನೂನು ಹಾಗೂ ಸಂವಿಧಾನಕ್ಕೆ ವಿರುದ್ಧವಾದ ವಂಚನೆ ಎಂದು ಹೇಳಲಾಗಿದೆ. ಈ ತೀರ್ಪಿನ ವಿರುದ್ಧ ನೈಸ್ ಸಂಸ್ಥೆ ಸುಪ್ರೀಂ ಕೋರ್ಟ್‌ಗೆ ಸಲ್ಲಿಸಿರುವ ಅರ್ಜಿಗೆ ತಡೆ ನೀಡಿಲ್ಲ. ವಿಚಾರಣೆಯನ್ನು ನ.2ಕ್ಕೆ ಮುಂದೂಡಲಾಗಿದೆ ಎಂದು ಕುಮಾರಸ್ವಾಮಿ ತಿಳಿಸಿದರು.

ನೈಸ್ ಸಂಸ್ಥೆಯು ಕೆರೆ ಪ್ರದೇಶಗಳನ್ನು ಒತ್ತುವರಿ ಮಾಡಿಕೊಂಡು ರಸ್ತೆ ನಿರ್ಮಿಸಿರುವ ಆರೋಪಗಳೂ ಇವೆ. ಈ ಕುರಿತು ದಾಖಲೆಗಳನ್ನು ಬಿಡುಗಡೆ ಮಾಡಲಾಗಿದೆ. ಯೋಜನೆಯ ಮೂಲ ಒಪ್ಪಂದದ ಹೊರತಾಗಿ ಭೂ ಮಾರಾಟದಿಂದ ರೂ 384 ಕೋಟಿ, ಜಂಟಿ ಅಭಿವೃದ್ಧಿ ಯೋಜನೆಗಳ ಮುಂಗಡವಾಗಿ ರೂ 108 ಕೋಟಿ ಹಾಗೂ ಕನ್ವೆನ್ಷನ್ ಸೆಂಟರ್‌ಗಳಿಂದ ರೂ 338 ಕೋಟಿ ಆದಾಯ ಗಳಿಸಿರುವುದಾಗಿಯೂ ಅವರು ಹೇಳಿದರು.

**‘ಇನ್ನೂ 10 ವರ್ಷ ಟೋಲ್‌ಗೆ ಅವಕಾಶವಿಲ್ಲ’:** ಎಸ್.ಎಂ. ಕೃಷ್ಣ ಅವರ ಸರ್ಕಾರದ ಅವಧಿಯ 2002ರ ಸಂಪುಟ ನಿರ್ಣಯದಂತೆ ಆರು ವರ್ಷಗಳಲ್ಲಿ ನಾಲ್ಕು ಪಥದ ಕಾಂಕ್ರೀಟ್ ರಸ್ತೆ ಪೂರ್ಣಗೊಳಿಸದಿದ್ದರೆ ಟೋಲ್ ವಸೂಲಿ ಹಿಂಪಡೆಯಬೇಕು ಎಂಬ ಷರತ್ತು ಇತ್ತು. ಹೀಗಾಗಿ ಹೈಕೋರ್ಟ್ ತೀರ್ಪಿನ ಹಿನ್ನೆಲೆಯಲ್ಲಿ ಕಾನೂನುಬಾಹಿರ ಟೋಲ್ ಸಂಗ್ರಹವನ್ನು ಕೂಡಲೇ ನಿಲ್ಲಿಸಬೇಕು ಎಂದು ಆಗ್ರಹಿಸಿದರು. ನೈಸ್ ಟೋಲ್ ಸಂಗ್ರಹಕ್ಕೆ ಇನ್ನೂ ಹತ್ತು ವರ್ಷ ಅವಕಾಶವಿದೆ ಎಂಬವಾದವನ್ನು ಒಪ್ಪಲು ಸಾಧ್ಯವಿಲ್ಲ. ಅಕ್ರಮ ವಸೂಲಿ ಮುಂದುವರಿಯಲು ಅವಕಾಶ ನೀಡಬಾರದು ಎಂದು ಕುಮಾರಸ್ವಾಮಿ ಹೇಳಿದರು.

ಕುಮಾರಸ್ವಾಮಿ ಅವರು, ನೈಸ್ ಯೋಜನೆಯ ಒಪ್ಪಂದ, ಭೂ ಬಳಕೆ, ಟೋಲ್ ಸಂಗ್ರಹ ಹಾಗೂ ಯೋಜನೆಯ ಪ್ರಗತಿ ಕುರಿತು ಸರ್ಕಾರ ಸಮಗ್ರವಾಗಿ ಪರಿಶೀಲನೆ ನಡೆಸಬೇಕು ಎಂದು ಒತ್ತಾಯಿಸಿದರು. ಸಾರ್ವಜನಿಕ ಹಿತದೃಷ್ಟಿಯಿಂದ ಯೋಜನೆಯ ಸಂಪೂರ್ಣ ಲೆಕ್ಕಪತ್ರ ಹಾಗೂ ಒಪ್ಪಂದದ ಷರತ್ತುಗಳ ಅನುಷ್ಠಾನದ ಬಗ್ಗೆ ಸ್ಪಷ್ಟತೆ ನೀಡಬೇಕು ಎಂದು ಆಗ್ರಹಿಸಿದರು.

ನೈಸ್ ಯೋಜನೆಗೆ ಸಂಬಂಧಿಸಿದ ವಿವಾದವನ್ನು ಕೇವಲ ರಾಜಕೀಯ ವಿಷಯವಾಗಿ ನೋಡದೆ, ಕಾನೂನು ಮತ್ತು ಸಾರ್ವಜನಿಕ ಹಿತದೃಷ್ಟಿಯಿಂದ ಪರಿಹರಿಸಬೇಕು.

ಹೈಕೋರ್ಟ್ ತೀರ್ಪು ಹಾಗೂ ಸುಪ್ರೀಂ ಕೋರ್ಟ್‌ನಲ್ಲಿ ನಡೆಯುತ್ತಿರುವ ವಿಚಾರಣೆಯ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರ ಮುಂದಿನ ಕ್ರಮಗಳ ಬಗ್ಗೆ ಸ್ಪಷ್ಟ ನಿಲುವು ಪ್ರಕಟಿಸಬೇಕು ಎಂದು ಕುಮಾರಸ್ವಾಮಿ ಆಗ್ರಹಿಸಿದರು.

ಮಾಜಿ ಶಾಸಕರಾದ ಸುರೇಶ್ ಗೌಡ, ಚೌಡರೆಡ್ಡಿ ತೂಪಲ್ಲಿ, ಗ್ರೇಟರ್ ಬೆಂಗಳೂರು ಜೆಡಿಎಸ್ ಅಧ್ಯಕ್ಷ ಎಚ್.ಎಂ. ರಮೇಶ್ ಗೌಡ, ರಾಜ್ಯ ವಕ್ತಾರ ಎಚ್.ಎನ್. ದೇವರಾಜು ಮತ್ತಿತರರು ಉಪಸ್ಥಿತರಿದ್ದರು.

## ಪ್ರತಿಷ್ಠಿತ ಶಾಲೆಗಳಲ್ಲೂ ಮಕ್ಕಳ ಮಾದಕ ವ್ಯಸನದ ಬಗ್ಗೆ ಎಚ್ಚರ ಅಗತ್ಯ: ದೇಶಿಕೇಂದ್ರ ಶ್ರೀ

● ವಿಕ್ರಮ ವಾಹಿನಿ । ಬೆಂಗಳೂರು

ಮಕ್ಕಳಿಗೆ ಉತ್ತಮ ಶಿಕ್ಷಣ ನೀಡುವ ಉದ್ದೇಶದಿಂದ ಪೋಷಕರು ಪ್ರತಿಷ್ಠಿತ ಹಾಗೂ ಅಂತಾರಾಷ್ಟ್ರೀಯ ಗುಣಮಟ್ಟದ ಶಾಲೆಗಳಿಗೆ ಸೇರಿಸುತ್ತಾರೆ. ಆದರೆ ಇಂತಹ ಶಾಲೆಗಳಲ್ಲೂ ಮಕ್ಕಳು ಮಾದಕ ವ್ಯಸನಕ್ಕೆ ಒಳಗಾಗದಂತೆ ಪೋಷಕರು ಎಚ್ಚರ ವಹಿಸಬೇಕು ಎಂದು ಸುತ್ತೂರು ಮಠದ ಜಗದ್ಗುರು ಡಾ. ಶಿವರಾತ್ರಿ ದೇಶಿಕೇಂದ್ರ ಶಿವಾಚಾರ್ಯ ಮಹಾಸ್ವಾಮೀಜಿ ಹೇಳಿದರು.

ವಿಶ್ವ ಮಾನಸಿಕ ಆರೋಗ್ಯ ದಿನಾಚರಣೆ ಅಂಗವಾಗಿ ಕಡಬಮ್ಸ್ ಗ್ರೂಪ್‌ನ 34ನೇ ವಾರ್ಷಿಕೋತ್ಸವ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಮಾದಕ ವ್ಯಸನ ಹೆಚ್ಚುತ್ತಿರುವುದು ಆತಂಕಕಾರಿ ಬೆಳವಣಿಗೆ. ಒಮ್ಮೆ ಚಟಕ್ಕೆ ಬಿದ್ದವರನ್ನು ಅದರಿಂದ ಹೊರತರಲು ಸಾಕಷ್ಟು ಸವಾಲುಗಳಿದ್ದು, ಆರಂಭದಲ್ಲೇ ಮಕ್ಕಳ ಬಗ್ಗೆ ಪೋಷಕರು ಹೆಚ್ಚಿನ ಗಮನ ಹರಿಸಬೇಕು ಎಂದರು.



ಮಾನಸಿಕ ಆರೋಗ್ಯ ಸಮಸ್ಯೆಗಳಿಗೆ ಇದೀಗ ಪರಿಣಾಮಕಾರಿ ಚಿಕಿತ್ಸೆಗಳು ಲಭ್ಯವಿದ್ದು, ಈ ಕ್ಷೇತ್ರದಲ್ಲಿ ಕಡಬಮ್ಸ್ ಸಂಸ್ಥೆ ಉತ್ತಮ ಸೇವೆ ಸಲ್ಲಿಸುತ್ತಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ಶ್ರೀ ವಾಸವಿ ಪೀಠದ ಸಚ್ಚಿದಾನಂದ ಸರಸ್ವತಿ ಸ್ವಾಮೀಜಿ ಮಾತನಾಡಿ, ದೈಹಿಕ ಆರೋಗ್ಯದಷ್ಟೇ ಮಾನಸಿಕ ನೆಮ್ಮದಿ ಹಾಗೂ ಭಾವನಾತ್ಮಕ ಸುರಕ್ಷತೆಯೂ ಮುಖ್ಯ. ಹಿರಿಯರನ್ನು ಕೇವಲ ಆರೈಕೆಯ ಅಗತ್ಯವಿರುವವರಾಗಿ ನೋಡದೆ, ಅವರ ಅನುಭವ ಮತ್ತು ಜ್ಞಾನಕ್ಕೆ ಗೌರವ ನೀಡುವ ವಾತಾವರಣ ನಿರ್ಮಿಸಬೇಕು ಎಂದರು.

ಈ ಸಂದರ್ಭದಲ್ಲಿ ಕಡಬಮ್ಸ್‌ನ ‘ಶ್ರೀ ಕಡಬಮ್ಸ್ ಅಶ್ವತ್ಥನಾರಾಯಣ ರೆಸಿಡೆನ್ಶಿಯಲ್ ಎಲ್ಡರ್ ಕೇರ್ ಬ್ಲಾಕ್’ ಪರಿಕಲ್ಪನೆ ಅನಾವರಣಗೊಳಿಸಲಾಯಿತು. ಶ್ರೀ ಮೇಘಲಾಲ್ ಕೃಷ್ಣಮೂರ್ತಿ ಸ್ಮರಣಾರ್ಥ ನಿರ್ಮಿಸಿರುವ ‘ಆದ್ಯಾ–ಭೋಜನ ಶಾಲೆ’ ಉದ್ಘಾಟನೆ ಹಾಗೂ ವಿವಿಧ ಕ್ಷೇತ್ರಗಳ ಸಾಧಕರಿಗೆ ‘ಬ್ರೈಟ್ ಸ್ಟಾರ್’ ಪ್ರಶಸ್ತಿ ಪ್ರದಾನ ನಡೆಯಿತು.

ಮಕ್ಕಳಲ್ಲಿ ಮಾನಸಿಕ ಒತ್ತಡ, ಏಕಾಂತ ಹಾಗೂ ವರ್ತನೆಯಲ್ಲಿನ ಬದಲಾವಣೆಗಳನ್ನು ಪೋಷಕರು ನಿರ್ಲಕ್ಷಿಸಬಾರದು. ಮಕ್ಕಳೊಂದಿಗೆ ಸ್ನೇಹಪೂರ್ವಕವಾಗಿ ಸಂವಹನ ನಡೆಸಿ, ಅವರ ಸಮಸ್ಯೆಗಳನ್ನು ಆಲಿಸುವ ಮೂಲಕ ಸೂಕ್ತ ಸಮಯದಲ್ಲಿ ಅಗತ್ಯ ಮಾರ್ಗದರ್ಶನ ಮತ್ತು ನೆರವು ನೀಡಬೇಕು ಎಂದು ಕಾರ್ಯಕ್ರಮದಲ್ಲಿ ಸಲಹೆ ನೀಡಲಾಯಿತು.

ಕಡಬಮ್ಸ್ ಕಾರ್ಯಕಾರಿ ನಿರ್ದೇಶಕ ಸಂದೇಶ್ ಆರ್. ಕಡಬಮ್ ಮಾತನಾಡಿ, ಮುಂದಿನ ದಿನಗಳಲ್ಲಿ ಮಾನಸಿಕ ಆರೋಗ್ಯದ ಜತೆಗೆ ಹಿರಿಯರ ಗೌರವಯುತ ಹಾಗೂ ಗುಣಮಟ್ಟದ ಜೀವನಕ್ಕೂ ಹೆಚ್ಚಿನ ಆದ್ಯತೆ ನೀಡಲಾಗುವುದು ಎಂದರು.

ಡಾ. ಶ್ರೇಯಸ್ ಆರ್. ಕಡಬಮ್ ಅವರು ಆಧುನಿಕ ಚಿಕಿತ್ಸೆಯೊಂದಿಗೆ ಮಾನವೀಯತೆ, ಕುಟುಂಬದ ಪಾಲ್ಗೊಳ್ಳುವಿಕೆ ಹಾಗೂ ಪುನರ್ವಸತಿಗೆ ಒತ್ತು ನೀಡಲಾಗುತ್ತಿದೆ ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಕಡಬಮ್ಸ್ ಅಧ್ಯಕ್ಷ ರಮೇಶ್ ಕಡಬಮ್, ಉಪಾಧ್ಯಕ್ಷೆ ಸುಧಾ ಕಡಬಮ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಪತ್ನಿಗೆ ಹೆಣ್ಣುಮಗು: ಕನ್ನಾಳೆಗೆ ಮಾನವೀಯ ಆಧಾರದ ಮೇಲೆ ಜಾಮೀನು ಮನವಿ

● ವಿಕ್ರಮ ವಾಹಿನಿ । ಬೆಂಗಳೂರು

**ಕೆಪಿಎಸ್ಸಿ ನೇಮಕಾತಿ ಹಗರಣದ ಪ್ರಮುಖ ಆರೋಪಿ ಬಸವರಾಜ್ ಕನ್ನಾಳೆ ಅವರ ಪತ್ನಿ ಹೆಣ್ಣು ಮಗುವಿಗೆ ಜನ್ಮ ನೀಡಿರುವ ಹಿನ್ನೆಲೆಯಲ್ಲಿ, ಪತ್ನಿ ಹಾಗೂ ನವಜಾತ ಶಿಶುವನ್ನು ನೋಡಲು ಮಾನವೀಯ ಆಧಾರದ ಮೇಲೆ ಸೀಮಿತ ಅವಧಿಗೆ ಜಾಮೀನು ನೀಡುವಂತೆ ಸಲ್ಲಿಸಿದ್ದ ಅರ್ಜಿಯ ವಿಚಾರಣೆಯನ್ನು ಹೈಕೋರ್ಟ್ ಗುರುವಾರಕ್ಕೆ ಮುಂದೂಡಿದೆ. ಕನ್ನಾಳೆ ದೇಶ ತೊರೆಯಲು ಮುಂದಾಗಿದ್ದ ಹಿನ್ನೆಲೆಯಲ್ಲಿ ಜಾಮೀನು ನೀಡಲು ಸರ್ಕಾರ ವಿರೋಧ ವ್ಯಕ್ತಪಡಿಸಿದ್ದು, ಪಾಸ್‌ಪೋರ್ಟ್ ಜಪ್ತಿ ಹಾಗೂ ಪೊಲೀಸ್ ಠಾಣೆಗೆ ನಿಯಮಿತ ಹಾಜರಾತಿಯಂತಹ ಕಠಿಣ ಷರತ್ತು ವಿಧಿಸುವ ಸಾಧ್ಯತೆಯನ್ನು ಪೀಠ ಪರಿಗಣಿಸಿದೆ.**

ಕೆಪಿಎಸ್ಸಿ ನೇಮಕಾತಿ ಹಗರಣದ ಪ್ರಮುಖ ಆರೋಪಿ ಬಸವರಾಜ್ ಕನ್ನಾಳೆ ಅವರ ಪತ್ನಿ ಹೆಣ್ಣು ಮಗುವಿಗೆ ಜನ್ಮ ನೀಡಿರುವ ಹಿನ್ನೆಲೆಯಲ್ಲಿ, ಪತ್ನಿ ಹಾಗೂ ನವಜಾತ ಮಗುವನ್ನು ನೋಡಲು ಬೀದರ್‌ಗೆ ತೆರಳಲು ಸೀಮಿತ ಅವಧಿಗೆ ಮಾನವೀಯ ಆಧಾರದ ಮೇಲೆ ಜಾಮೀನು ನೀಡುವಂತೆ ಸಲ್ಲಿಸಿರುವ ಅರ್ಜಿಯ ವಿಚಾರಣೆಯನ್ನು ಕರ್ನಾಟಕ ಹೈಕೋರ್ಟ್ ಗುರುವಾರಕ್ಕೆ ಮುಂದೂಡಿದೆ.

ನ್ಯಾಯಮೂರ್ತಿ ಎಸ್. ವಿಶ್ವಜಿತ್ ಶೆಟ್ಟಿ ಅವರ ಏಕಸದಸ್ಯ ಪೀಠ ಅರ್ಜಿಯ ವಿಚಾರಣೆ ನಡೆಸಿತು. ಕನ್ನಾಳೆ ಪರ ಹಿರಿಯ ವಕೀಲ ಎಂ. ಅರುಣ್ ಶ್ಯಾಮ್, ಅರ್ಜಿಯನ್ನು ಮೆರಿಟ್ ಆಧಾರದ ಮೇಲೆ ಸಲ್ಲಿಸಿಲ್ಲ. ಮಾನವೀಯ ಕಾರಣಕ್ಕಾಗಿ ಸೀಮಿತ ಅವಧಿಗೆ ಜಾಮೀನು ನೀಡಬೇಕು. ಕಠಿಣ ಷರತ್ತು ವಿಧಿಸಿದರೂ ಒಪ್ಪಿಕೊಳ್ಳುವುದಾಗಿ ಮನವಿ ಮಾಡಿದರು. ಕನ್ನಾಳೆಯ ವಯೋವೃದ್ಧ ಪೋಷಕರನ್ನೂ ಪರಿಗಣಿಸುವಂತೆ ಕೋರಿದರು.

ಆದರೆ, ಸರ್ಕಾರದ ಪರ ವಕೀಲ ಬಿ.ಎನ್. ಜಗದೀಶ್ ಅವರು ಕನ್ನಾಳೆ ವಿರುದ್ಧ ಪ್ರಕರಣ ದಾಖಲಾಗುತ್ತಿದ್ದಂತೆ ದೇಶ ತೊರೆಯಲು ಮುಂದಾಗಿದ್ದ ಹಿನ್ನೆಲೆಯಲ್ಲಿ ಜಾಮೀನು ನೀಡುವುದಕ್ಕೆ ವಿರೋಧ ವ್ಯಕ್ತಪಡಿಸಿದರು. ವಾಪಸ್ ಟಿಕೆಟ್ ಕಾಯ್ದಿರಿಸದೇ ವಿದೇಶಕ್ಕೆ ತೆರಳಲು ಮುಂದಾಗಿದ್ದ ಅವರನ್ನು ದೆಹಲಿಯಲ್ಲಿ ವಶಕ್ಕೆ ಪಡೆಯಲಾಗಿತ್ತು. ಅವರು ಏಕೆ ದೇಶ ತೊರೆಯಲು ಮುಂದಾಗಿದ್ದರು ಎಂಬುದನ್ನು ಮೊದಲು ಸ್ಪಷ್ಟಪಡಿಸಬೇಕು ಎಂದು ವಾದಿಸಿದರು.

ಈ ವೇಳೆ ಪೀಠವು, ಕನ್ನಾಳೆಗೆ ಪಾಸ್‌ಪೋರ್ಟ್ ಜಪ್ತಿ, ಪ್ರತಿದಿನ ಪೊಲೀಸ್ ಠಾಣೆಗೆ ಹಾಜರಾಗುವಿಕೆ ಸೇರಿದಂತೆ ಕಠಿಣ ಷರತ್ತು ವಿಧಿಸುವ ಮೂಲಕ ಜಾಮೀನು ನೀಡುವ ಸಾಧ್ಯತೆ ಕುರಿತು ಅಭಿಪ್ರಾಯ ವ್ಯಕ್ತಪಡಿಸಿತು. ವಾದಗಳನ್ನು ಆಲಿಸಿದ ಬಳಿಕ ವಿಚಾರಣೆಯನ್ನು ಗುರುವಾರಕ್ಕೆ ಮುಂದೂಡಿತು.

ಇದೇ ವೇಳೆ, ಕೆಪಿಎಸ್ಸಿ ಪರ ಹಿರಿಯ ವಕೀಲ ರೊಬೆನ್ ಜಾಕಬ್ ಅವರು ಒಂಬತ್ತು ಅಭ್ಯರ್ಥಿಗಳಿಗೆ ಸಂಬಂಧಿಸಿದ ಅಂಕಗಳ ದಾಖಲೆಯನ್ನು ಮುಚ್ಚಿದ ಲಕೋಟೆಯಲ್ಲಿ ಪೀಠಕ್ಕೆ ಸಲ್ಲಿಸುವುದಾಗಿ ತಿಳಿಸಿದರು. ಕೆಪಿಎಸ್ಸಿ ಸದಸ್ಯೆ ಶಾಂತಾ ಹೊಸಮನಿ ಹಾಗೂ ಅಮಾನತುಗೊಂಡಿರುವ ಬಂಧಿತ ಐಎಎಸ್ ಅಧಿಕಾರಿ ಜ್ಞಾನೇಂದ್ರ ಕುಮಾರ್ ಗಂಗ್ವಾರ್ ಅವರ ಜಾಮೀನು ಅರ್ಜಿಗಳ ವಿಚಾರಣೆಯನ್ನು ಮುಂದಿನ ವಾರಕ್ಕೆ ಮುಂದೂಡಲಾಗಿದೆ.



1ನೇ ಓಪನ್ ಬೆಂಗಳೂರು ಜಿಲ್ಲಾ ಕಿಕ್ ಬಾಕ್ಸಿಂಗ್ ಚಾಂಪಿಯನ್ ಶಿಪ್ 2026 ರಲ್ಲಿ ಎಸ್. ಸುಮಧಾ(umadhva) ಚಿನ್ನದ ಪದಕ ಗಳಿಸಿದ್ದಾನೆ. ಕ್ರಿಯೇಟಿವ್ ವಿಭಾಗದಲ್ಲಿ ಚಿನ್ನದ ಪದಕ ಗಳಿಸಿರುವ ಇವನು , ಕಿಕ್ ಬಾಕ್ಸಿಂಗ್ ನಲ್ಲಿ ರಾಷ್ಟ್ರೀಯ ಮಟ್ಟಕ್ಕೆ ಆಯ್ಕೆಯಾಗಿದ್ದಾನೆ.

## ಕುಮಾರಸ್ವಾಮಿ ಆರೋಪ ರಾಜಕೀಯ ಹತಾಶೆಯ ಪ್ರತೀಕ: ರಮೇಶ್‌ಬಾಬು

● ವಿಕ್ರಮ ವಾಹಿನಿ । ಬೆಂಗಳೂರು

ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಕಾಂಗ್ರೆಸ್ ನಾಯಕರು ಸ್ಟಿಂಗ್ ಆಪರೇಷನ್ ಮೂಲಕ ಮುಖ್ಯಮಂತ್ರಿ ಸ್ಥಾನದಿಂದ ಕೆಳಗಿಳಿಸಿದ್ದಾರೆ ಎಂಬ ಎಚ್.ಡಿ.ಕುಮಾರಸ್ವಾಮಿ ಅವರ ಆರೋಪ ರಾಜಕೀಯ ಪ್ರೇರಿತ ಹಾಗೂ ಆಧಾರರಹಿತವಾಗಿದ್ದು, ಕಾಂಗ್ರೆಸ್‌ನಲ್ಲಿ ಗೊಂದಲ ಸೃಷ್ಟಿಸುವ ಪ್ರಯತ್ನವಾಗಿದೆ ಎಂದು ಕೆಪಿಸಿಸಿ ಮಾಧ್ಯಮ ಮತ್ತು ಸಂವಹನ ವಿಭಾಗದ ಅಧ್ಯಕ್ಷ, ಮಾಜಿ ಎಂಎಲ್‌ಸಿ ರಮೇಶ್‌ಬಾಬು ಹೇಳಿದ್ದಾರೆ.



ರಾಜ್ಯದ ಜನರಿಗೆ ಸಿದ್ದರಾಮಯ್ಯ ಅವರ ರಾಜಕೀಯ ಹಿನ್ನೆಲೆ, ಜನಬೆಂಬಲ ಹಾಗೂ ರಾಜ್ಯಕ್ಕೆ ನೀಡಿರುವ ಕೊಡುಗೆಗಳ ಬಗ್ಗೆ ಸ್ಪಷ್ಟ ಅರಿವಿದೆ. ಅವರ ರಾಜಕೀಯ ಸ್ಥಾನಮಾನ ಯಾವುದೇ ರಹಸ್ಯ ಕಾರ್ಯಾಚರಣೆ ಅಥವಾ ಷಡ್ಯಂತ್ರದ ಮೇಲೆ ಅವಲಂಬಿತವಾಗಿಲ್ಲ. ಕಾಂಗ್ರೆಸ್ ಪ್ರಜಾಸತ್ತಾತ್ಮಕ ಸಂಘಟನೆಯಾಗಿದ್ದು, ಪಕ್ಷದ ಎಲ್ಲ ನಿರ್ಧಾರಗಳನ್ನು ಸಂವಿಧಾನಬದ್ಧ ಹಾಗೂ ಪಕ್ಷದ ನಿಯಮಾವಳಿಗಳ ಪ್ರಕಾರ ಕೈಗೊಳ್ಳಲಾಗುತ್ತದೆ ಎಂದು ಅವರು ತಿಳಿಸಿದ್ದಾರೆ.

ಸ್ವತಃ ಹಲವು ರಾಜಕೀಯ ವಿವಾದಗಳು, ಧ್ವನಿಮುದ್ರಣ, ಫೋನ್ ಕದ್ದಾಲಿಕೆ ಹಾಗೂ ಸ್ಟಿಂಗ್ ಆಪರೇಷನ್‌ಗಳಿಗೆ ಸಂಬಂಧಿಸಿದ ಆರೋಪಗಳನ್ನು ಎದುರಿಸಿರುವ ಕುಮಾರಸ್ವಾಮಿ ಇದೀಗ ಇತರರಿಗೆ ರಾಜಕೀಯ ನೈತಿಕತೆಯ ಪಾಠ ಹೇಳುತ್ತಿರುವುದು ವಿಪರ್ಯಾಸ ಎಂದು ರಮೇಶ್‌ಬಾಬು ಟೀಕಿಸಿದ್ದಾರೆ. ಕುಮಾರಸ್ವಾಮಿ ಅವರ ಇತ್ತೀಚಿನ ಹೇಳಿಕೆಗಳು ಸಿದ್ದರಾಮಯ್ಯ ಅವರ ಬಗ್ಗೆ ಇರುವ ಕಾಳಜಿಗಿಂತ ಬಿಜೆಪಿ ಮಿತ್ರರನ್ನು ಮೆಚ್ಚಿಸುವ ಹಾಗೂ ಕೇಂದ್ರ ಸರ್ಕಾರದಲ್ಲಿನ ತಮ್ಮ ರಾಜಕೀಯ ಸ್ಥಾನವನ್ನು ಭದ್ರಪಡಿಸಿಕೊಳ್ಳುವ ಉದ್ದೇಶ ಹೊಂದಿರುವಂತೆ ಕಾಣುತ್ತಿವೆ. ಕಾಂಗ್ರೆಸ್‌ನೊಳಗೆ ಇಲ್ಲದ ಷಡ್ಯಂತ್ರಗಳನ್ನು ಸೃಷ್ಟಿಸುವ ಬದಲು ಮೊದಲು ತಮ್ಮ ರಾಜಕೀಯ ಮನೆಯನ್ನೇ ಸರಿಪಡಿಸಿಕೊಳ್ಳಲಿ ಎಂದು ಅವರು ಸಲಹೆ ನೀಡಿದ್ದಾರೆ.

ಕಾಂಗ್ರೆಸ್ ನಾಯಕತ್ವದ ಬಗ್ಗೆ ಕುಮಾರಸ್ವಾಮಿ ಅವರಿಂದ ಯಾವುದೇ ಪ್ರಮಾಣಪತ್ರದ ಅಗತ್ಯವಿಲ್ಲ. ಪಕ್ಷ ತನ್ನ ನಾಯಕತ್ವದೊಂದಿಗೆ ಒಗ್ಗಟ್ಟಿನಿಂದಿದ್ದು, ಪ್ರಜಾಸತ್ತಾತ್ಮಕ ಪರಂಪರೆ ಹಾಗೂ ಸಂಘಟನೆಯ ತತ್ವಗಳಿಗೆ ಬದ್ಧವಾಗಿದೆ. ಕಾಂಗ್ರೆಸ್‌ನಲ್ಲಿ ಭಿನ್ನಾಭಿಪ್ರಾಯ ಸೃಷ್ಟಿಸುವ ರಾಜಕೀಯ ಪ್ರೇರಿತ ಪ್ರಯತ್ನಗಳು ಯಶಸ್ವಿಯಾಗುವುದಿಲ್ಲ ಎಂದು ರಮೇಶ್‌ಬಾಬು ಹೇಳಿದ್ದಾರೆ.

## ಜಿಪಂ, ತಾಪಂ ಚುನಾವಣೆಗೆ ಮೀಸಲಾತಿ ಪ್ರಕಟ

● ವಿಕ್ರಮ ವಾಹಿನಿ । ಬೆಂಗಳೂರು

ಹಲವು ವರ್ಷಗಳಿಂದ ಬಾಕಿ ಉಳಿದಿರುವ ಜಿಲ್ಲಾ ಹಾಗೂ ತಾಲೂಕು ಪಂಚಾಯಿತಿ ಚುನಾವಣೆ ನಡೆಸಲು ರಾಜ್ಯ ಸರ್ಕಾರ ಸಿದ್ಧತೆ ಚುರುಕುಗೊಳಿಸಿದೆ. 2027ರ ಜನವರಿ ಮೊದಲ ವಾರದಲ್ಲಿ ಚುನಾವಣೆ ನಡೆಸಲು ಸಚಿವ ಸಂಪುಟ ನಿರ್ಧರಿಸಿರುವ ಬೆನ್ನಲ್ಲೇ, ರಾಜ್ಯದ 1,129 ಜಿಲ್ಲಾ ಪಂಚಾಯಿತಿ ಹಾಗೂ 3,656 ತಾಲೂಕು ಪಂಚಾಯಿತಿ ಸ್ಥಾನಗಳಿಗೆ ವರ್ಗವಾರು ಮೀಸಲಾತಿ ಪ್ರಕಟಿಸಲಾಗಿದೆ.

ಜಿಲ್ಲಾ ಪಂಚಾಯಿತಿಯ 1,129 ಸ್ಥಾನಗಳ ಪೈಕಿ ಪರಿಶಿಷ್ಟ ಜಾತಿಗೆ 225, ಪರಿಶಿಷ್ಟ ಪಂಗಡಕ್ಕೆ 102, ಹಿಂದುಳಿದ ವರ್ಗ ‘ಅ’ಗೆ 183, ಹಿಂದುಳಿದ ವರ್ಗ ‘ಬ’ಗೆ 43 ಹಾಗೂ ಸಾಮಾನ್ಯ ವರ್ಗಕ್ಕೆ 576 ಸ್ಥಾನ ಮೀಸಲಿಡಲಾಗಿದೆ. ಎಸ್‌ಸಿ, ಎಸ್‌ಟಿ, ಹಿಂದುಳಿದ ವರ್ಗ ಹಾಗೂ ಸಾಮಾನ್ಯ ವರ್ಗ ಸೇರಿ ಮಹಿಳೆಯರಿಗೆ ನಿಗದಿತ ಪ್ರಮಾಣದ ಸ್ಥಾನಗಳನ್ನು ಮೀಸಲಿಡಲಾಗಿದೆ.

**ತಾಪಂನ 3,656 ಸ್ಥಾನ:** ತಾಲೂಕು ಪಂಚಾಯಿತಿಯ 3,656 ಸ್ಥಾನಗಳ ಪೈಕಿ ಎಸ್‌ಸಿಗೆ 733, ಎಸ್‌ಟಿಗೆ 394, ಹಿಂದುಳಿದ ವರ್ಗ ‘ಅ’ಗೆ 508, ಹಿಂದುಳಿದ ವರ್ಗ ‘ಬ’ಗೆ 111 ಹಾಗೂ ಸಾಮಾನ್ಯ ವರ್ಗಕ್ಕೆ 1,910 ಸ್ಥಾನಗಳನ್ನು ಮೀಸಲಿಡಲಾಗಿದೆ.

**ಜನವರಿಯಲ್ಲಿ ಚುನಾವಣೆ:** ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅಧ್ಯಕ್ಷತೆಯಲ್ಲಿ ನಡೆದ ಸಚಿವ ಸಂಪುಟ ಸಭೆಯಲ್ಲಿ ಡಿಸೆಂಬರ್‌ನಲ್ಲಿ ಚುನಾವಣಾ ಪ್ರಕ್ರಿಯೆ ಆರಂಭಿಸಿ, ಜನವರಿ ಮೊದಲ ವಾರದಲ್ಲಿ ಜಿಪಂ ಹಾಗೂ ತಾಪಂ ಚುನಾವಣೆ ಪೂರ್ಣಗೊಳಿಸುವ ಕುರಿತು ತೀರ್ಮಾನಿಸಲಾಗಿದೆ. ಜಿಪಂ–ತಾಪಂ ಚುನಾವಣೆ ಬಳಿಕ ಗ್ರಾಮ ಪಂಚಾಯಿತಿ ಚುನಾವಣೆ ನಡೆಸಲು ಸರ್ಕಾರ ಉದ್ದೇಶಿಸಿದೆ.

**ಬ್ಯಾಲೆಟ್ ಬಾಕ್ಸ್ ಬಳಕೆ:** ಈ ಬಾರಿ ಗ್ರಾಮೀಣ ಸ್ಥಳೀಯ ಸಂಸ್ಥೆಗಳ ಚುನಾವಣೆಗಳಲ್ಲಿ ಇವಿಎಂ ಬದಲಿಗೆ ಬ್ಯಾಲೆಟ್ ಪೇಪರ್ ಹಾಗೂ ಮತಪೆಟ್ಟಿಗೆ ಬಳಸಲು ಪಂಚಾಯತ್ ರಾಜ್ ಕಾಯ್ದೆಗೆ ತಿದ್ದುಪಡಿ ಮಾಡಲಾಗಿದೆ. ಹೀಗಾಗಿ ಜಿಪಂ ಹಾಗೂ ತಾಪಂ ಚುನಾವಣೆಗಳ ಸಿದ್ಧತೆ ಆರಂಭವಾಗುತ್ತಿದ್ದಂತೆ ರಾಜಕೀಯ ಪಕ್ಷಗಳಲ್ಲಿ ಟಿಕೆಟ್ ಆಕಾಂಕ್ಷಿಗಳ ಲೆಕ್ಕಾಚಾರವೂ ಚುರುಕುಗೊಳ್ಳುವ ನಿರೀಕ್ಷೆಯಿದೆ.

ಮೀಸಲಾತಿ ಪ್ರಕಟವಾಗಿರುವುದರಿಂದ ಆಯಾ ಕ್ಷೇತ್ರಗಳಲ್ಲಿ ಸ್ಪರ್ಧಿಸಲು ಉತ್ಸುಕರಾಗಿರುವ ಆಕಾಂಕ್ಷಿಗಳು ತಮ್ಮ ರಾಜಕೀಯ ಲೆಕ್ಕಾಚಾರ ಆರಂಭಿಸಿದ್ದಾರೆ. ಪಕ್ಷಗಳ ಸ್ಥಳೀಯ ನಾಯಕರು ಹಾಗೂ ಕಾರ್ಯಕರ್ತರು ಕ್ಷೇತ್ರವಾರು ಅಭ್ಯರ್ಥಿಗಳ ಆಯ್ಕೆ, ಸಾಮಾಜಿಕ ಸಮೀಕರಣ ಮತ್ತು ಗೆಲುವಿನ ಸಾಧ್ಯತೆಗಳ ಕುರಿತು ಚರ್ಚೆ ನಡೆಸುವ ಸಾಧ್ಯತೆಯಿದೆ.

ಚುನಾವಣಾ ಅಧಿಸೂಚನೆ ಪ್ರಕಟವಾದ ಬಳಿಕ ನಾಮಪತ್ರ ಸಲ್ಲಿಕೆ, ಪರಿಶೀಲನೆ, ಹಿಂಪಡೆಯುವಿಕೆ ಸೇರಿದಂತೆ ಚುನಾವಣಾ ವೇಳಾಪಟ್ಟಿ ಸ್ಪಷ್ಟವಾಗಲಿದೆ. ಹಲವು ವರ್ಷಗಳ ಬಳಿಕ ಗ್ರಾಮೀಣ ಸ್ಥಳೀಯ ಸಂಸ್ಥೆಗಳ ಚುನಾವಣೆ ನಡೆಯುತ್ತಿರುವ ಹಿನ್ನೆಲೆಯಲ್ಲಿ ರಾಜಕೀಯ ಪಕ್ಷಗಳಿಗೂ ಈ ಚುನಾವಣೆ ಮಹತ್ವ ಪಡೆದಿದೆ.

## ದಾಖಲಾತಿ ಕುಸಿತ: ಬಾಗಿಲು ಮುಚ್ಚುವ ಹಂತಕ್ಕೆ ಖಾಸಗಿ ಶಾಲೆಗಳು

● ವಿಕ್ರಮ ವಾಹಿನಿ । ಬೆಂಗಳೂರು

ವಿದ್ಯಾರ್ಥಿಗಳ ದಾಖಲಾತಿ ಕುಸಿತದಿಂದ ಬೆಂಗಳೂರು ಸೇರಿದಂತೆ ರಾಜ್ಯದ ಬಜೆಟ್ ಹಾಗೂ ಮಧ್ಯಮ ವರ್ಗದ ಖಾಸಗಿ ಶಾಲೆಗಳು ತೀವ್ರ ಆರ್ಥಿಕ ಸಂಕಷ್ಟಕ್ಕೆ ಸಿಲುಕಿವೆ. ಹೆಚ್ಚುತ್ತಿರುವ ಸಿಬ್ಬಂದಿ ವೇತನ, ವಿದ್ಯುತ್, ನೀರು ಹಾಗೂ ನಿರ್ವಹಣಾ ವೆಚ್ಚದ ನಡುವೆ ಶುಲ್ಕದ ಆದಾಯ ಇಳಿಕೆಯಾಗಿರುವುದು ಶಾಲಾ ಆಡಳಿತ ಮಂಡಳಿಗಳಿಗೆ ಸವಾಲಾಗಿದೆ. ಪರಿಣಾಮವಾಗಿ ಹಲವು ಶಾಲೆಗಳು ಮುಚ್ಚುವ ಅಥವಾ ಮಾರಾಟವಾಗುವ ಹಂತಕ್ಕೆ ತಲುಪಿವೆ.

ಕಾರ್ಪೊರೇಟ್ ಶಾಲೆಗಳ ಸ್ಪರ್ಧೆ, ಮಕ್ಕಳ ಜನನ ಪ್ರಮಾಣದಲ್ಲಿನ ಕುಸಿತ ಹಾಗೂ ಹೆಚ್ಚುತ್ತಿರುವ ಶಾಲೆಗಳ ಸಂಖ್ಯೆಯಿಂದ ದಾಖಲಾತಿ ಮೇಲೆ ಪರಿಣಾಮ ಬೀರಿದೆ. ಕಳೆದ ಶೈಕ್ಷಣಿಕ ವರ್ಷಕ್ಕೆ ಹೋಲಿಸಿದರೆ ಕೆಲವು ಶಾಲೆಗಳಲ್ಲಿ ದಾಖಲಾತಿ ಶೇ.40ರವರೆಗೆ ಇಳಿಕೆಯಾಗಿದೆ ಎನ್ನಲಾಗಿದೆ.

ರಾಜ್ಯದಲ್ಲೂ ವಿದ್ಯಾರ್ಥಿಗಳ ಸಂಖ್ಯೆ ನಿರಂತರವಾಗಿ ಕಡಿಮೆಯಾಗುತ್ತಿದೆ. 2023–24ರಲ್ಲಿ ಸರ್ಕಾರಿ ಶಾಲೆಗಳಲ್ಲಿ 1,19,26,303 ವಿದ್ಯಾರ್ಥಿಗಳಿದ್ದರೆ, 2024–25ರಲ್ಲಿ ಈ ಸಂಖ್ಯೆ 1,17,80,251ಕ್ಕೆ ಇಳಿದಿದೆ. ಕಳೆದ 15 ವರ್ಷಗಳಲ್ಲಿ ಸರ್ಕಾರಿ ಶಾಲೆಗಳ ದಾಖಲಾತಿಯಲ್ಲಿ ಶೇ.30ರಷ್ಟು, ಸುಮಾರು 17 ಲಕ್ಷ ವಿದ್ಯಾರ್ಥಿಗಳಷ್ಟು ಕುಸಿತ ಕಂಡಿದೆ ಎನ್ನಲಾಗಿದೆ. ಇದೀಗ ಇದರ ಪರಿಣಾಮ ಬಜೆಟ್ ಖಾಸಗಿ ಶಾಲೆಗಳ ಮೇಲೂ ತೀವ್ರವಾಗಿ ಕಾಣಿಸಿಕೊಳ್ಳುತ್ತಿದೆ.

ಪೋಷಕರ ಆದ್ಯತೆಗಳಲ್ಲಿ ಬದಲಾವಣೆ ಹಾಗೂ ಮಕ್ಕಳ ಶಿಕ್ಷಣಕ್ಕಾಗಿ ಹೆಚ್ಚುತ್ತಿರುವ ವೆಚ್ಚವೂ ಬಜೆಟ್ ಶಾಲೆಗಳ ದಾಖಲಾತಿ ಮೇಲೆ ಪರಿಣಾಮ ಬೀರುತ್ತಿದೆ.

ದಾಖಲಾತಿ ಕುಸಿತ ಮುಂದುವರಿದರೆ ಸಣ್ಣ ಹಾಗೂ ಮಧ್ಯಮ ಪ್ರಮಾಣದ ಖಾಸಗಿ ಶಾಲೆಗಳ ಅಸ್ತಿತ್ವದ ಮೇಲೆಯೇ ಪರಿಣಾಮ ಬೀರುವ ಸಾಧ್ಯತೆಯಿದೆ. ಶಾಲೆಗಳ ಗುಣಮಟ್ಟ ಸುಧಾರಣೆ, ಶುಲ್ಕ ನಿಯಂತ್ರಣ ಹಾಗೂ ವಿದ್ಯಾರ್ಥಿಗಳನ್ನು ಆಕರ್ಷಿಸುವ ಕ್ರಮಗಳ ಅಗತ್ಯವಿದೆ ಎಂದು ಶಿಕ್ಷಣ ಕ್ಷೇತ್ರದವರು ಅಭಿಪ್ರಾಯಪಟ್ಟಿದ್ದಾರೆ.

## ಬಾಕಿ ವೇತನ, ಶೇ.25ರಷ್ಟು ವೇತನ ಹೆಚ್ಚಳಕ್ಕೆ ಸಾರಿಗೆ ನೌಕರರ ಆಗ್ರಹ

● ವಿಕ್ರಮ ವಾಹಿನಿ । ಬೆಂಗಳೂರು



**ವೇತನ ಪರಿಷ್ಕರಣೆ, 26 ತಿಂಗಳ 652 ಕೋಟಿ ಬಾಕಿ ವೇತನ ಪಾವತಿ ಹಾಗೂ ಶೇ.25ರಷ್ಟು ವೇತನ ಹೆಚ್ಚಳ ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ನಾಲ್ಕು ಸಾರಿಗೆ ನಿಗಮಗಳ ನೌಕರರ ಜಂಟಿ ಕ್ರಿಯಾ ಸಮಿತಿ ಬುಧವಾರ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಒಂದು ದಿನದ ಸಂಕೇತಿಕ ಧರಣಿ ನಡೆಸಿತು. ನೂರಾರು ನೌಕರರು ಹಾಗೂ ನಿವೃತ್ತರು ಪಾಲ್ಗೊಂಡ ಧರಣಿಯಲ್ಲಿ, ನಿವೃತ್ತರಿಗೆ ಕನಿಷ್ಠ 7,500 ಮೂಲ ಪಿಂಚಣಿ ಮತ್ತು ವೈದ್ಯಕೀಯ ಭತ್ಯೆ ನೀಡಬೇಕು ಎಂದು ಒತ್ತಾಯಿಸಿ, ಬೇಡಿಕೆ ಈಡೇರಿಸದಿದ್ದರೆ ಹೋರಾಟ ತೀವ್ರಗೊಳಿಸುವ ಎಚ್ಚರಿಕೆ ನೀಡಲಾಯಿತು.**

ವೇತನ ಪರಿಷ್ಕರಣೆ, ಬಾಕಿ ವೇತನ ಪಾವತಿ ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ನಾಲ್ಕು ಸಾರಿಗೆ ನಿಗಮಗಳ ಕಾರ್ಮಿಕರ ಜಂಟಿ ಕ್ರಿಯಾ ಸಮಿತಿ ವತಿಯಿಂದ ಬುಧವಾರ ನಗರದ ಫ್ರೀಡಂ ಪಾರ್ಕ್‌ನಲ್ಲಿ ಒಂದು ದಿನದ ಸಂಕೇತಿಕ ಧರಣಿ ನಡೆಯಿತು.

ಬೆಳಿಗ್ಗೆ 11ರಿಂದ ಸಂಜೆ 4ರವರೆಗೆ ನಡೆದ ಧರಣಿಯಲ್ಲಿ ನೂರಾರು ಸಾರಿಗೆ ನೌಕರರು ಹಾಗೂ ನಿವೃತ್ತ ನೌಕರರು ಪಾಲ್ಗೊಂಡು ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿದರು. ವಿಶೇಷವಾಗಿ 2020ರಲ್ಲಿ ಸೇವೆ ಸಲ್ಲಿಸಿ ನಿವೃತ್ತರಾದ ನೌಕರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, 12 ತಿಂಗಳ ಬಾಕಿ ವೇತನ ಸೇರಿದಂತೆ ತಮಗೆ ಬರಬೇಕಿರುವ ಎಲ್ಲ ಹಣವನ್ನು ಕೂಡಲೇ ಪಾವತಿಸುವಂತೆ ಒತ್ತಾಯಿಸಿದರು.

**ಶೇ.25ರಷ್ಟು ವೇತನ ಹೆಚ್ಚಳ:** 2024ರ ಜ.1ರಿಂದ ಅನ್ವಯವಾಗುವಂತೆ 2023ರ ಡಿ.31ರಂದು ಚಾಲ್ತಿಯಲ್ಲಿದ್ದ ಮೂಲ ವೇತನದ ಮೇಲೆ ಶೇ.25ರಷ್ಟು ಹೆಚ್ಚಳ ಜಾರಿಗೊಳಿಸಬೇಕು. 2022ರ ಜು.1ರಂದು ಇದ್ದ ಶೇ.31ರಷ್ಟು ತುಟ್ಟಿ ಭತ್ಯೆಯನ್ನು ಮೂಲ ವೇತನದಲ್ಲಿ ವಿಲೀನಗೊಳಿಸಿ, ಹೊಸ ವೇತನ ಶ್ರೇಣಿ ರೂಪಿಸಬೇಕು ಎಂದು ನೌಕರರು ಆಗ್ರಹಿಸಿದರು.

ಮಂಜೂರಾಗಿರುವ 26 ತಿಂಗಳ 652 ಕೋಟಿ ಹಿಂಬಾಕಿ ವೇತನವನ್ನು ಒಂದೇ ಕಂತಿನಲ್ಲಿ ಪಾವತಿಸಬೇಕು. ಬಾಟಾ ಸೇರಿದಂತೆ ವಿವಿಧ ಭತ್ಯೆಗಳನ್ನು ಹೆಚ್ಚಿಸುವುದು, ತಾಂತ್ರಿಕ ಸಿಬ್ಬಂದಿಗೆ ಉತ್ಪಾದನಾ ಪ್ರೋತ್ಸಾಹಧನ ನೀಡುವುದು ಹಾಗೂ ಫಾರಂ–4, ವೈದ್ಯಕೀಯ ಸೌಲಭ್ಯ ಸೇರಿದಂತೆ ಹಲವು ಬೇಡಿಕೆಗಳನ್ನು ಈಡೇರಿಸಬೇಕು ಎಂದು ಒತ್ತಾಯಿಸಿದರು.

**ನಿವೃತ್ತರಿಗೂ ಸೌಲಭ್ಯ:** ಶಕ್ತಿ ಯೋಜನೆಯಡಿ ಸಾರಿಗೆ ನಿಗಮಗಳಿಗೆ ಸರ್ಕಾರದಿಂದ ಬರಬೇಕಿರುವ ಬಾಕಿ ಹಣವನ್ನು ಒಂದೇ ಕಂತಿನಲ್ಲಿ ಬಿಡುಗಡೆ ಮಾಡಬೇಕು. ನಿವೃತ್ತ ನೌಕರರ ಎಲ್ಲ ಬಾಕಿಗಳನ್ನು ತಕ್ಷಣ ಪಾವತಿಸುವುದರ ಜೊತೆಗೆ ಕನಿಷ್ಠ 7,500 ಮೂಲ ಮಾಸಿಕ ಪಿಂಚಣಿ ಹಾಗೂ ವೈದ್ಯಕೀಯ ಭತ್ಯೆ ನೀಡಬೇಕು ಎಂದು ಆಗ್ರಹಿಸಿದರು. ಹೆಚ್ಚಿನ ಸಂಖ್ಯೆಯಲ್ಲಿ ನಿವೃತ್ತ ನೌಕರರು ಧರಣಿಯಲ್ಲಿ ಪಾಲ್ಗೊಂಡಿದ್ದರಿಂದ ಸಾರಿಗೆ ಸೇವೆಯಲ್ಲಿ ಹೆಚ್ಚಿನ ವ್ಯತ್ಯಯ ಉಂಟಾಗಲಿಲ್ಲ. ಆದರೆ ಬೇಡಿಕೆಗಳನ್ನು ಶೀಘ್ರ ಈಡೇರಿಸದಿದ್ದರೆ ಮುಂದಿನ ದಿನಗಳಲ್ಲಿ ಮತ್ತಷ್ಟು ತೀವ್ರ ಹೋರಾಟ ನಡೆಸಲಾಗುವುದು ಎಂದು ಜಂಟಿ ಕ್ರಿಯಾ ಸಮಿತಿ ಸರ್ಕಾರಕ್ಕೆ ಎಚ್ಚರಿಕೆ ನೀಡಿದೆ.

ಕೆ.ಎಸ್.ಆರ್.ಟಿ.ಸಿ. ಸ್ಟಾಫ್ ಅಂಡ್ ವರ್ಕರ್ಸ್ ಫೆಡರೇಷನ್ ಅಧ್ಯಕ್ಷೆ ಜ್ಯೋತಿ ಅನಂತಕುಮಾರ್, ಬಿ. ಜಯದೇವರಾಜೇ ಅರಸು, ಎಚ್.ಡಿ. ರೇವಪ್ಪ, ಗಂಡಸಿ ಸದಾನಂದ ಸ್ವಾಮಿ ಸೇರಿದಂತೆ ಹಲವು ಮುಖಂಡರು ಧರಣಿಯಲ್ಲಿ ಪಾಲ್ಗೊಂಡಿದ್ದರು.

Vikrama Vahini Kannada Daily, #204, Forest Layout, Jnanabharathi, Bangalore-560095
PRGI NO: KARKAN/2018/78481 vikramavahini@gmail.com
93535 91145
Printed by B.N. Murali Prasad, Published by Swarna Latha B.N., and Printed at Swarna Graphics, Forest Layout, Jnanabharathi, Bangalore -560059 and Published at Bangalore, Editor: B.N. Murali Prasad., Volume:9, Issue : 183,